ಸಂಪುಟ: 21, ಸಂಚಿಕೆ: 343, ಪುಟಗಳು: 8, ಶುಕ್ರವಾರ, 20 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಯಾವುದೇ ಫಲಾಪೇಕ್ಷೆಯಿಲ್ಲದೆ ಎಲ್ಲರಿಗೂ ಒಳ್ಳೆಯದನ್ನು ಬಯಸಿ. ಸಾಧ್ಯವಾದಷ್ಟು ಒಳ್ಳೆಯದನ್ನು ಮಾಡಿ. ಏಕೆಂದರೆ ಹೂ ಮಾರುವವರ ಕೈಯಲ್ಲಿ ಯಾವಾಗಲೂ ಹೂವಿನ ಸುವಾಸನೆ ಇರುತ್ತದೆ.

### ಪಂಚಾಂಗ

(ಶುಕ್ರವಾರ 20, ಸೆಪ್ಟೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಭಾದ್ರಪದ ಮಾಸ, ಕೃಷ್ಣಪಕ್ಷ,
- ತೃತೀಯ, ಶುಕ್ರವಾರ,
- ಅಶ್ವಿನಿ ನಕ್ಷತ್ರ
- ರಾಹುಕಾಲ: 10:45 ರಿಂದ 12:16
- ಗುಳಿಕಕಾಲ: 07:43 ರಿಂದ 09:14
- ಯಮಗಂಡ ಕಾಲ: 03:18 ರಿಂದ 04:49




## ಸಂಕ್ಷಿಪ್ತ ಸುದ್ದಿ

### ಚೀನಾದ ಮಾರುಕಟ್ಟೆಯಲ್ಲಿರಿಸಿದ್ದ ವನ್ಯಜೀವಿಗಳಿಂದ ಹರಡಿತೇ ಕೊರೊನಾ ಸೋಂಕು?



**ನವದೆಹಲಿ:** 2019ರ ಡಿಸೆಂಬರ್‌ನಲ್ಲಿ ಚೀನಾದಲ್ಲಿ ಮೊದಲು ಪತ್ತೆಯಾಗಿ ನಂತರ ವಿಶ್ವವನ್ನೆಲ್ಲಾ ಆವರಿಸಿಕೊಂಡು 64 ಲಕ್ಷ ಮಂದಿಯ ಸಾವಿಗೆ ಕಾರಣವಾದ ಕೊರೊನಾ ವೈರಸ್ ನಿಜವಾಗಿಯೂ ಹುಟ್ಟಿದ್ದೆಲ್ಲಿಂದ ಹೊಸ ಅಧ್ಯಯನಗಳ ಪ್ರಕಾರ, ಚೀನಾದ ವುಹಾನ್‌ನಲ್ಲಿನ ಮಾರುಕಟ್ಟೆಯಿಂದಲೇ ಸೋಂಕು ಜನರಿಗೆ ಹರಡಿದೆ ಎಂಬುಉದ ತಿಳಿದುಬಂದಿದೆ. ಅರ್ಥಾತ್ ಅಲ್ಲಿನ ಪ್ರಾಣಿಗಳಿಂದ ಉದ್ಯೋಗಿಗಳಿಗೆ ಮೊದಲು ತಗುಲಿ, ಅನಂತರ ಎಲ್ಲರನ್ನೂ ವ್ಯಾಪಿಸಿಕೊಂಡಿದೆ. ವುಹಾನ್ ಮಾರುಕಟ್ಟೆಯಲ್ಲಿ ಜೀವಂತ ಪ್ರಾಣಿಗಳನ್ನು ಮಾರಲಾಗುತ್ತಿತ್ತು. ಚೀನಾದ ಮಾರುಕಟ್ಟೆಯಲ್ಲಿ ವನ್ಯಪ್ರಾಣಿಗಳನ್ನು ಕೂಡ ಇರಿಸಲಾಗಿತ್ತು ಅವುಗಳಿಂದಲೇ ಸೋಂಕು ತಗುಲಿರಬಹುದು ಎಂದು ಪುಟ 2

### ರಾಂಗ್ ಸೈಡ್ ನಿಂದ ಬಂದು ಬೈಕ್‌ಗೆ ಡಿಕ್ಕಿ ಹೊಡೆದ ಕಾರು



**ನವದೆಹಲಿ:** ಕಾರು ಚಾಲಕನೊಬ್ಬ ರಾಂಗ್ ಸೈಡ್ ನಲ್ಲಿ ಬಂದು ಬೈಕ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಗುರುಗ್ರಾಮದಲ್ಲಿ ನಡೆದಿದೆ. ಗುರುಗ್ರಾಮದ ಡಿಎಲ್ ಎಫ್ 2ನೇ ಹಂತದ ಗಾಲ್ಫ್ ಕೋರ್ಸ್ ರಸ್ತೆಯಲ್ಲಿ ಈ ಘಟನೆ ನಡೆದಿದೆ. ನವದೆಹಲಿಯ ದ್ವಾರಕಾದ ಪೋಚನ್‌ಪುರದ ಅಕ್ಷತ್ ಗಾರ್ಗ್ ಎಂದು ಗುರುತಿಸಲಾದ ಬೈಕ್ ಸವಾರ ತನ್ನ ಬೈಕ್ ನಲ್ಲಿ ಹೆಲ್ಮೆಟ್ ಮತ್ತು ಕೈಗವಸು ಸೇರಿದಂತೆ ಎಲ್ಲವನ್ನೂ ಧರಿಸಿದ್ದ. ಆತನ ಸ್ನೇಹಿತ ಪ್ರದ್ಯುಮನ್ ಕುಮಾರ್ ಆತನ ಹಿಂದೆ ಮತ್ತೊಂದು ಮೋಟಾರ್ ಸೈಕಲ್ ನಲ್ಲಿ ಹೋಗುತ್ತಿದ್ದ. ಪುಟ 2

## ಶಾಸಕರ ಬಳಿ ಇದೆ ಹಲವರ ಖಾಸಗಿ ವಿಡಿಯೋ, ಎದುರಾಳಿಗಳ ಹಣಿಯಲು ಬಳಕೆ

# ಮುನಿರತ್ನ ಮತ್ತೆ ಅರೆಸ್ಟ್

**ಬೆಂಗಳೂರು:** ಗುತ್ತಿಗೆದಾರನಿಗೆ ಬೆದರಿಕೆ ಹಾಕಿದ ಹಾಗೂ ಜಾತಿ ನಿಂದನೆ ಮಾಡಿದ ಪ್ರಕರಣದಲ್ಲಿ ಜಾಮೀನು ಪಡೆದು ಹೊರಬಂದಿದ್ದ ಆರ್‌ಆರ್‌ನಗರ ಬಿಜೆಪಿ ಶಾಸಕ ಮುನಿರತ್ನ ಅವರನ್ನು ಅತ್ಯಾಚಾರ ಪ್ರಕರಣದಲ್ಲಿ ರಾಮನಗರದ ಕಗ್ಗಲೀಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ. 2020 ರಿಂದ 2022ರವರೆಗೆ ಶಾಸಕ ಮುನಿರತ್ನ ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ ಮತ್ತು ಬ್ಲ್ಯಾಕ್ ಮೇಲ್ ಮಾಡಿದ್ದಾರೆ ಎಂದು ರಾಜರಾಜೇಶ್ವರಿ ನಗರದ 40 ವರ್ಷದ ಮಹಿಳೆ ದೂರು ದಾಖಲಿಸಿದ್ದಾರೆ.

ಸಂತ್ರಸ್ತೆ ದೂರಿನ ಆಧಾರದ ಮೇಲೆ ರಾಮನಗರ ಜಿಲ್ಲೆಯ ಕಗ್ಗಲೀಪುರ ಠಾಣೆ ಪೊಲೀಸರು ಶಾಸಕ ಮುನಿರತ್ನ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಈ ಪ್ರಕರಣ ಸಂಬಂಧ ಕಗ್ಗಲೀಪುರ ಠಾಣೆ ಪೊಲೀಸರು ಶಾಸಕ ಮುನಿರತ್ನ ಅವರನ್ನು ಬಂಧಿಸಿದ್ದಾರೆ.

**ಬೆದರಿಕೆ, ಜಾತಿ ನಿಂದನೆ ಮೇಲೆ ಜೈಲು ಸೇರಿದ್ದ ಮುನಿರತ್ನ:** ಬಿಬಿಎಂಪಿ ತ್ಯಾಜ್ಯ ವಿಲೇವಾರಿ ಗುತ್ತಿಗೆಯಲ್ಲಿ ಕಮಿಷನ್ ನೀಡುವಂತೆ ಗುತ್ತಿಗೆದಾರ ಚಲುವರಾಜ್ ಅವರಿಗೆ ಜೀವ ಬೆದರಿಕೆ ಹಾಕಿ ನಿಂದಿಸಿದ ಹಾಗೂ ಜಾತಿ ನಿಂದನೆ ಮಾಡಿದ ಆರೋಪದ ಮೇರೆಗೆ ವೈಯಾಲಿಕಾವಲ್ ಠಾಣೆಯಲ್ಲಿ ಮುನಿರತ್ನ ವಿರುದ್ಧ ಪ್ರತ್ಯೇಕ ಎಫ್ ಐಆರ್ ದಾಖಲಾಗಿದ್ದವು.

ಈ ಕೃತ್ಯ ಬೆಳಕಿಗೆ ಬಂದ ನಂತರ ನಗರ ತೊರೆದು ಆಂಧ್ರ ಪ್ರದೇಶದತ್ತ ಹೊರಟಿದ್ದ ಮುನಿರತ್ನ ಅವರನ್ನು ಕೋಲಾರ ಜಿಲ್ಲೆ ಮುಳಬಾಗಿಲು ಸಮೀಪ ಶನಿವಾರ ಪೊಲೀಸರು ಬಂಧಿಸಿದ್ದರು. ಈ ಪ್ರಕರಣದ ಪೊಲೀಸರ ವಿಚಾರಣೆ ಮುಗಿದು ಮಾಜಿ ಸಚಿವರು ಜೈಲು ಸೇರಿದ ಬೆನ್ನಲ್ಲೇ ಶಾಸಕರ ವಿರುದ್ಧ ಅತ್ಯಾಚಾರ ಹಾಗೂ ಹನಿಟ್ರ್ಯಾಪ್ ಆರೋಪಗಳು ಕೇಳಿ ಬಂದಿವೆ. ಈ ಪ್ರಕರಣದಲ್ಲಿ ಮುನಿರತ್ನ ಅವರನ್ನು ಬಂಧಿಸಲಾಗಿದೆ.

**ಅಟ್ರಾಸಿಟಿ ಕೇಸ್ ದುರ್ಬಳಕೆಯ ಆರೋಪ:** ರಾಜಕೀಯ ಎದುರಾಳಿಗಳ ಹಣಿಯಲು ಮುನಿರತ್ನ ಅಟ್ರಾಸಿಟಿ ಕೇಸ್ ಗಳ ದುರ್ಬಳಕೆ ಮಾಡುತ್ತಿದ್ದರು ಎಂಬ ಆರೋಪವೂ ಈಗ ಕೇಳಿಬಂದಿದೆ. ಮುನಿರತ್ನ ಅಟ್ರಾಸಿಟಿ ಕೇಸ್ ಗಳನ್ನೇ ದಾಳವನ್ನಾಗಿ ಬಳಸಿಕೊಳ್ಳುತ್ತಿದ್ದರು. ಹಣ ಕೊಟ್ಟು ಪ್ರಭಾವ ಬಳಸಿ ಅಟ್ರಾಸಿಟಿ ಕೇಸ್ ಗಳನ್ನು ದಾಖಲಿಸುತ್ತಿದ್ದರು. ಈ ಹಿಂದೆ ಆರ್ ಆರ್ ನಗರದಲ್ಲಿ ಹಲವರ ವಿರುದ್ಧ ಅಟ್ರಾಸಿಟಿ ಕೇಸ್ ಗಳು ದಾಖಲಾಗಿದ್ದವು ಎಂದು ಮೂಲಗಳು ತಿಳಿಸಿವೆ.



### ದೂರಿನಲ್ಲಿ ಉಲ್ಲೇಖ

ಗುತ್ತಿಗೆದಾರನಿಗೆ ಜೀವ ಬೆದರಿಕೆ ಹಾಕಿದ, ಜಾತಿ ನಿಂದನೆ ಹಾಗೂ ಅತ್ಯಾಚಾರ ಪ್ರಕರಣ ಎದುರಿಸುತ್ತಿರುವ ಬಿಜೆಪಿ ಶಾಸಕ ಮುನಿರತ್ನ ಅಕ್ರಮಗಳಿಗೆ ಸಂಬಂಧಿಸಿದ ಒಂದೊಂದೇ ವಿಚಾರಗಳು ಇದೀಗ ಬೆಳಕಿಗೆ ಬರುತ್ತಿದೆ. ಮುನಿರತ್ನ ನಾಯ್ಡು ಬಳಿ ಹಲವರ ಖಾಸಗಿ ಅಶ್ಲೀಲ ವಿಡಿಯೋಗಳಿವೆ ಎಂದು ಅತ್ಯಾಚಾರ ಸಂತ್ರಸ್ತೆ ನೀಡಿರುವ ದೂರಿನಲ್ಲಿ ಉಲ್ಲೇಖವಾಗಿದೆ.

ರಾಜಕೀಯ ಎದುರಾಳಿಗಳ ಹಣಿಯಲು ಮುನಿರತ್ನ ಹನಿಟ್ರ್ಯಾಪ್ ಷಡ್ಯಂತ್ರ ಹೂಡುತ್ತಿದ್ದರು. ಅತ್ಯಾಚಾರ ಸಂತ್ರಸ್ತೆ ಮೂಲಕ ಹನಿಟ್ರ್ಯಾಪ್‌ಗೆ ಯತ್ನಿಸಿದ್ದರು. ಹನಿಟ್ರ್ಯಾಪ್‌ಗೆ ಅಮಾಯಕ ಹೆಚ್ ಐವಿ ಸೋಂಕಿತರನ್ನೂ ಬಳಸಾಗುತ್ತಿತ್ತು ಎಂಬ ಗಂಭೀರ ಆರೋಪಗಳು ಇದೀಗ ಕೇಳಿಬಂದಿವೆ. ಈ ಬಗ್ಗೆ ಸಂತ್ರಸ್ತೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## ಸಿಎಂಗೆ ಮತ್ತೊಂದು ಮುಡಾ ಸಂಕಷ್ಟ!

### 450 ಕೋಟಿ ಹಣ ಪೋಲು ಅಂತ ರಾಜ್ಯಪಾಲರಿಗೆ ದೂರು

**ಮೈಸೂರು:** ಮುಡಾ ಸೈಟ್ ಹಂಚಿಕೆ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಈಗಾಗಲೇ ಕಾನೂನು ಕಂಟಕ ಎದುರಿಸುತ್ತಿದ್ದಾರೆ. ಸಿಎಂ ವಿರುದ್ಧ ಪ್ರಾಸಿಕ್ಯೂಶನ್‌ಗೆ ರಾಜ್ಯಪಾಲರು ಅನುಮತಿ ನೀಡಿದ್ದು, ಸದ್ಯ ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿದೆ. ಇದರ ನಡುವೆಯೇ ಸಿಎಂ ಸಿದ್ದರಾಮಯ್ಯಗೆ ಮುಡಾ ವಿಚಾರದಲ್ಲೇ ಮತ್ತೊಂದು ಸಂಕಷ್ಟ ಎದುರಾಗಿದೆ. ಮುಡಾ ಕಾಮಗಾರಿ ಕುರಿತು ರಾಜ್ಯಪಾಲರಿಗೆ ಸಿದ್ದರಾಮಯ್ಯ ವಿರುದ್ಧ ಮತ್ತೊಂದು ದೂರು ನೀಡಲಾಗಿದೆ. ಮುಡಾ ನಿವೃತ್ತ ಸಿಬ್ಬಂದಿ ನಟರಾಜ್ ಎಂಬುವರು ಸಿಎಂ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿದ್ದು, ನಿಯಮ ಬಾಹಿರವಾಗಿ ನಡೆದಿರುವ ಕಾಮಗಾರಿಗಳಿಗೆ ಸಿಎಂ ಸಿದ್ದರಾಮಯ್ಯ ಮೌಖಿಕ ಆದೇಶ ಇದೇ ಎಂಬ ವಿಚಾರಕ್ಕೆ ಆಕ್ಷೇಪಿಸಿದ್ದು, ಈ ಪ್ರಕರಣ ಸಂಬಂದ ಸಿಬಿಐನಿಂದ ತನಿಖೆ ನಡೆಯುವಂತೆ ರಾಜ್ಯಪಾಲರಿಗೆ ಮನವಿ ಮಾಡಿದ್ದಾರೆ.



**ಮುಡಾದಲ್ಲಿ 450 ಕೋಟಿಗೂ ಅಧಿಕ ಹಣ ಪೋಲು!:** ಹೀಗಂತ ದೂರುದಾರ ನಟರಾಜ್ ಗಂಭೀರ ಆರೋಪ ಮಾಡಿದ್ದಾರೆ. ಮುಡಾದಲ್ಲಿ 450 ಕೋಟಿಗೂ ಅಧಿಕ ಹಣ ಅಕ್ರಮ ಕಾಮಗಾರಿಗೆ ಪೋಲಾಗಿದೆ. ಸಿಎಂ ಪ್ರತಿನಿಧಿಸುವ ಮೈಸೂರು ಜಿಲ್ಲೆಯ ವರುಣ ವಿಧಾನಸಭಾ ಕ್ಷೇತ್ರ ಹಾಗೂ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನಿಯಮ ಬಾಹಿರವಾಗಿ ಕಾಮಗಾರಿ ನಡೆಸಲು ಹೊರಟಿದ್ದಾರೆ ಅಂತ ಆರೋಪಿಸಿದ್ದಾರೆ.

**ವರುಣಾಕ್ಕೆ 40 ಕೋಟಿ, ಶ್ರೀರಂಗಪಟ್ಟಣಕ್ಕೆ 15 ಕೋಟಿ ಹಣ:** ವರುಣಾ ವಿಧಾನಸಭಾ ಕ್ಷೇತ್ರಕ್ಕೆ 40 ಕೋಟಿ ಹಣ, ಶ್ರೀರಂಗಪಟ್ಟಣ ಕ್ಷೇತ್ರಕ್ಕೆ 15 ಕೋಟಿ ಹಣಕ್ಕೆ ಕ್ಯಾಬಿನೆಟ್‌ನಿಂದ ಒಪ್ಪಿಗೆ ಪಡೆಯಲಾಗಿದೆ. ಆಯುಕ್ತರು ಈ ಕಾಮಗಾರಿ ನಡೆಸುವಾಗ ಮುಖ್ಯಮಂತ್ರಿಗಳ ಮೌಖಿಕ ಆದೇಶದ ಮೇರೆಗೆ ನಡೆಸುತ್ತಿರುವ ಕಾಮಗಾರಿಗಳು ಎಂದು ಉಲ್ಲೇಖಿಸಿದ್ದಾರೆ. ಆದ್ರೆ ಇದಕ್ಕೆ ಕ್ಯಾಬಿನೆಟ್‌ನಲ್ಲಿ ಒಪ್ಪಿಗೆ ಕೊಡಲು ಅವಕಾಶವೇ ಇಲ್ಲ. ಕರ್ನಾಟಕ ನಗರಾಭಿವೃದ್ಧಿ ಕಾಯ್ದೆಯಲ್ಲಿ ಇದಕ್ಕೆ ಅವಕಾಶವಿಲ್ಲ ಅಂತ ನಟರಾಜ್ ಸ್ಪಷ್ಟಪಡಿಸಿದ್ದಾರೆ.



**ಮುಖ್ಯಮಂತ್ರಿಗಳು ಮೌಖಿಕ ಆದೇಶ ನೀಡಿದ್ದಾರೆ:** ಮುಡಾ ಕೇವಲ ನಗರ ವ್ಯಾಪ್ತಿಯಲ್ಲಿ ಮಾತ್ರ ಕಾಮಗಾರಿ ಮಾಡ್ಬೇಕು. ಇಲ್ಲಿ ಯಾರನ್ನು ಮೆಚ್ಚಿಸಲು ಗ್ರಾಮಾಂತರ ಭಾಗದಲ್ಲಿ ಅಧಿಕಾರಿಗಳು ಕಾಮಗಾರಿ ಕೈಗೆತ್ತಿಗೊಂಡಿದ್ದಾರೆ? ಇದಕ್ಕೆ ಮುಡಾ ಹಿಂದಿನ ಆಯುಕ್ತ ದಿನೇಶ್ ಕುಮಾರ್, ಮುಡಾ ಸಭೆ ಅಧ್ಯಕ್ಷತೆ ವಹಿಸಿಕೊಂಡಿದ್ದ ಜಿಲ್ಲಾಧಿಕಾರಿ ರಾಜೇಂದ್ರ, ಹೊಣೆಗಾರರು ಅಂತ ನಟರಾಜ್ ಆರೋಪಿಸಿದ್ದಾರೆ. ಅಧಿಕಾರಿಗಳು ಹೇಳಿರುವಂತೆ ಮುಖ್ಯಮಂತ್ರಿಗಳ ಮೌಖಿಕ ಆದೇಶ ನೀಡಿದ್ದಾರೆ. ಅದು ಹೇಗೆ ಎಂಬುದನ್ನು ಸಿಎಂ ಸ್ಪಷ್ಟ ಪಡಿಸಬೇಕು. ಸಮಗ್ರ ತನಿಖೆಗೆ ಸಿಬಿಐಗೆ ಪ್ರಕರಣ ತನಿಖೆ ವಹಿಸುಬೇಕು ಎಂದು ನನ್ನ ದೂರು. ಈ ಮೂಲಕ ನಗರಾಭಿವದ್ದಿಗಾಗಿ ಮೀಸಲಿಟ್ಟ ಹಣ ಪೋಲಾಗದಂತೆ ಕಾಪಾಡಬೇಕು ಅಂತ ನಟರಾಜ್ ಆಗ್ರಹಿಸಿದ್ದಾರೆ.

## ಕುಮಾರಸ್ವಾಮಿಗೆ ಬಿಗ್ ಶಾಕ್

### ಚನ್ನಪಟ್ಟಣದಲ್ಲಿ ಜೆಡಿಎಸ್ ಅಸ್ತಿತ್ವಕ್ಕೆ ಭಾರೀ ಪೆಟ್ಟು ಕೊಟ್ಟ ಡಿಕೆ ಬ್ರದರ್ಸ್?!

**ರಾಮನಗರ:** ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಸದ್ಯದಲ್ಲೇ ಉಪ ಚುನಾವಣೆ ನಡೆಯಲಿದೆ. ಈ ಹಿನ್ನೆಲೆ ಮೈತ್ರಿ ಪಡೆಯ ಟಿಕೆಟ್‌ಗಾಗಿ ಭಾರೀ ಚರ್ಚೆಯಾಗುತ್ತಿದೆ. ಇದರ ನಡುವೆಯೇ ಜೆಡಿಎಸ್‌ಗೆ ಬಿಗ್ ಶಾಕ್ ಕೊಟ್ಟಿರುವ ಡಿಕೆ ಬ್ರದರ್ಸ್, ಚನ್ನಪಟ್ಟಣ ನಗರಸಭೆಯ ಜೆಡಿಎಸ್ ಸದಸ್ಯರನ್ನು ಕಾಂಗ್ರೆಸ್ ಗೆ ಸೆಳೆಯಲು ಯಶಸ್ವಿಯಾಗಿದ್ದಾರೆ. ಹೌದು, ಚನ್ನಪಟ್ಟಣ ನಗರಸಭೆಯಲ್ಲಿ ಜೆಡಿಎಸ್ ಗೆ ಭಾರೀ ಮುಖಭಂಗ ಎದುರಾಗಿದ್ದು, 16 ಜೆಡಿಎಸ್ ಸದಸ್ಯರ ಪೈಕಿ 13 ಜನ ಸದಸ್ಯರು ಅಧಿಕೃತವಾಗಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ. ಜಿಲ್ಲಾಧಿಕಾರಿಗೆ ಪತ್ರ ಬರೆದು ಶೇಕಡಾ 2/3 ರ ಅನ್ವಯದಲ್ಲಿ ಜೆಡಿಎಸ್ ಸದಸ್ಯರು ಕಾಂಗ್ರೆಸ್ ಸದಸ್ಯರಾಗಿದ್ದಾರೆ. ಆ ಮೂಲಕ ಅಧಿಕೃತವಾಗಿ ಕಾಂಗ್ರೆಸ್ ಸದಸ್ಯರೆಂದು ಘೋಷಣೆ ಮಾಡಿಕೊಂಡಿದ್ದಾರೆ.





**ರಂಗು ಪಡೆದುಕೊಂಡ ಚನ್ನಪಟ್ಟಣ ಉಪಚುನಾವಣೆ:** ಡಿಸಿಎಂ ಡಿಕೆ ಶಿವಕುಮರ್ ಅವರ ಮಾರ್ಗದರ್ಶನದಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಮಾಜಿ ಸಂಸದ ಡಿ.ಕೆ.ಸುರೇಶ್ ಯಶಸ್ವಿಯಾಗಿ ಆಪರೇಷನ್ ನಡೆಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಕೆಲವೇ ದಿನಗಳಲ್ಲಿ ನಗರಸಭೆ ಅಧ್ಯಕ್ಷ - ಉಪಾಧ್ಯಕ್ಷ ಸ್ಥಾನದ ಚುನಾವಣೆ ನಡೆಯಲಿದ್ದು, ಅದಕ್ಕೂ ಮೊದಲೇ ಜೆಡಿಎಸ್‌ಗೆ ಕಾಂಗ್ರೆಸ್ ಬಿಗ್ ಶಾಕ್ ಕೊಟ್ಟಿದೆ. 13 ಸದಸ್ಯರು ಕಾಂಗ್ರೆಸ್ ಸೇರ್ಪಡೆಯೊಂದಿಗೆ ಚನ್ನಪಟ್ಟಣದಲ್ಲಿ ಜೆಡಿಎಸ್ ಅಸ್ತಿತ್ವಕ್ಕೆ ಭಾರೀ ಧಕ್ಕೆ ಎದುರಾಗಿದ್ದು, ಎಚ್. ಡಿ ಕುಮಾರಸ್ವಾಮಿ ಅವರು ಕ್ಷೇತ್ರ ಬಿಟ್ಟ ನಂತರ ಪಕ್ಷದ ಅಸ್ತಿತ್ವಕ್ಕೆ ಭಾರೀ ಪೆಟ್ಟು ಬಿದ್ದಿದೆ. ಇದರೊಂದಿಗೆ ಚನ್ನಪಟ್ಟಣ ಉಪಚುನಾವಣೆ ಕಣ ಮತ್ತಷ್ಟು ರಂಗು ಪಡೆದುಕೊಂಡಿದೆ.

**ಚನ್ನಪಟ್ಟಣಕ್ಕೆ ಬಂಪರ್ ಆಫರ್:** ಇನ್ನು ಚನ್ನಪಟ್ಟಣ ಬೈ ಎಲೆಕ್ಷನ್ ಹಿನ್ನೆಲೆಯಲ್ಲಿ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ಬಂಪರ್ ಗಿಫ್ಟ್ ಕೊಟ್ಟಿದ್ದು, ಅಭಿವೃದ್ಧಿ ಯೋಜನೆಗಳಿಗಾಗಿ 450 ಕೋಟಿಗೂ ಹೆಚ್ಚು ಅನುದಾನ ಬಿಡುಗಡೆ ಮಾಡಿದೆ. ಇಂದು ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಅವರು ಹಲವು ಕಾಮಗಾರಿಗಳ ಶಂಕುಸ್ಥಾಪನೆ, ಗುದ್ದಲಿಪೂಜೆ ನಡೆಸಲಿದ್ದಾರೆ.

ನಾಳೆ ಡಿಸಿಎಂ ಡಿ.ಕೆ.ಶಿವಕುಮಾರ್, ವಸತಿ ಸಚಿವ ಜಮೀರ್ ಅಹಮದ್ ಕ್ಷೇತ್ರಕ್ಕೆ ಆಗಮಿಸಲಿದ್ದು, ಸರ್ಕಾರದಿಂದ ನಿರಾಶ್ರಿತರಿಗೆ ನಿವೇಶನ ಹಂಚಿಕೆ ಕಾರ್ಯಕ್ರಮ ಮಾಡಲಾಗಿದೆ. ಇಂದು-ನಾಳೆ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ನಾಯಕರಿಂದ ಕಾರ್ಯಕ್ರಮ ನಡೆಯಲಿದೆ. ಪುಟ 2

## ಧ್ವಜ ಹಾರಾಟ ಬೆನ್ನಲ್ಲೇ ಫ್ರೀ ಪ್ಯಾಲೆಸ್ತೀನ್ ಟೀ ಶರ್ಟ್ ಧರಿಸಿ ಯುವಕ ಪೋಸ್ಟ್

**ಚಿಕ್ಕಮಗಳೂರು:** ಕರ್ನಾಟಕದಲ್ಲಿ ಇತ್ತೀಚಿಗೆ ಪ್ಯಾಲೆಸ್ತೀನ್ ಬಾವುಟ ಹಾರಿಸುವುದು, ಘೋಷಣೆ ಕೂಗುವುದು ಪ್ರಕರಣ ಮೇಲಿಂದ ಮೇಲೆ ವರದಿಯಾಗುತ್ತಿವೆ. ಕೆಲ ದಿನಗಳ ಹಿಂದೆ ಚಿಕ್ಕಮಗಳೂರಿನಲ್ಲಿ ನಾಲ್ವರು ಅಪ್ರಾಪ್ತರು ಪ್ಯಾಲೆಸ್ತೀನ್ ಧ್ವಜ ಹಿಡಿದುಕೊಂಡು ಬೈಕ್‌ನಲ್ಲಿ ಸುತ್ತಾಡಿದ್ದರು. ಇದಾದ ಬಳಿಕ ಚಿತ್ರದುರ್ಗದಲ್ಲಿ ಈದ್ ಮಿಲಾದ್ ಮೆರವಣಿಗೆ ವೇಳೆ ಪ್ಯಾಲೆಸ್ತೀನ್ ಪರ ಘೋಷಣೆ ಕೂಗಲಾಗಿತ್ತು. ಇದೀಗ ಮತ್ತೆ ಚಿಕ್ಕಮಗಳೂರಿನಲ್ಲಿ ಯುವಕನೋರ್ವ ಫ್ರೀ ಪ್ಯಾಲೆಸ್ತೀನ್ ಬರಹ ಮತ್ತು ಧ್ವಜವಿರುವ ಟೀ ಶರ್ಟ್ ಹಾಕಿಕೊಂಡು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದಾನೆ.

ಸದ್ಯ ಈ ಪೋಸ್ಟ್ ಸಾಮಾಜಿಕ ಜಾಲತಣಾದಲ್ಲಿ ಸಾಕಷ್ಟು ವೈರಲ್ ಆಗಿದೆ. ಯುವಕನ ಪೋಸ್ಟ್ ಕಂಡ ಹಿಂದೂ ಸಂಘಟನೆಗಳ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ಯಾಲೆಸ್ತೀನ್ ವಿಚಾರವಾಗಿ ಮುಸ್ಲಿಂ ಯುವಕರಿಗೆ ಯಾರೋ ಪ್ರಚೋದನೆ ನೀಡುತ್ತಿದ್ದಾರೆ. ಈ ಸಂಬಂಧ ತನಿಖೆ ನಡೆಸಬೇಕೆಂದು ಹಿಂದೂ ಸಂಘಟನೆಗಳ ಮುಖಂಡರು ಒತ್ತಾಯಿಸಿದ್ದಾರೆ.



**ದೇಶಕ್ಕೆ ಬೆಂಕಿ ಹಚ್ಚುವ ಷಡ್ಯಂತ್ರ: ಸಿಟಿ ರವಿ:** ಪ್ಯಾಲೆಸ್ತೀನ್‌ಗೂ ಇವರಿಗೂ ಏನು ಸಂಬಂಧ? ಪ್ಯಾಲೆಸ್ತೀನ್ ಬಗ್ಗೆ ಆಸಕ್ತಿ ತೋರಿಸುತ್ತಾರೆ ಅಂದರೆ ಇವರು ಎಲ್ಲಿದ್ದಾರೆ? ಅಪ್ರಾಪ್ತ ಹುಡುಗರ ತಲೆಕೆಡಿಸಿದ್ದು ಯಾರು? ಪುಟ 2

### ನಾಗಮಂಗಲ ಬಳಿಕ ದಾವಣಗೆರೆಯಲ್ಲೂ ಧಗಧಗ

# ಪರಿಸ್ಥಿತಿ ಈಗಲೂ ಬೂದಿ ಮುಚ್ಚಿದ ಕೆಂಡ!

**ದಾವಣಗೆರೆ:** ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ವೇಳೆ ಕಲ್ಲುತೂರಾಟ ಪ್ರಕರಣದಿಂದಾಗಿ ದಾವಣಗೆರೆ ನಗರ ಬೂದಿ ಮುಚ್ಚಿದ ಕೆಂಡದಂತಾಗಿದೆ. ದಾವಣಗೆರೆ ನಗರಾದಾದ್ಯಂತ ಭಯದ ವಾತಾವರಣಮನೆ ಮಾಡಿದ್ದು,ಕಲ್ಲು ತೂರಾಟ ನಡೆದ ಇಮಾಂನಗರದಲ್ಲಿ ರಸ್ತೆಯುದ್ದಕ್ಕು ಪೊಲೀಸರು ಬಿಗಿ ಬಂದೋಬಸ್ತ್ ಕೈಗೊಂಡಿದ್ದಾರೆ. ಹಾವೇರಿ, ಶಿವಮೊಗ್ಗ ಜಿಲ್ಲೆಗಳ ರಿಸರ್ವ್ ಪೊಲೀಸ್ ತುಕಡಿಗಳು ಸ್ಥಳದಲ್ಲಿ ಬೀಡುಬಿಟ್ಟಿದ್ದು, ರಾತ್ರಿಯಿಡೀ ನಿದ್ರೆಗಟ್ಟು ಗಸ್ತು ನಡೆಸಿವೆ. ಮತ್ತೆ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಂಡಿರುವ ದಾವಣಗೆರೆ ಎಸ್ಪಿ ಉಮಾ ಅವರು, ಪರಿಸ್ಥಿತಿ ಹತೋಟಿಗೆ ತರಲು ಮುಂದಾಗಿದ್ದಾರೆ. ಪುಟ 2



### ಬಡ್ಡಿ ಸಮೇತ ತೀರಿಸದಿದ್ದರೆ ನಾನು ದೇವೇಗೌಡರ ಮಗನೇ ಅಲ್ಲ

# ರೇವಣ್ಣ ಸವಾಲ್

**ಹಾಸನ:** ಇನ್ನೂ ಮೂರು ವರ್ಷ ಸ್ವಲ್ಪ ಸುಮ್ಮನಿರಿ, ನನಗೆ ಕೊಟ್ಟಿದ್ದನ್ನ ಬಡ್ಡಿ ಸಮೇತ ತೀರಿಸದಿದ್ದರೆ ನಾನು ದೇವೇಗೌಡರ ಮಗನೇ ಅಲ್ಲ ಎಂದು ಮಾಜಿ ಸಚಿವ ಹೆಚ್.ಡಿ ರೇವಣ್ಣ ಕಿಡಿಕಾರಿದ್ದಾರೆ.



ಜಿಲ್ಲೆಯ ಆಲೂರಿನಲ್ಲಿ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಹಾಸನದಲ್ಲಿ ಹೆಚ್.ಎಸ್ ಪ್ರಕಾಶನನ್ನು ನಾಲ್ಕು ಬಾರಿ ಗೆಲ್ಲಿಸಿದ್ದರು. 2013ರಲ್ಲಿ ಪ್ರಕಾಶ್‌ಗೆ ಸೀಟ್ ಕೊಡಿಸಿಕೊಂಡು ಬಂದೆ, ಅಲ್ಪಸಂಖ್ಯಾತರಿಂದಾಗಿ ಪ್ರಕಾಶ್ ಸೋತರು ಎಂದು ಹೇಳಿದ್ದಾರೆ.

2023ರ ಚುನಾವಣೆಯಲ್ಲಿ ಹಾಸನದಲ್ಲಿ ಐವತ್ತು ಸಾವಿರ ವೋಟಿಗೆ ಒಂದು ವೋಟು ಕಡಿಮೆಯಾದರೆ ರಾಜೀನಾಮೆ ಕೊಡ್ತಿನಿ ಅಂಥ ಚಾಲೆಂಜ್ ಹಾಕಿದ್ದರು. ಆ ಚುನಾವಣೆಗೆ ಸ್ವರೂಪ್ ನಿಲ್ಲಲು ಪ್ರಯತ್ನಪಟ್ಟ, ಆ ಚುನಾವಣೆಯಲ್ಲಿ ನನ್ನ ಹೆಂಡತಿಯನ್ನು ನಿಲ್ಲಿಸಲು ನಾನೇನು ದಡ್ಡನಲ್ಲ. ನಾನೇ ಅವರನ್ನು ಬಿಟ್ಟಿದ್ದೆ, ರೇವಣ್ಣನೇ ಬಂದು ನಿಲ್ಲಲಿ ಎಂದಾಗ ಯಾರನ್ನಾದರೂ ಬಿಡಬೇಕಲ್ಲ. ಅದಕ್ಕೆ ಸ್ವರೂಪ್ ಅವರನ್ನೇ ನಿಲ್ಲಿಸಬೇಕಾಯಿತು ಎಂದಿದ್ದಾರೆ. ಪುಟ 2

# ಕಾಂಗ್ರೆಸ್ ಎಂಎಲ್‌ಸಿ ಐವಾನ್ ಡಿಸೋಜಾಗೆ ದುಬಾರಿ ಕಚೇರಿ

**ಮಂಗಳೂರು:** ಇತ್ತೀಚೆಗೆ ಕಾಂಗ್ರೆಸ್‌ನಿಂದ ಐವನ್ ಡಿಸೋಜಾ ಅವರನ್ನು ಎಂಎಲ್‌ಸಿಯಾಗಿ ಆಯ್ಕೆ ಮಾಡಲಾಗಿತ್ತು. ಆದರೆ ಅವರಿಗಾಗಿ ನೂತನವಾಗಿ ನಿರ್ಮಿಸುತ್ತಿರುವ ಸರ್ಕಾರಿ ಕಚೇರಿ ಇದೀಗ ತೀವ್ರ ಚರ್ಚೆಗೆ ಕಾರಣವಾಗಿದೆ. ಮಂಗಳೂರಿನ ಲಾಲ್‌ಬಾಗ್ ಬಳಿ ಇರುವ ಮಹಾನಗರ ಪಾಲಿಕೆಯ ಸಂಕೀರ್ಣದಲ್ಲಿ ನೂತನ ಕಚೇರಿಯ ನಿರ್ಮಾಣ ಕಾರ್ಯ ಭರದಿಂದ ಸಾಗುತ್ತಿದೆ. ಆದರೆ ಈ ಕಚೇರಿಗಾಗಿ ಸುಮಾರು 55 ಲಕ್ಷ ರೂಪಾಯಿ ಹಣವನ್ನು ಖರ್ಚು ಮಾಡಲಾಗುತ್ತಿದ್ದು ಜನರ, ಸಾಮಾಜಿಕ ಕಾರ್ಯಕರ್ತರ ಆಕ್ರೋಶಕ್ಕೆ ಕಾರಣವಾಗಿದೆ.

ನೂತನ ಕಚೇರಿ ಐದು ಚೇಂಬರ್‌ಗಳನ್ನು ಹೊಂದಿರಲಿದ್ದು ಈಗಾಗಲೇ ಇಂಟೀರಿಯರ್ ವರ್ಕ್ ನಡೆಯುತ್ತಿದೆ. ಒಳಭಾಗಕ್ಕೆ ಯಾರು ಸಹ ಹೋಗದಂತೆ ಟಾರ್ಪಲ್ ಅಳವಡಿಸಲಾಗಿದೆ. ಒಳಭಾಗದಲ್ಲಿ ಭರದಿಂದ ನೂತನ ಕಚೇರಿಯ ಕೆಲಸ ನಡೆಯುತ್ತಿದೆ.

**ಐವನ್ ಕಚೇರಿಗಾಗಿ ಆರೋಗ್ಯ ಇಲಾಖೆ ಕಚೇರಿ ಸ್ಥಳಾಂತರ:** ಐವನ್ ಡಿಸೋಜಾ ಅವರಿಗಾಗಿ ನಿರ್ಮಿಸುತ್ತಿರುವ ಈ ಕಚೇರಿ ಇದ್ದ ಜಾಗದಲ್ಲಿ ಮೊದಲು ಪಾಲಿಕೆಯ ಆರೋಗ್ಯ ಇಲಾಖೆ ವಿಭಾಗ ಕಾರ್ಯ ನಿರ್ವಹಿಸುತ್ತಿತ್ತು. ಸುಮಾರು ಹದಿನೈದಕ್ಕೂ ಹೆಚ್ಚು ಆರೋಗ್ಯ ವಿಭಾಗದ ಅಧಿಕಾರಿ ಸಿಬ್ಬಂದಿಗಳು ಈ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು. ಆದರೆ ಇದೀಗ ಐವನ್ ಡಿಸೋಜಾ ಅವರ ಕಚೇರಿ ನಿರ್ಮಾಣಕ್ಕಾಗಿ ಇಲ್ಲಿದ್ದ ಆರೋಗ್ಯ ಇಲಾಖೆ ವಿಭಾಗವನ್ನು ಬೇರೆ ಕಡೆಗೆ ಸ್ಥಳಾಂತರ ಮಾಡಲಾಗಿದೆ. ಸ್ಥಳಾಂತರವಾದ ಸ್ಥಳದಲ್ಲಿ ಇಕ್ಕಟ್ಟು ಇರುವುದರಿಂದ ಅಧಿಕಾರಿ ಸಿಬ್ಬಂದಿ ಕಷ್ಟ ಪಡುವಂತಾಗಿದೆ.



ಪುಟ 2

## ಪ್ಯಾಲೆಸ್ತೀನ್ ಧ್ವಜ ಹಿಡಿದರೆ ತಪ್ಪೇನಿಲ್ಲ: ಜಮೀರ್



**ಕಲಬುರಗಿ:** ಪ್ಯಾಲೆಸ್ತೀನ್ ಧ್ವಜ ಹಿಡಿದು ಮೆರವಣಿಗೆ ಮಾಡಿದರೆ ತಪ್ಪೇನಿಲ್ಲ ಎನ್ನುವ ಮೂಲಕ ಸಚಿವ ಜಮೀರ್ ಅಹ್ಮದ್ ಪ್ಯಾಲೆಸ್ತೀನ್ ಧ್ವಜ ಮೆರವಣಿಗೆಯನ್ನು ಸಮರ್ಥಿಸಿಕೊಂಡಿದ್ದಾರೆ. ಈ ಹೇಳಿಕೆ ಇದೀಗ ಚರ್ಚೆಗೆ ಗ್ರಾಸವಾಗಿದೆ. ರಾಜ್ಯದಲ್ಲಿ ಹಲವಡೆ ಕಿಡಗೇಡಿಗಳಿಂದ ಪ್ಯಾಲೆಸ್ತೀನ್ ಧ್ವಜ ಹಾರಾಟ ವಿಚಾರವಾಗಿ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ಯಾಲೆಸ್ತೀನ್‌ಗೆ ಕೇಂದ್ರ ಸರ್ಕಾರವೇ ಬೆಂಬಲ ಕೊಟ್ಟಿದೆ. ಕೇಂದ್ರವೇ 'ವಿ ಆರ್ ವಿತ್ ಪ್ಯಾಲೆಸ್ತೀನ್' ಅಂದಿದೆ. ಕೇಂದ್ರ ಸರ್ಕಾರ ಹೇಳಿದ ಮೇಲೆ ತಾನೇ ಯಾರೋ ಧ್ವಜ ಹಿಡಿದು ಮೆರವಣಿಗೆ ಮಾಡಿದ್ದು. ಧ್ವಜ ಹಿಡಿದಿದರೆ ತಪ್ಪೇನು ಇಲ್ಲ ಅನ್ನಿಸುತ್ತೆ ಎಂದರು. ಬೇರೆ ದೇಶದ ಪರ ಘೋಷಣೆ ಕೂಗಬಾರದು. ಘೋಷಣೆ ಕೂಗಿದರೆ ಅಂಥವರು ದೇಶದ್ರೋಹಿ ಕೆಲಸ ಮಾಡಿದಂತೆ ಆಗುತ್ತದೆ. ಘೋಷಣೆ ಕೂಗಿದವರು ಯಾರೇ ಇರಲಿ ಗಲ್ಲು ಶಿಕ್ಷೆಯಾಗಬೇಕು. ನಾನು ಮೊದಲು ಹಿಂದೂಸ್ತಾನಿ, ಆಮೇಲೆ ಕನ್ನಡಿಗ. ಅದಾದಮೇಲೆ ಮುಸ್ಲಿಂ. ಯಾರೇ ಆದರೂ ಬೇರೆ ದೇಶದ ಪರ ಘೋಷಣೆ ಕೂಗಬಾರದು ಎಂದು ತಿಳಿಸಿದರು.

## ಬಿಎಸ್‌ವೈ ವಿರುದ ಪೋಕ್ಸೊ ಕೇಸ್; ಸೆ.27 ಕ್ಕೆ ವಿಚಾರಣೆ ಮುಂದೂಡಿಕೆ

**ಬೆಂಗಳೂರು:** ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣದ ವಿಚಾರಣೆಯನ್ನು ಸೆ.27ಕ್ಕೆ ಹೈಕೋರ್ಟ್ ಮುಂದೂಡಿದೆ. ಸಿಐಡಿ ಸಲ್ಲಿಸಿದ್ದ ಚಾರ್ಜ್‌ಶೀಟ್ ರದ್ದು ಮಾಡುವಂತೆ ಕೋರಿ ಹೈಕೋರ್ಟ್‌ಗೆ ಯಡಿಯೂರಪ್ಪ ಮನವಿ ಸಲ್ಲಿಸಿದ್ದರು. ಸಮಯದ ಅಭಾವದ ಹಿನ್ನೆಲೆ ವಿಚಾರಣೆ ಮುಂದೂಡಿಕೆ ಮಾಡಲಾಗಿದೆ.ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ಆದೇಶ ಹೊರಡಿಸಿದ್ದಾರೆ. ಅಲ್ಲಿವರೆಗೂ ಹೈಕೋರ್ಟ್‌ನಿಂದ ಮಧ್ಯಂತರ ರಕ್ಷಣೆ ಮುಂದೂಡಿಕೆಯಾಗಿದೆ. ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ವಿರುದ್ಧ ಪೋಕ್ಸೊ ಪ್ರಕರಣ ದಾಖಲಾಗಿದೆ.



## ಮುಡಾ ಹಣ ವರುಣ ಕ್ಷೇತ್ರಕ್ಕೆ ಸಿಎಂ ವಿರುದ್ಧ ರಾಜ್ಯಪಾಲರಿಗೆ ದೂರು

**ಬೆಂಗಳೂರು:** ಸಿಎಂ ಸಿದ್ದರಾಮಯ್ಯಗೆ ಮುಡಾ ಸಂಕಷ್ಟ ನಿಲ್ಲುವಂತೆ ಕಾಣ್ತಿಲ್ಲ. ಮುಡಾ ಹಣವನ್ನು ವರುಣ ಕ್ಷೇತ್ರದ ಹಳ್ಳಿಗಳ ಅಭಿವೃದ್ಧಿಗೆ ಬಳಸಲಾಗಿದೆ ಎಂದು ಆರೋಪ ಕೇಳಿ ಬಂದಿದೆ.



ಸಿಎಂ ಮೌಖಿಕ ಆದೇಶದ ಮೇರೆಗೆ ಕಾನೂನು ಮೀರಿ ಮುಡಾ ಹಣವನ್ನು ವರುಣ ಕ್ಷೇತ್ರದ ಹಳ್ಳಿಗಳ ಅಭಿವೃದ್ಧಿಗೆ ಬಳಸಲಾಗಿದೆ ಎಂದು ಆರೋಪಿಸಿ ರಾಜ್ಯಪಾಲರಿಗೆ ಮೈಸೂರು ಮೂಲದ ಪಿ.ಎಸ್. ನಟರಾಜು ದೂರುಕೊಟ್ಟಿದ್ದಾರೆ.

ಪ್ರಾಧಿಕಾರದ ಸಭೆಯ ಕಡತದಲ್ಲೇ ಈ ವಿಚಾರ ಉಲ್ಲೇಖವಾಗಿದೆ. ಆರ್ಥಿಕವಾಗಿ ನಷ್ಟದಲ್ಲಿದ್ದರೂ ಮುಡಾದ 450 ಕೋಟಿ ರೂ. ಮೊತ್ತದ ಕಾಮಗಾರಿ ಕೈಗೊಂಡು ಅಧಿಕಾರ ದುರುಪಯೋಗಪಡಿಸಿಕೊಳ್ಳಲಾಗಿದೆ. ಈ ಬಗ್ಗೆ ಸಿಬಿಐ ತನಿಖೆಗೆ ಸೂಚಿಸಬೇಕೆಂದು ಎಂದು ನಟರಾಜ್ ಕೋರಿದ್ದಾರೆ.

ದೂರಿನ ಹಿನ್ನೆಲೆಯಲ್ಲಿ ಸಂಬಂಧ ಅಗತ್ಯ ದಾಖಲೆಗಳೊಂದಿಗೆ ಶೀಘ್ರ ವರದಿ ಸಲ್ಲಿಸುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸೆ.5ರಂದು ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

## ಉದ್ಯಮಿಯಿಂದ 40 ಲಕ್ಷ ಸುಲಿಗೆ ಮಾಡಿದ ಹನಿಟ್ರ್ಯಾಪ್ ಗ್ಯಾಂಗ್

**ಬೆಂಗಳೂರು:** ಉದ್ಯಮಿಯೊಬ್ಬರು ಹನಿಟ್ರ್ಯಾಪ್ ಗ್ಯಾಂಗ್‌ನ ಖೆಡ್ಡಗೆ ಬಿದ್ದು 40 ಲಕ್ಷ ರೂ. ಕಳೆದುಕೊಂಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಆರೋಪಿ ಮಹಿಳೆ ಸಿನಿಮಾ ಮಾಡೋಣ, ನಾನು ಅದೇ ಫೀಲ್ಡ್‌ನಲ್ಲಿದ್ದೇನೆ ಎಂದು ಸುಳ್ಳು ಹೇಳಿ ಉದ್ಯಮಿ ಸ್ನೇಹ ಮಾಡಿದ್ದಳು. ಇದಾದ ಕೆಲ ದಿನಗಳ ನಂತರ ನಮ್ಮ ಡೈರೆಕ್ಟರ್‌ಗೆ ಹಣದ ಕಷ್ಟ ಇದೆ ಎಂದು ಹೇಳಿ ಉದ್ಯಮಿಯಿಂದ ನಾಲ್ಕು ಲಕ್ಷ ಹಣ ಪಡೆದಿದ್ದಾಳೆ. ನಂತರ ಹಣ ವಾಪಸ್ ಕೇಳಿದಾಗ ತನ್ನ ರೂಮಿಗೆ ಕರೆಸಿಕೊಂಡು ಬಲವಂತವಾಗಿ ಲೈಂಗಿಕ ಕ್ರಿಯೆ ನಡೆಸಿ ಅದನ್ನ ವೀಡಿಯೋ ಮಾಡಿಕೊಂಡಿದ್ದಾಳೆ.

ಆ ಬಳಿಕ ಇದೇ ವೀಡಿಯೋ ಇಟ್ಟುಕೊಂಡು ಬ್ಲ್ಯಾಕ್‌ಮೇಲ್ ಮಾಡಿ ಉದ್ಯಮಿಯಿಂದ ಬ್ರಾಸ್‌ಲೈಟ್, ಚೈನ್ ಅಂತೆಲ್ಲಾ ಸುಮಾರು 40 ಲಕ್ಷ ಹಣ ಪೀಕಿದ್ದಾಳೆ. ಅಷ್ಟಕ್ಕೆ ಸುಮ್ಮನಾಗದೇ ಕಾರು ಕೊಡಿಸು ಎಂದು ದುಂಬಾಲು ಬಿದ್ದಿದ್ದಳು.

ಇದಕ್ಕೆ ಒಪ್ಪದಿದ್ದಾಗ ಆರೋಪಿ ಮಹಿಳೆ ತನ್ನ ಸ್ನೇಹಿತರಾದ ರವಿ ಮತ್ತು ದಿಲೀಪ್ ಎಂಬವರಿಂದ ಕರೆ ಮಾಡಿಸಿ ಹಣಕ್ಕೆ ಧಮ್ಕಿ ಹಾಕಿಸಿದ್ದಾಳೆ. ಹಣ ಕೊಡದಿದ್ದರೆ ವೀಡಿಯೋಗಳನ್ನ



ಟಿವಿಗೆ ಕೊಡೋದಾಗಿ ಬ್ಲ್ಯಾಕ್‌ಮೇಲ್ ಮಾಡಿದ್ದರು. ಅಷ್ಟೇ ಅಲ್ಲದೆ ಹಣ ನೀಡದಿದ್ದಾಗ ಸೋಷಿಯಲ್ ಮೀಡಿಯಾದಲ್ಲಿ ದೂರುದಾರನ ಫೋಟೋ ಹಾಕಿ ಮಾನಹರಣ ಮಾಡಿರುವುದಾಗಿ ಉದ್ಯಮಿ ದೂರು ನೀಡಿದ್ದಾರೆ.

ದೂರುದಾರ ಅಶೋಕನಗರ ಠಾಣೆಯಲ್ಲಿ ಆರೋಪಿತ ಮಹಿಳೆ, ದಿಲೀಪ್, ರವಿ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಸದ್ಯ ಪೊಲೀಸರು ಹನಿಟ್ರ್ಯಾಪ್ ಸುಂದರಿ ಮತ್ತು ಗ್ಯಾಂಗ್‌ನ ಆರೋಪಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

## ದಾವಣಗೆರೆ ಗಣೇಶ ಮೆರವಣಿಗೆ ವೇಳೆ ಕಲ್ಲು ತೂರಾಟ ಪೊಲೀಸರ ಮೇಲೂ ಬಿತ್ತು ಕಲ್ಲು

**ದಾವಣಗೆರೆ:** ನಗರದ ಮುದ್ದ ಬೋವಿ ಕಾಲೋನಿ ಹಾಗೂ ವೆಂಕಬೋವಿ ಕಾಲೋನಿಯ ಗಣೇಶ ಮೆರವಣಿಗೆ ನಡೆಯುವಾಗ ಕಲ್ಲು ತೂರಾಟ ನಡೆದಿದೆ.



ನಗರದ ಅರಳಿ ಮರ ಸರ್ಕಲ್ ನಲ್ಲಿ ಮೆರವಣಿಗೆ ಸಾಗಿದ ನಂತರ ಅಜಾದ್ ನಗರ ಮುಖ್ಯ ರಸ್ತೆಯಿಂದ ಮೊದಲು ಕಲ್ಲು ತೂರಿದ್ದು ಇಬ್ಬರು ಪೊಲೀಸರು ಗಾಯಗೊಂಡಿದ್ದಾರೆ.

ಕೂಡಲೇ ಮುಸ್ಲಿಂ ಮುಖಂಡರು ಪರಿಸ್ಥಿತಿಯನ್ನು ನಿಯಂತ್ರಣ ಮಾಡಿದ್ದಾರೆ. ಗಣೇಶ ಮೆರವಣಿಗೆ ಸಾಗಿದ ಮೂರು ಕಡೆಗಳಲ್ಲಿ ಕಲ್ಲು ತೂರಾಟ ನಡೆಸಲಾಗಿದೆ. ಕೂಡಲೇ ಪೊಲೀಸರು ಇಡೀ ನಗರದಲ್ಲಿ ಸಂಚಾರ ನಡೆಸಿ ಪರಿಸ್ಥಿತಿ ನಿಯಂತ್ರಣಕ್ಕೆ ತಂದಿದ್ದಾರೆ.

**ಕಲ್ಲು ತೂರಾಟಕ್ಕೆ ಕಾರಣ ಏನು?:** ಕಳೆದ ಎರಡು ದಿನಗಳ ಹಿಂದೆ ಹಿಂದೂ ಮುಖಂಡರು ನಾಗಮಂಗಲ ಕಲ್ಲುತೂರಾಟ ಪ್ರಕರಣ ಹಾಗೂ ಈದ್ ಮಿಲಾದ್ ಮೆರವಣಿಗೆಯಲ್ಲಿ ಪ್ಯಾಲೆಸ್ತೀನ್ ಧ್ವಜ ಪ್ರದರ್ಶನ ಮಾಡಿದ್ದನ್ನು ಖಂಡಿಸಿ ಪ್ರತಿಭಟನೆ ನಡೆಸಿದ್ದರು.

ಈ ಸಂದರ್ಭದಲ್ಲಿ ಹಿಂದೂ ಜಾಗರಣ ವೇದಿಕೆಯ ಪ್ರಾಂತ್ಯ ಸಂಚಾಲಕ ಸತೀಶ್ ಪೂಜಾರ್ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಇದಕ್ಕೆ ಪ್ರತಿಕ್ರಿಯೆ ಎಂಬಂತೆ ಮುಸ್ಲಿಂ ಮುಖಂಡನೊಬ್ಬ ತಾಕತ್ ಇದ್ದರೆ ಬೇತೂರು ರಸ್ತೆಗೆ ಬಾ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ.

ಇಂದು ಗಣೇಶ ಮೆರವಣಿಗೆಯಲ್ಲಿ ಸತೀಶ್ ಪೂಜಾರಿ ಭಾಗವಹಿಸಿದ್ದರು. ಮೆರವಣಿಗೆ ಸಾಗುವ ಅರಳಿಮರ ಸರ್ಕಲ್ ಬಳಿ ಭಾರೀ ಸಂಖ್ಯೆಯಲ್ಲಿ ಮುಸ್ಲಿಮರು ಸೇರಿದ್ದರು. ಗಣೇಶನ ಮೆರವಣಿಗೆ ಹೋಗುತ್ತಿದ್ದಾಗ ಇಸ್ಲಾಂ ಜಿಂದಾಬಾದ್ ಎಂದು ಘೋಷಣೆ ಕೂಗಿದ್ದಾರೆ. ಈ ವೇಳೆ ಕಲ್ಲು ತೂರಾಟ ನಡೆದಿದೆ. ಈ ವೇಳೆ ಮುಸ್ಲಿಂ ಮುಖಂಡರೇ ಜನಸಂದಣಿಯನ್ನು ನಿಯಂತ್ರಣ ಮಾಡಿದ್ದಾರೆ. ನಂತರ ಕೆ ಅರ್ ರಸ್ತೆ ಹಂಸಭಾವಿ ಸರ್ಕಲ್ ನಲ್ಲಿ ಕಲ್ಲು ತೂರಾಟ ನಡೆದಿದೆ.

### ಶೃಂಗೇರಿ ಬಳಿಕ ಹೊರನಾಡಲ್ಲೂ ಡ್ರೆಸ್‌ಕೋಡ್ ಜಾರಿ

**ಚಿಕ್ಕಮಗಳೂರು:** ಶೃಂಗೇರಿ ಬಳಿಕ ಹೊರನಾಡಲ್ಲೂ ವಸ್ತ್ರಸಂಹಿತೆ ಜಾರಿ ಮಾಡಲಾಗಿದೆ. ಹೊರನಾಡು ಅನ್ನಪೂರ್ಣೇಶ್ವರಿ ದರ್ಶನಕ್ಕೆ ಸಾಂಪ್ರದಾಯಿಕ ಉಡುಗೆಯನ್ನು ಕಡ್ಡಾಯಗೊಳಿಸಲಾಗಿದೆ. ಗಂಡಸರು ಶಲ್ಯ, ಪ್ಯಾಂಟ್, ಪಂಚೆ ಧರಿಸಬೇಕು. ಹೆಣ್ಣು ಮಕ್ಕಳು ಸೀರೆ ಹಾಗೂ ಚೂಡಿದಾರ ಧರಿಸುವಂತೆ ದೇವಾಲಯದ ಆಡಳಿತ ಮಂಡಳಿ ಆದೇಶ ಹೊರಡಿಸಿದೆ. ಸಾಂಪ್ರದಾಯಿಕ ಉಡುಗೆಯಲ್ಲಿ ಬರದಿದ್ದರೆ ದೇವಸ್ಥಾನದ ಒಳಗೆ ಪ್ರವೇಶವಿಲ್ಲ ಎಂದು ಆಡಳಿತ ಮಂಡಳಿ ಸೂಚನೆ ನೀಡಿದೆ. ಚಿಕ್ಕಮಗಳೂರು ಜಿಲ್ಲೆ ಕಳಸ ತಾಲೂಕಿನ ಹೊರನಾಡಿನಲ್ಲಿ ನೆಲೆಸಿರುವ ಅನ್ನಪೂರ್ಣೇಶ್ವರಿ ದರ್ಶನಕ್ಕೆ ಸಾಂಪ್ರದಾಯಿಕ ಉಡುಗೆ ಕಡ್ಡಾಯಗೊಳಿಸಿದ್ದು, ಭಕ್ತರು ಸಹಕರಿಸುವಂತೆ ದೇವಾಲಯದ ಆಡಳಿತ ಮಂಡಳಿ ಮನವಿ ಮಾಡಿದೆ.

## ಕರ್ನಾಟಕದ ಹಳ್ಳಿಹಳ್ಳಿಗಳಲ್ಲೂ ಜಿಯೋ ಗಾಜನೂರು, ಪೆದ್ದನಪಾಳ್ಯ, ಹುಗ್ಯಂನಂಥ ಗ್ರಾಮಗಳಲ್ಲೂ ಟವರ್

**ಬೆಂಗಳೂರು:** ಈಗ ಕರ್ನಾಟಕದ ದೂರ ದೂರದ ಪ್ರದೇಶಗಳಲ್ಲಿಯೂ ರಿಲಯನ್ಸ್ ಜಿಯೋದ ನೆಟ್‌ವರ್ಕ್ ಸಿಗುತ್ತಿದೆ.




ಶಿವಮೊಗ್ಗದ ಗಾಜನೂರು, ಚಾಮರಾಜನಗರದ ಕೊಳ್ಳೇಗಾಲ, ಹುಗ್ಯಂನಲ್ಲಿ ಸಂಪರ್ಕ ದೊರೆಯುವಂತೆ ಮಾಡುವಲ್ಲಿ ಜಿಯೋ ಯಶಸ್ಸು ಕಂಡಿದೆ. ಇದಕ್ಕೂ ಮುನ್ನ ಈ ಪ್ರದೇಶಗಳಲ್ಲಿ ಸಂವಹನ ಮೂಲಸೌಕರ್ಯಕ್ಕೆ ಕೊರತೆ ಇತ್ತು. ಪರಿಸರ ಮತ್ತು ಭೌಗೋಳಿಕ ಸವಾಲುಗಳನ್ನು ದಾಟುವ ಮೂಲಕವಾಗಿ ಜಿಯೋ ತನ್ನ ದೃಢವಾದ 4ಜಿ ಮತ್ತು 5ಜಿ ನೆಟ್‌ವರ್ಕ್ ಅನ್ನು ರಾಜ್ಯದ್ಯಂತ ಹಳ್ಳಿ ಹಳ್ಳಿಗಳಿಗೆ ವಿಸ್ತರಿಸುತ್ತಿದೆ. ಈ ತಾಲೂಕುಗಳಲ್ಲಿ ಇರುವ ಅನೇಕ ಹಳ್ಳಿಗಳು ಈಗ ಜಿಯೋ ನೆಟ್‌ವರ್ಕ್‌ನಿಂದಾಗಿ ಮಾತ್ರ ಪ್ರಯೋಜನ ಪಡೆಯುತ್ತಿವೆ. ಜಿಯೋ ಟವರ್‌ನಿಂದಾಗಿ ಮಕ್ಕಳು ನೆಟ್ ವರ್ಕ್ ಸಂಪರ್ಕಕ್ಕಾಗಿ ದೂರದ ಸ್ಥಳಗಳಿಗೆ ಪ್ರಯಾಣ ಮಾಡುವ ಅಗತ್ಯವಿಲ್ಲ. ಯುವಜನರಿಗೆ ವರ್ಕ್ ಫ್ರಮ್ ಹೋಮ್ ಮಾಡುವುದಕ್ಕೆ ಅನುಕೂಲವಾಗಿದ್ದು, ಇದರಿಂದ ಅವಕಾಶಗಳು ತೆರೆದುಕೊಂಡಿವೆ. ಈ ಗ್ರಾಮದ ಜನರು ಜಿಯೋದ ಪ್ರೀಮಿಯಂ ಅಪ್ಲಿಕೇಷನ್‌ಗಳಾದ ಜಿಯೋಟಿವಿ ಮತ್ತು ಜಿಯೋ ಸಿನಿಮಾ ಮೂಲಕ ಮನರಂಜನೆಯನ್ನು ಪಡೆಯಬಹುದಾಗಿದೆ.



### ಜಾತಿ ನಿಂದನೆ ಕೇಸ್ – ಮುನಿರತ್ನಗೆ ಜಾಮೀನು ಮಂಜೂರು

**ಬೆಂಗಳೂರು:** ಜಾತಿನಿಂದನೆ ಪ್ರಕರಣದಲ್ಲಿ ಬಿಜೆಪಿ ಶಾಸಕ ಮುನಿರತ್ನಗೆ ಜಾಮೀನು ಸಿಕ್ಕಿದೆ. ಬುಧವಾರ ವಾದ, ಪ್ರತಿವಾದ ಆಲಿಸಿದ್ದ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಇಂದಿಗೆ ತೀರ್ಪು ಕಾಯ್ದಿರಿಸಿತ್ತು. ಎರಡು ಲಕ್ಷ ರೂ. ಬಾಂಡ್, ಇಬ್ಬರು ಶ್ಯೂರಿಟಿ, ಪೊಲೀಸರು ವಿಚಾರಣೆಗೆ ಕರೆದಾಗ ಹಾಜರಾಗಬೇಕೆಂದು ಕೋರ್ಟ್ ಷರತ್ತು ವಿಧಿಸಿದೆ. ಜಾಮೀನು ಸಿಕ್ಕಿದರೂ ಅತ್ಯಾಚಾರ ಪ್ರಕರಣದಲ್ಲಿ ಪೊಲೀಸರು ಮುನಿರತ್ನ ಅವರನ್ನು ಮತ್ತೆ ವಶಕ್ಕೆ ಪಡೆಯುವ ಸಾಧ್ಯತೆಯಿದೆ.

## ಪತ್ರಕರ್ತರ ಸಹಕಾರ ಸಂಘಕ್ಕೆ ಆರ್ಥಿಕ ನೆರವಿಗೆ ಸಿಎಂ ಭರವಸೆ

**ಬೆಂಗಳೂರು:** ಪತ್ರಕರ್ತರ ಸಹಕಾರ ಸಂಘಕ್ಕೆ ಆರ್ಥಿಕ ನೆರವು ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷರಾದ ರಮೇಶ್ ಪಾಳ್ಯ ನೇತೃತ್ವದ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿದ ವೇಳೆ ಭರವಸೆ ನೀಡಿದ್ದಾರೆ.

1949ರಲ್ಲಿ ಆರಂಭವಾದ ಪತ್ರಕರ್ತರ ಸಹಕಾರ ಸಂಘ ರಾಜ್ಯದ ಪತ್ರಕರ್ತರ ಏಕೈಕ ಹಣಕಾಸಿನ ಪ್ರಾತಿನಿಧಿಕ ಸಂಸ್ಥೆ. ಈ ಸಂಸ್ಥೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಪತ್ರಕರ್ತರನ್ನು ಸದಸ್ಯರನ್ನಾಗಿ ಹೊಂದಿದೆ. ಆಡಿಟ್ ವರ್ಗೀಕರಣದಲ್ಲಿ ನಮ್ಮ ಸಂಸ್ಥೆ 'ಎ' ಶ್ರೇಣಿ ಪಡೆದಿರುವ ಸಂಸ್ಥೆ. ಅತ್ಯುತ್ತಮ ಸಹಕಾರ ಸಂಘ ಎಂಬ ಪ್ರಶಸ್ತಿಗೂ ಪಾತ್ರವಾಗಿದೆ. ನಿರಂತರ ಏಳು ದಶಕಗಳಿಂದ ನಮ್ಮ ಪತ್ರಕರ್ತರ ಸಹಕಾರ ಸಂಘ ಸೇವೆ ಸಲ್ಲಿಸುತ್ತಿದೆ.



ಪತ್ರಕರ್ತರ ಸಂಘದ ಸದಸ್ಯರಿಂದ ಆರೋಗ್ಯದ ನೆರವಿನ ಬೇಡಿಕೆ ದಿನೇದಿನೆ ಹೆಚ್ಚಾಗುತ್ತಿದೆ. ಹೀಗಾಗಿ ಪತ್ರಕರ್ತರ ಆರೋಗ್ಯದ ಅನುಕೂಲಕ್ಕಾಗಿ ಆರ್ಥಿಕ ನೆರವು ಬೇಕಿದೆ. ವೈದ್ಯಕೀಯ ನೆರವಿಗೆ ರಾಜ್ಯ ಸರ್ಕಾರದಿಂದ ಸುಮಾರು 5 ಕೋಟಿ ರೂ. ಅನುದಾನ ನೀಡಬೇಕು ಎಂದು ಸಂಘದ ಅಧ್ಯಕ್ಷರಾದ ರಮೇಶ್ ಪಾಳ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಸಂಘದ ಶ್ರೇಯೋಭಿವೃದ್ಧಿಗೆ ಆರ್ಥಿಕ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಇದರ ಜೊತೆಗೆ ಕೆಲವು ಹಿರಿಯ ಪತ್ರಕರ್ತರು ಸಂಘದಲ್ಲಿ ಸಾಲ ಪಡೆದಿದ್ದು, ಕೊರೋನಾ ಸಮಯದಲ್ಲಿ ಹಾಗೂ ಆನಂತರ ಅನಾರೋಗ್ಯ ಕಾರಣದಿಂದ ನಿಧನರಾಗಿದ್ದಾರೆ. ಕೊರೋನಾ ಆರ್ಥಿಕ ಸಂಕಷ್ಟದಿಂದ ನಿಗಧಿತ ಸಮಯಕ್ಕೆ ಸಾಲ ಮರು ಪಾವತಿ ಮಾಡದೆ ಸುಸ್ತಿದಾರರಾಗಿದ್ದಾರೆ. ಹೀಗಾಗಿ ಸಂಸ್ಥೆಗೆ ಆರ್ಥಿಕ ನೆರವು ತೀರಾ ಅಗತ್ಯವಾಗಿದೆ. ಹೀಗಾಗಿ ರಾಜ್ಯ ಸರ್ಕಾರ ಪತ್ರಕರ್ತರ ಸಹಕಾರ ಸಂಘಕ್ಕೆ ಅನುದಾನವನ್ನು ಬಿಡುಗಡೆ ಮಾಡಬೇಕು ಎಂದು ನಿಯೋಗವು ಮುಖ್ಯಮಂತ್ರಿಗಳನ್ನು ಮನವಿ ಮಾಡಿಕೊಂಡಿತು. ಇದಕ್ಕೆ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪತ್ರಕರ್ತರ ಸಹಕಾರ ಸಂಘಕ್ಕೆ ನೆರವು ನೀಡುವ ಭರವಸೆ ನೀಡಿದರು.

**ನಿಗಮಗಳ ನೇಮಕದಲ್ಲಿ ಸಂಸ್ಥೆಯನ್ನೂ ಪರಿಗಣಿಸಿ:** ಮಾಧ್ಯಮಕ್ಕೆ ಸಂಬಂಧಿಸಿದ ನಿಗಮ ಮಂಡಳಿ ಅಥವಾ ಅಕಾಡೆಮಿಗಳಿಗೆ ನೇಮಕ ಮಾಡುವ ಸಂದರ್ಭದಲ್ಲಿ ಪತ್ರಕರ್ತರ ಸಹಕಾರ ಸಂಘವನ್ನೂ ಪರಿಗಣಿಸಬೇಕು. ಸಹಕಾರ ಸಂಘದ ಪ್ರತಿನಿಧಿಗಳನ್ನು ನಿರ್ದೇಶಕರು ಹಾಗೂ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ನಿಯೋಗದ ಸದಸ್ಯರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ವಿನಂತಿಸಿಕೊಳ್ಳಲಾಯಿತು.

ನಿಯೋಗದಲ್ಲಿ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷರಾದ ದೊಡ್ಡ ಬೊಮ್ಮಯ್ಯ, ಖಜಾಂಚಿ ಮೋಹನ್ ಕುಮಾರ್ ಬಿ.ಎಸ್. ನಿರ್ದೇಶಕರಾದ ರಮೇಶ್ ಹಿರೇಜಂಬೂರು, ಸೋಮಶೇಖರ್ ಕೆ.ಎಸ್.( ಸೋಮಣ್ಣ ) ಉಪಸ್ಥಿತರಿದ್ದರು.

## ಚಾಮರಾಜನಗರ: ಚಿರತೆ ಓಡಿಸಲು ಹಾರಿಸಿದ ಗುಂಡು ತಗುಲಿ ನಾಲ್ವರಿಗೆ ಗಾಯ

**ಚಾಮರಾಜನಗರ:** ಗಡಿನಾಡು ಚಾಮರಾಜನಗರದಲ್ಲಿ ಮಾನವ ಕಾಡುಪ್ರಾಣಿ ಸಂಘರ್ಷ ಮಿತಿ ಮೀರಿದೆ. ಚಿರತೆ ಓಡಿಸಲು ಹಾರಿಸಿದ ಗುಂಡು ತಗುಲಿ ನಾಲ್ವರು ಗಾಯಗೊಂಡಿರುವ ಘಟನೆ ಯಳಂದೂರು ತಾಲೂಕಿನ ಮಲ್ಲಿಗೆಹಳ್ಳಿ ಗ್ರಾಮದಲ್ಲಿ ನಡೆದಿದೆ. ರೈತರ ಜಮೀನಿನಲ್ಲಿ ಅಡಗಿದ್ದ ಚಿರತೆ ಹಿಡಿಯಲು ಅರಣ್ಯ ಸಿಬ್ಬಂದಿ ಹೋಗಿದ್ದವರು. ಅರಣ್ಯ ಸಿಬ್ಬಂದಿ ಜೊತೆಗೆ ಗ್ರಾಮಸ್ಥರು ಕೂಡ ತೆರಳಿದ್ದರು. ಈ ವೇಳೆ ಚಿರತೆ ಅರಣ್ಯ ಸಿಬ್ಬಂದಿ ಮೇಲೆ ಮಾಡಲು ಯತ್ನಿಸಿದೆ. ಅರಣ್ಯ ಸಿಬ್ಬಂದಿ ಕೂಡಲೆ ಚಿರತೆ ಓಡಿಸಲು ಗುಂಡು ಹಾರಿಸಿದ್ದಾರೆ. ಈ ಗುಂಡು ತಗುಲಿ ಮದ್ದೂರಿನ ರವಿ, ಶಿವು, ರಂಗಸ್ವಾಮಿ, ಮೂರ್ತಿ ಎಂಬುವರು ಗಾಯಗೊಂಡಿದ್ದಾರೆ.



ಗಾಯಗೊಂಡವರನ್ನು ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಇದೇ ವೇಳೆ ಗಾಯವಾಗಿದ್ದ ಚಿರತೆ ಸ್ಥಳದಲ್ಲೇ ಮೃತಪಟ್ಟಿದೆ. ಅರಣ್ಯ ಸಿಬ್ಬಂದಿ ಆತ್ಮರಕ್ಷಣೆಗೆ ದೊಣ್ಣೆಯಿಂದಲೂ ಹೊಡೆದಾಗ ಚಿರತೆ ಸತ್ತಿರುವ ಶಂಕೆ ವ್ಯಕ್ತವಾಗಿದೆ.

## ವಿಆರ್‌ಎಲ್ ಬಸ್ ಹರಿದು 125 ಕುರಿಗಳ ಸಾವು

**ರಾಯಚೂರು:** ವಿಆರ್‌ಎಲ್ ಬಸ್ ಹರಿದು 125 ಕುರಿಗಳು ಮೃತಪಟ್ಟಿರುವ ಘಟನೆ ರಾಯಚೂರು ಹೊರವಲಯದ ಯರಮರಸ್ ಬೈಪಾಸ್‌ನಲ್ಲಿ ನಡೆದಿದೆ. ವಿಆರ್‌ಎಲ್ ಬಸ್ ಹೈದರಾಬಾದ್‌ನಿಂದ ಬೆಳಗಾವಿಗೆ ಹೊರಟಿತ್ತು. ತೆಲಂಗಾಣದ ಮಕ್ತಲ್ ಬಳಿಯ ಓಬಳಾಪುರಂ ಗ್ರಾಮದ ಮಲ್ಲೇಶ್, ಸೀನಪ್ಪ ಮತ್ತು ಬಾಲರಾಜು ಎಂಬುವರಿಗೆ ಸೇರಿದ 150 ಕ್ಕೂ ಹೆಚ್ಚು ಕುರಿಗಳು ತೆಲಂಗಾಣದಿಂದ ರಾಯಚೂರು ಮಾರ್ಗವಾಗಿ ಬರುತ್ತಿದ್ದವು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ವಿಆರ್‌ಎಲ್ ಬಸ್ ಕುರಿಗಳ ಮೇಲೆ ಹರಿದಿದೆ. ಘಟನೆಯಲ್ಲಿ 125 ಕುರಿಗಳು ಮೃತಪಟ್ಟಿವೆ, 18 ಕುರಿಗಳ ಸ್ಥಿತಿ ಗಂಭೀರವಾಗಿದೆ.

ಅದೃಷ್ಟವಶಾತ್ ಕೂದಲೆಳೆ ಅಂತರದಲ್ಲಿ ಕುರಿಗಾಹಿಗರು ಪಾರಾಗಿದ್ದಾರೆ. ಸ್ಥಳಕ್ಕೆ ರಾಯಚೂರು ಗ್ರಾಮೀಣ ಠಾಣೆ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಮೊದಲನೇ ಪುಟದಿಂದ...

### ಬಿಗ್ ಶಾಕ್

**ಯಾರು ಆಗ್ತಾರೆ ಎನ್‌ಡಿಎ ಅಭ್ಯರ್ಥಿ:** ಇನ್ನು ಕೆಳದಿನಗಳ ಹಿಂದಷ್ಟೇ ಚನ್ನಪಟ್ಟಣ ಬೈ ಎಲೆಕ್ಷನ್ ವಿಚಾರವಾಗಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸಭೆ ನಡೆಸಿದ್ದರು. ಈ ವೇಳೆ ಮಾತನಾಡಿದ್ದ ನಿಖಿಲ್, ಈಗಾಗಲೇ ಸಿಪಿ ಯೋಗೇಶ್ವರ್ ಕೂಡ ಸಭೆಗಳನ್ನು ಮಾಡುತ್ತಿದ್ದಾರೆ. ನಾವು ಕೂಡ ನಮ್ಮ ಕಾರ್ಯಕರ್ತರ ಜೊತೆ ಸಭೆ ಮಾಡುತ್ತಿದ್ದೇನೆ. ಒಟ್ಟಾರೆಯಾಗಿ ಎನ್.ಡಿ.ಎ ಅಭ್ಯರ್ಥಿ ಕಣಕ್ಕಿಳಿತ್ತಾರೆ, ನಾನು ನಿಲ್ಲುತ್ತೇನೆ ಇನ್ಯಾರೋ ನಿಲ್ಲುತ್ತಾರೆ ಸದ್ಯಕ್ಕೆ ಆ ಪ್ರಶ್ನೆ ಇಲ್ಲ. ಇನ್ನು ಚುನಾವಣೆ ದಿನಾಂಕ ಪ್ರಕಟ ಆಗಿಲ್ಲ, ಕಾರ್ಯಕರ್ತರ ಭಾವನೆಗೆ ತಕ್ಕಂತೆ ಕೆಲ್ಸ ಮಾಡ್ತೀವಿ ಎಂದು ಹೇಳಿದ್ದರು.

**ಕಾಂಗ್ರೆಸ್ ಆಪರೇಷನ್ ಹಸ್ತ ಪರಿಣಾಮ ಬೀರಲ್ಲ:** ಸಿ.ಪಿ.ಯೋಗೇಶ್ವರ್ ಮಾತನಾಡಿದ್ದು, ಡಾ.ಸಿ.ಎನ್. ಮಂಜುನಾಥ್ ನನ್ನ ಪರವಾಗಿದ್ದಾರೆ, ಅವರು ದಂಪತಿ ಸಮೇತ ನನಗೆ ಬೆಂಬಲ ನೀಡ್ತಿದ್ದಾರೆ. ಅವರ ಆಶೀರ್ವಾದ ಯಾವಾಗಲೂ ನನ್ನ ಜೊತೆ ಇರುತ್ತೆ. ಹಾಗಾಗಿ ಅವರ ಮೇಲೆ ನನಗೆ ಸದಾ ಗೌರವ ಇದೆ. ಚನ್ನಪಟ್ಟಣ ಉಪಚುನಾವಣೆ ಸಂಬಂಧ ಈಗಾಗಲೇ ಐದು ಪಂಚಾಯ್ತಿ ವ್ಯಾಪ್ತಿಯ ಪ್ರಮುಖರ ಸಭೆ ಮಾಡಿದ್ದೇನೆ, ಜನ ನನಗೆ ಸೂಕ್ತ ಸ್ಪಂದನೆ ನೀಡ್ತಿದ್ದಾರೆ. ಎನ್ಡಿಎ ಅಭ್ಯರ್ಥಿ ಆಗಿ ನಾನು ಬರ್ತಿನಿ, ಆಶೀರ್ವಾದ ಮಾಡಿ ಅಂತ ಕೇಳ್ತಿದ್ದೇನೆ. ಇದಕ್ಕೆ ಜನರ ಪ್ರತಿಕ್ರಿಯೆ ಚೆನ್ನಾಗಿ ಸಿಗ್ತಿದೆ ಎಂದರು.

### ರೇವಣ್ಣ ಸವಾಲ್

ಹಾಸನಕ್ಷೇತ್ರದಗೆಲುವಿನಬಗ್ಗೆಹೆಚ್ಚುತಲೆಕೆಡಿಸಿಕೊಂಡಿದ್ದರಿಂದ ಸಕಲೇಶಪುರದಲ್ಲಿ ಸೋಲಬೇಕಾಯಿತು. ದೇವೇಗೌಡರು, ಕುಮಾರಣ್ಣ, ರೇವಣ್ಣ ನಿಮ್ಮಂತಹ ಪುಣ್ಯಾತ್ಮರಿಂದ ಉಳಿದಿದ್ದಾರೆ. ಪಾಪ ಪ್ರಜ್ವಲ್‌ಗೂ ಗೊತ್ತಾಗಲ್ಲ, ಅವನು ಒಳ್ಳೆಯ ಹುಡುಗ. ನಮ್ಮ ದುಡ್ಡು ತಗೊಂಡು ಅದನ್ನು ತಗೊಂಡು ಬೇರೆ ಎಲ್ಲೋ ಹಾಕಿದ್ದರು. ಅವರೆಲ್ಲಾ ನನ್ನ ಕೈಗೆ ಸಿಗದೇ ಎಲ್ಲಿಗೆ ಹೋಗುತ್ತಾರೆ. ಇನ್ನೂ ಮೂರು ವರ್ಷ ಸ್ವಲ್ಪ ಸುಮ್ಮನಿರಿ. ಬಡ್ಡಿ ಸಮೇತ ತೀರಿಸದಿದ್ದರೆ ನಾನು ದೇವೆಗೌಡರ ಮಗನೇ ಅಲ್ಲ ಎಂದು ತಿರುಗೇಟು ನೀಡಿದ್ದಾರೆ.

### ದುಬಾರಿ ಕಚೇರಿ

**ಪಾಲಿಕೆ ಕಚೇರಿಯಲ್ಲೇ ಕಡತ ಇಡಲೂ ಇಲ್ಲ ಸಾಕಷ್ಟು ಜಾಗ!:** ಪಾಲಿಕೆ ಕಚೇರಿಯಲ್ಲಿಯೇ ಕಡತಗಳನ್ನು ಇಡುವುದಕ್ಕೂ ಸಾಕಷ್ಟು ಜಾಗ ಇಲ್ಲದಂತಹ ಪರಿಸ್ಥಿತಿ ಇರುವಾಗ ಎಂಎಲ್‌ಸಿಗೆ 55 ರೂಪಾಯಿ ಲಕ್ಷ ವೆಚ್ಚದಲ್ಲಿ ಇಷ್ಟು ದೊಡ್ಡ ಕಚೇರಿ ಯಾಕೆ ಎಂದು ಜನ ಪ್ರಶ್ನೆ ಮಾಡುತ್ತಿದ್ದಾರೆ. ಸ್ವತ ನಗರಾಭಿವೃದ್ಧಿ ಸಚಿವರಿಗೂ ಇಷ್ಟು ದೊಡ್ಡದಾದ ಕಚೇರಿ ಇಲ್ಲದಿರುವಾಗ ಐವನ್ ಡಿಸೋಜಾಗೆ ಯಾಕೆ ಎಂದು ಸಾಮಾಜಿಕ ಕಾರ್ಯಕರ್ತ ಹನುಮಂತ ಕಾಮತ್ ಪ್ರಶ್ನಿಸಿದ್ದಾರೆ.

ಈ ಕಚೇರಿ ಎಂಎಲ್‌ಸಿ ಐವನ್ ಡಿಸೋಜಾಗೆ ಮಾತ್ರವಲ್ಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕೂಡ ಇಲ್ಲಿಂದಲೇ ಕಾರ್ಯ ನಿರ್ವಹಿಸುತ್ತದೆ ಎಂಬುದು ಕಾಂಗ್ರೆಸ್ ನಾಯಕರ ವಾದ. ಒಟ್ಟಿನಲ್ಲಿ ಈ ಕಚೇರಿ ನಿರ್ಮಾಣಕ್ಕಾಗಿ ಪಾಲಿಕೆಯ ಹಣವನ್ನೇ ಬಳಕೆ ಮಾಡುತ್ತಿದ್ದು ಇಂತಹ ಕಚೇರಿಯ ಅವಶ್ಯಕತೆ ಇದೆಯಾ ಎಂಬ ಪ್ರಶ್ನೆ ಜನರಲ್ಲಿ ಮೂಡಿರುವುದು ಸುಳ್ಳಲ್ಲ.

### ಯುವಕ ಪೋಸ್ಟ್

ಇದನ್ನು ಲಘುವಾಗಿ ತೆಗೆದುಕೊಳ್ಳಬಾರದು, ಇದು ದೇಶದ ಪ್ರಶ್ನೆ. ಈ ಯುವಕರ ತಲೆಕೆಡಿಸಿದ್ದು ಯಾರೆಂದು ತನಿಖೆಯಾಗಬೇಕು. ಇದು ದೇಶಕ್ಕೆ ಬೆಂಕಿ ಹಚ್ಚುವ ಷಡ್ಯಂತ್ರದ ಭಾಗವಾಗಬಾರದು ಎಂದು ಪರಿಷತ್‌ನ ಬಿಜೆಪಿ ಸದಸ್ಯ ಸಿ.ಟಿ.ರವಿ ಹೇಳಿದರು.

ಇವರಿಗೆ ಪ್ಯಾಲೆಸ್ತೀನ್ ಧ್ವಜ, ಟೀ ಶರ್ಟ್ ಸಿಕ್ಕಿದ್ದೆಲ್ಲಿ, ತಯಾರಿಸಿದ್ದೆಲ್ಲಿ? ಇದರ ಬಗ್ಗೆ ಪೊಲೀಸರು ತನಿಖೆ ಮಾಡಬೇಕು. ರಾಜ್ಯದಾದ್ಯಂತ ವರದಿಯಾಗಿರುವ ಪ್ಯಾಲೆಸ್ತೀನ್ ಧ್ವಜ ಹಾರಾಟ ಮತ್ತು ಘೋಷಣೆ ಪ್ರಕರಣಗಳನ್ನು ಗಂಭೀರವಾಗಿ ತೆಗೆದುಕೊಂಡು, ತನಿಖೆ ನಡೆಸಬೇಕು ಎಂದು ಸಿಟಿ ರವಿ ಆಗ್ರಹಿಸಿದರು.

### ಬೂದಿ ಮುಚ್ಚಿದ ಕೆಂಡ!

ಈ ಘಟನೆಯಿಂದಾಗಿ ಬೆಳ್ಳಂಬೆಳಿಗ್ಗೆ ಜನಜಂಗುಲಿಯಿಂದ ತುಂಬಿರ್ತಿದ್ದ ಇಮಾಂ ನಗರದ ಜನನಿಬಿಡ ರಸ್ತೆಗಳು ಖಾಲಿಖಾಲಿಯಾಗಿದ್ದು ಬಿಕೊ ಎನ್ನುತ್ತಿವೆ. ಇಲ್ಲಿರುವ ಮಸೀದಿ ಬಳಿ 10ಕ್ಕೂ ಹೆಚ್ಚು ಪೊಲೀಸ್ ವಾಹನಗಳನ್ನು ನಿಲ್ಲಿಸಿ ಬಿಗಿ ಭದ್ರತೆ ಒದಗಿಸಲಾಗಿದೆ. ಹಾಗೆಯೇ ಬೆಳಗಿನ ಜಾವ 5 ಗಂಟೆಗೆ ವ್ಯಾಪಾರ ವಹಿವಾಟಿಗೆ ತೆರಳುತಿದ್ದ ಜನರು ತಡವಾಗಿ ಹೊರಬರ್ತಿದ್ದು, ನಾಗರೀಕರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ.

ಗಣೇಶ ವಿಸರ್ಜನೆ ವೇಳೆ ಕಲ್ಲುತೂರಾಟ ನಡೆಸಿದ್ದು, ಏಕಾಏಕಿ ಮೆರವಣಿಗೆಯಲ್ಲಿ ಕಿಡಿಗೇಡಿಗಳು ಕಲ್ಲುತೂರಾಟ ಮಾಡಿದ್ದಾರೆ. ನಗರದ ಅರಳಿಮರ ಸರ್ಕಲ್ ಬಳಿ ಮೊದಲು ಕಲ್ಲು ತೂರಾಟ ಶುರುವಾಗಿದ್ದು, ಬಳಿಕ ಕೆ.ಆರ್ ರಸ್ತೆ, ಹಂಸಬಾವಿ ಸರ್ಕಲ್, ಕೆಆರ್ ಮಾರ್ಕೆಟ್ ಸೇರಿದಂತೆ ಬಂಬೂ ಬಜಾರ್ ರಸ್ತೆ, ಮಟ್ಟಿಕಲ್ಲು ಏರಿಯಾದಲ್ಲಿಯೂ ಕಲ್ಲುತೂರಾಟ ನಡೆದಿದೆ. ತಕ್ಷಣವೇ ಘಟನಾಸ್ಥಳಕ್ಕೆ ಆಗಮಿಸಿದ ಪೊಲೀಸರು ಎಷ್ಟೇ ನಿಯಂತ್ರಿಸಿದರೂ ಕಿಡಿಗೇಡಿಗಳು ಕಲ್ಲು ತೂರಾಟ ಮುಂದುವರಿಸಿದ್ದು, ಪೊಲೀಸರ ಎದುರೇ ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿದ್ದಾರೆ. ಪೊಲೀಸರು ಕೂಡ ಕಲ್ಲಿನಿಂದ ರಕ್ಷಿಸಿಕೊಳ್ಳಲು ಬೋರ್ಡ್ ಹಿಡಿದುಕೊಂಡು ತಿರುಗಾಡುವಂತಾಗಿದೆ.

ಸ್ಥಳಕ್ಕೆ ಪೊಲೀಸರು ಆಗಮಿಸುತ್ತಲೇ ಕಿಡಿಗೇಡಿಗಳು ಅಲ್ಲಿಂದ ಪಾರಾಗಿ, ಏರಿಯಾಗಳಿಗೆ ನುಗ್ಗಿ, ಮಟ್ಟಿಕಲ್ಲು, ಅನೆಕೊಂಡಗಳಲ್ಲಿ ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿದ್ದಾರೆ. ಪುಂಡರ ಕಲ್ಲು ತೂರಾಟಕ್ಕೆ ಮಟ್ಟಿಕಲ್ಲು ನಿವಾಸಿಗಳು ದೊಣ್ಣೆ ಹಿಡಿದು ಓಡಿಸಿಕೊಂಡು ಹೋಗಿದ್ದಾರೆ.

60 ರಿಂದ 70 ಯುವಕರ ಗುಂಪು ಮಟ್ಟಿಕಲ್ಲು, ಅನೆಕೊಂಡದ ಹಲವು ಕಡೆಗಳಲ್ಲಿ ಕಲ್ಲು ತೂರಾಟ ನಡೆಸಿದ್ದು, ಜೊತೆಗೆ ಮನೆ ಮುಂಭಾಗದಲ್ಲಿ ಇರುವ ವಾಹನಗಳಿಗೆ ಹಾನಿ ಮಾಡಿದ್ದಾರೆ. ಅಲ್ಲದೆ ಏಕಾಏಕಿ ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿದ ಹಿನ್ನಲೆ ಭಯದ ವಾತಾವರಣ ಸೃಷ್ಟಿಯಾಗಿದೆ. ಮನೆಗಳಿಗೂ ಕೂಡ ಬೀಗ ಹಾಕಿಕೊಂಡು ಹೋಗಿದ್ದಾರೆ. ಇದರಿಂದಾಗಿ ಕಿಡಿಗೇಡಿಗಳ ವಿರುದ್ಧ ಕ್ರಮಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸದ್ಯ ಕಲ್ಲು ತೂರಾಟ ನಡೆಸಿದ ಕಿಡಿಗೇಡಿಗಳನ್ನು ಪೊಲೀಸರು ಬಂಧಿಸಿದ್ದು, ಇದುವರೆಗೂ ಎರಡು ಕಡೆಯಿಂದ 20ಕ್ಕೂ ಹೆಚ್ಚು ಜನರನ್ನು ಸೆರೆಹಿಡಿದಿದ್ದಾರೆ. ಇಡೀ ರಾತ್ರಿ ಹಳೇ ದಾವಣಗೆರೆಯನ್ನು ಪೊಲೀಸರು ಗಸ್ತು ಹೊಡೆದಿದ್ದಾರೆ. ಬೆಳ್ಳಂಬೆಳಿಗ್ಗೆ ಜನಜಂಗುಳಿಯಿಂದ ತುಂಬಿರುತ್ತಿದ್ದ ರಸ್ತೆಗಳು ಖಾಲಿಯಾಗಿದ್ದು, ಬಿಕೊ ಎನ್ನುತ್ತಿವೆ. ಹಾಲು ಖರೀದಿಸಲು ಕೂಡ ಅರಳಿಮರ ಸರ್ಕಲ್ ಜನ ಮನೆಯಿಂದ ಹೊರಬರುತ್ತಿಲ್ಲ. ಒಟ್ಟಿನಲ್ಲಿ ದಾವಣಗೆರೆಯ ಇಮಾಂನಗರ ಬೂದಿ ಮುಚ್ಚಿದ ಕೆಂಡದಂತಾಗಿದ್ದು, ಭಯದ ವಾತಾವರಣ ಸೃಷ್ಟಿಯಾಗಿದೆ.

### ಸೋಂಕು?

ಹೇಳಲಾಗುತ್ತಿದೆ. ಮಾರುಕಟ್ಟೆಯನ್ನು ಮುಚ್ಚಿದ ನಂತರ ಜನವರಿ 2020 ರಲ್ಲಿ ಮಾದರಿಗಳನ್ನು ಸಂಗ್ರಹಿಸಲಾಗಿದೆ ಮತ್ತು ಅವುಗಳನ್ನು ನೇರವಾಗಿ ಪ್ರಾಣಿಗಳು ಅಥವಾ ಜನರಿಂದ ತೆಗೆದುಕೊಳ್ಳಲಾಗಿಲ್ಲ ಆದರೆ ವನ್ಯಜೀವಿಗಳನ್ನು ಮಾರಾಟ ಮಾಡುವ ಸ್ಟಾಲ್‌ಗಳು ಮತ್ತು ಚರಂಡಿಗಳಿಂದ ತೆಗೆದುಕೊಳ್ಳಲಾಗಿದೆ.

ಚೀನಾದ ಅಧಿಕಾರಿಗಳು ಹಂಚಿಕೊಂಡಿರುವ ಈ ರೀತಿಯ ಡೇಟಾದಿಂದ, ಪ್ರಾಣಿಗಳು (ಮಾರುಕಟ್ಟೆಯಲ್ಲಿ) ಸೋಂಕಿಗೆ ಒಳಗಾಗಿವೆಯೇ ಅಥವಾ ಇಲ್ಲವೇ ಎಂದು ನಾವು ಖಚಿತವಾಗಿ ಹೇಳಲು ಸಾಧ್ಯವಿಲ್ಲ.

2019 ರ ಕೊನೆಯಲ್ಲಿ ಈ ಮಾರುಕಟ್ಟೆಯಲ್ಲಿ ಕಾಡು ಪ್ರಾಣಿಗಳು ಇದ್ದವು ಎಂದು ನಮ್ಮ ಅಧ್ಯಯನವು ದೃಢಪಡಿಸುತ್ತದೆ, ಮುಖ್ಯವಾಗಿ ರಕೂನ್ ನಾಯಿಗಳು ಮತ್ತು ಸಿವೆಟ್‌ಗಳಂತಹ ಜಾತಿಗಳಿಗೆ ಸೇರಿದೆ.

### ಕಾರು

ಕುಮಾರ್ ತೆಗೆದ ಗೋಪ್ರೊ ಕ್ಯಾಮೆರಾದಲ್ಲಿ ಈ ಅಪಘಾತ ಸೆರೆಯಾಗಿದೆ. 17 ಸೆಕೆಂಡ್‌ಗಳ ವೀಡಿಯೊದಲ್ಲಿ ಗಾರ್ಗ್ ಅವರು ತಿರುವಿನಲ್ಲಿ ಹೋಗುತ್ತಿದ್ದಾಗ ಎದುರಿನಿಂದ ಕಾರೊಂದು ಬಂದು ಡಿಕ್ಕಿ ಹೊಡೆದಿದೆ. ಕೂಡಲೇ ಗಾರ್ಗ್ ಸಾವನ್ನಪ್ಪಿದ್ದಾರೆ.

ಘಟನಾ ಸ್ಥಳದಲ್ಲಿ ಪ್ರಯಾಣಿಕರು ಜಮಾಯಿಸಿದರು ಕೂಡಲೇ ಆಂಬ್ಯುಲೆನ್ಸ್‌ಗೆ ಕರೆ ಮಾಡಿದರು, ಐದು ನಿಮಿಷಗಳಲ್ಲಿ ಆಂಬ್ಯುಲೆನ್ಸ್ ಆಗಮಿಸಿತು ಮತ್ತು ಗಾರ್ಗ್ ಅವರನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ದರು, ಆದರೆ ವೈದ್ಯರು ಬರುವಾಗಲೇ ಅವರು ಸಾವನ್ನಪ್ಪಿದ್ದಾರೆ ಎಂದು ಘೋಷಿಸಿದರು.

ಹಿಂದೂಸ್ತಾನ್ ಟೈಮ್ಸ್ ವರದಿಯ ಪ್ರಕಾರ, ಗಾರ್ಗ್ ಮತ್ತು ಕುಮಾರ್ ಅವರು ಡಿಎಲ್‌ಎಫ್ ಡೌನ್‌ಟೌನ್‌ನಿಂದ ಹೊರಟು ನಂತರ ಆಂಬಿಯೆನ್ಸ್ ಮಾಲ್‌ನಲ್ಲಿ ಸ್ನೇಹಿತರ ಭೇಟಿ ಮಾಡುವ ಉದ್ದೇಶದಿಂದ ದ್ವಾರಕಾದಿಂದ ಗರ್ಗ್ ಮತ್ತು ನ್ಯೂ ಪಾಲಂ ವಿಹಾರ್‌ನಿಂದ ಕುಮಾರ್ ಬೇರೆ ಬೇರೆ ಸ್ಥಳಗಳಿಂದ ಹೊರಟಿದ್ದರು.

ರಾಷ್ಟ್ರೀಯ ಹೆದ್ದಾರಿಯಲ್ಲಿ 3 ಲಾರಿಗಳು, 1 ಸ್ಲೀಪರ್ ಕೋಚ್ ಬಸ್, ಕಾರು ನಡುವೆ ಸರಣಿ ಅಪಘಾತ; ಹಲವರಿಗೆ ಗಾಯ

ಸಿಕಂದರ್‌ಪುರ–ಸೈಬರ್‌ಹಬ್ ಮೇಲ್ಸೇತುವೆಯನ್ನು ದಾಟಿದ ನಂತರ, ಅವರು ಒಂದು ತಿರುವಿನ ಬಳಿಗೆ ಬಂದಾಗ ವೇಗವಾಗಿ ಬಂದ ಕಾರು ಇದ್ದಕ್ಕಿದ್ದಂತೆ ತಪ್ಪು ದಿಕ್ಕಿನಿಂದ ಬಂದಿತು. ಕಾರು ಗಾರ್ಗ್ ಅವರ ಮೋಟಾರ್ ಸೈಕಲ್‌ಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ.

ಪೊಲೀಸ್ ಅಧಿಕಾರಿ ಮಾತನಾಡಿ, ಅಪಘಾತವನ್ನು ತಪ್ಪಿಸಲು ಕಾರು ಚಾಲಕನಿಗೆ ಅಥವಾ ಬೈಕ್ ಸವಾರನಿಗೆ ಯಾವುದೇ ದಾರಿ ಇರಲಿಲ್ಲ, ಏಕಾಏಕಿ ಎದುರಿಗೆ ಬಂದ ಕಾರಿಗೆ ಬೈಕ್ ಡಿಕ್ಕಿ ಹೊಡೆದಿದೆ. ಬೈಕ್ ಗುರುತಿಸಲಾಗದಷ್ಟು ನುಜ್ಜುಗುಜ್ಜಾಗಿದೆ ಎಂದು ಹೇಳಿದ್ದಾರೆ.

# ಸಿರಿ ರೈತ ಕಂಪನಿಯಿಂದ ಅರ್ಬನ್ ಮಳಿಗೆ ಸ್ಥಾಪನೆಗೆ ಧನ ಸಹಾಯ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ಸಿರಿ ರೈತ ಉತ್ಪಾದಕ ಕಂಪನಿಯಿಂದ ರೈತನ ಉತ್ಪನ್ನಗಳನ್ನು ಪಟ್ಟಣ ಪ್ರದೇಶಗಳಲ್ಲಿ ಮಾರಾಟ ಮಾಡಲು ಅರ್ಬನ್ ಮಳಿಗೆ ತೆರೆಯಲು ಬಂಡವಾಳ ಹೂಡಲಿದೆ. ಅಲ್ಲದೆ ಗ್ರಾಮೀಣ ಸಂಚಾರಿ ವಾಹನಕ್ಕೆ ಧನ ಸಹಾಯ ನೀಡಲಿದೆ. ಜೊತೆಗೆ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ತರಬೇತಿ ನೀಡಿ ಮಾರುಕಟ್ಟೆ ವ್ಯವಸ್ಥೆ ಮಾಡಲು ಸಿದ್ದವಿದೆ. ರೈತರು ಇದರ ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗುವಂತೆ ಧಾರವಾಡ ಸಿರಿ ಸಂಸ್ಥೆಯ ಘಟಕದ ನಿರ್ದೇಶಕ ದಿನೇಶ್ ಅವರು ತಿಳಿಸಿದರು.

ಹುಳಿಯಾರು ಹೋಬಳಿಯ ಯಳನಾಡು ಗ್ರಾಮದಲ್ಲಿ ಗುರುವಾರ ನಡೆದ ಚಿಕ್ಕನಾಯಕನಹಳ್ಳಿ ಸಿರಿ ರೈತ ಉತ್ಪಾದಕ ಕಂಪನಿಯ ಐದನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಸಿರಿ ರೈತ ಉತ್ಪಾದಕ ಕಂಪನಿಯಿಂದ ಎಫ್‌ಐಜಿ ಘಟಕಗಳನ್ನು ರಚಿಸಲಾಗಿದೆ. ಈ ಘಟಕದ ಸದಸ್ಯರು ಪ್ರತಿ ತಿಂಗಳು ಸಭೆ ಸೇರಿ ಕಂಪನಿಯ ಹಣಕಾಸಿನ ವಹಿವಾಟಿನ ಬಗ್ಗೆ ಮಾಹಿತಿ ಪಡೆಯಬಹುದು. ರೈತರು ಬೆಳೆಯುವ ಕೃಷಿ ಉತ್ಪನ್ನಗಳ ಮಾರುಕಟ್ಟೆಯ ಬಗ್ಗೆ ಚರ್ಚಿಸಬಹುದು. ಮೌಲ್ಯವರ್ಧಿತ ಉತ್ಪನ್ನಗಳ ತರಬೇತಿ ಅಗತ್ಯತೆಯ ಬಗ್ಗೆ ತಿಳಿಸಬಹುದು. ಹೊಸ ನಿರ್ದೇಶಕರ ಆಯ್ಕೆ ಸಂದರ್ಭದಲ್ಲಿ ಕ್ರಿಯಾಶೀಲ ವ್ಯಕ್ತಿಗಳನ್ನ ಆಯ್ಕೆ ಮಾಡಬಹುದು. ಒಟ್ಟಾರೆ ಕಂಪನಿ ಜೊತೆಗೆ ರೈತರೂ ಆರ್ಥಿಕವಾಗಿ ಬೆಳೆಯುವ ನಿಟ್ಟಿನಲ್ಲಿ ಎಲ್ಲರೂ ಮಾಸಿಕ ಸಭೆಯಲ್ಲಿ ಭಾಗವಹಿಸಿ ಸೂಕ್ತಸಲಹೆ ಸೂಚನೆ ನೀಡುವಂತೆ ತಿಳಿಸಿದರು.



ಚಿಕ್ಕನಾಯಕನಹಳ್ಳಿ ಸಿರಿ ರೈತ ಉತ್ಪಾದಕ ಕಂಪನಿಯ ಸಿಇಒ ಟಿ.ಜಯರಾಮು ಅವರು ಮಾತನಾಡಿ ಸಿರಿ ರೈತ ಕಂಪನಿ ಪ್ರಸಕ್ತ ಸಾಲಿನಲ್ಲಿ 7 ಲಕ್ಷ ರೂಪಾಯಿಗಳ ಬಿತ್ತನೆ ಬೀಜ, 7 ಲಕ್ಷ ರೂಪಾಯಿಗಳ ಸಿರಿಧಾನ್ಯ, 16 ಲಕ್ಷ ರೂಪಾಯಿಗಳ ಗೊಬ್ಬರ, 1.50 ಲಕ್ಷ ರೂಪಾಯಿಗಳ ಟಾರ್ಪಲ್, 1.20 ಲಕ್ಷ ರೂಪಾಯಿಗಳ ಸಿರಿಧಾನ್ಯದ ಉತ್ಪನ್ನಗಳ ಹಾಗೂ 3 ಲಕ್ಷ ರೂಪಾಯಿಗಳ ಇತರೆ ಕೃಷಿ ಉತ್ಪನ್ನಗಳ ಸೇರಿ ಒಟ್ಟು 36.70 ಲಕ್ಷ ರೂಪಾಯಿಗಳಷ್ಟು ಮಾರಾಟ ಮಾಡಿ 2.50 ಲಕ್ಷ ರು ಆದಾಯ ಗಳಿಸಿದೆ ಎಂದು ತಿಳಿಸಿದರು.

ಯಳನಾಡು-ಅರಸೀಕೆರೆ ಸಂಸ್ಥಾನದ ಜ್ಞಾನಪ್ರಭು ಸಿದ್ದರಾಮೇಶ್ವರ ದೇಶಿಕೇಂದ್ರ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು. ಸಿರಿ ರೈತ ಕಂಪನಿಯ ಅಧ್ಯಕ್ಷ ಪರಮೇಶ್ವರಯ್ಯ, ರೈತ ಉತ್ಪಾದಕ ಕಂಪನಿ ಯೋಜನಾಧಿಕಾರಿ ನಿರಿಲೇಶ್, ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿ ಜಯಾನಂದ್, ರಾಮಚಂದ್ರ, ಸಿರಿ ಕೃಷಿ ಅಂಜನ್ ಕುಮಾರ್, ಗಾಯತ್ರಿದೇವಿ, ವಲಯ ಮೇಲ್ವಿಚಾರಕ ಪರಮೇಶ್, ಕೃಷಿ ಮೇಲ್ವಿಚಾರಕ ಸಿದ್ದರಾಜು, ಸೇವಾಪ್ರತಿನಿಧಿಗಳು, ಕಂಪನಿಯ ಶೇರುದಾರರು ಉಪಸ್ಥಿತರಿದ್ದರು.

### ಸರ್ಕಾರಿ ನೌಕರರಿಗೆ ಸಿಕ್ಕಾಪಟ್ಟೆ ವೇತನ, ರೈತನ ಬೆಳೆಗೆ ಬೆಲೆಯಿಲ್ಲ

**ಸರ್ಕಾರಿ ಸರ್ಕಾರಿ ನೌಕರರಿಗೆ 7 ನೇ ವೇತನ ಜಾರಿ ಮಾಡಿ ಸಿಕ್ಕಾಪಟ್ಟೆ ಸಂಬಳ ನೀಡುತ್ತಿದೆ. ಕೆಲ ಇಲಾಖೆಯ ನೌಕರರಿಗೆ ದಿನಕ್ಕೆ 10 ಸಾವಿರ ರೂ. ವೇತನ ಸಿಗುತ್ತಿದೆ. ಆದರೆ ರೈತ ತಿಂಗಳಾನುಗಟ್ಟಲೆ ಹಗಲು, ರಾತ್ರಿ ಎನ್ನದೆ, ನಿದ್ರಾಹಾರ ಇಲ್ಲದೆ, ಕಾಡುಪ್ರಾಣಿಗಳ, ವಿಷಜಂತುಗಳ ಭಯ ಲೆಕ್ಕಿಸದೆ ನಿರುಕಟ್ಟಿ ಪ್ರಾಣಿಪಕ್ಷಿಗಳಿಂದ ಬೆಳೆ ರಕ್ಷಿಸಿ ನಮಗೆ ತಿನ್ನಲು ಕೊಟ್ಟು 10 ಸಾವಿರ ಆದಾಯಗಳಿಸುವುದೂ ಸಹ ಕಷ್ಟ, ರೈತ ದೇಶದ ಬೆನ್ನೆಲುಬು ಎನ್ನುವ ಸರ್ಕಾರ ತಕ್ಕ ಆರ್ಥಿಕ ತಾರತಮ್ಯದಿಂದಾಗಿ ರೈತರ ಬೆನ್ನು ಮೂಳೆ ಮುರಿಯುತ್ತಿದ್ದಾನೆ. ದೇಶದ ಅಭಿವೃದ್ದಿ ರೈತನ ಅಭಿವೃದ್ದಿಯಿಂದ ಮಾತ್ರ ಸಾಧ್ಯ ಎನ್ನುವ ಸತ್ಯ ಅರಿತು ಸರ್ಕಾರ ರೈತನ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನೀಡಬೇಕು.**

**। ಜ್ಞಾನಪ್ರಭು ಸಿದ್ದರಾಮೇಶ್ವರ ದೇಶಿಕೇಂದ್ರ ಸ್ವಾಮೀಜಿ,**
ಯಳನಾಡು-ಅರಸೀಕೆರೆ ಸಂಸ್ಥಾನ

# ಇ-ಆಸ್ತಿ ತಂತ್ರಾಂಶದೊಂದಿಗೆ ಕಾವೇರಿ ತಂತ್ರಾಂಶ ಸಂಯೋಜನೆ

**ಚಿಕ್ಕಬಳ್ಳಾಪುರ:** ಕೃಷಿ ಜಮೀನಿನ ನೋಂದಣಿಗೆ ಭೂಮಿ ತಂತ್ರಾಂಶದೊಂದಿಗೆ 2006 ರಿಂದಲೇ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿರುತ್ತದೆ. ಹಾಗೂ ಜಮೀನಿನ ಸರ್ವೆ ನಕ್ಷೆ (ಸ್ಕೆಚ್)-ನಮೂನೆ 11 ಇ ಇರುವ ಮೋಜಣಿ ತಂತ್ರಾಂಶದೊಂದಿಗೆ ಹಾಗೂ ಕಾವೇರಿ ತಂತ್ರಾಂಶವನ್ನು ದಿನಾಂಕ:05/10/2016 ರಿಂದ ಸಂಯೋಜನೆ ಮಾಡಲಾಗಿದೆ ಹಾಗೂ ಗ್ರಾಮ ಪಂಚಾಯತ ವ್ಯಾಪ್ತಿಯ ಕೃಷಿಯೇತರ ಸ್ವತ್ತುಗಳ ದಸ್ತಾವೇಜುಗಳ ನೋಂದಣಿಗಾಗಿ ಇ-ಸ್ವತ್ತು ತಂತ್ರಾಂಶವನ್ನು ದಿನಾಂಕ:18/07/2014 ರ ಸುತ್ತೋಲೆಯಂತೆ ಸಂಯೋಜನೆಗೊಳಿಸಲಾಗಿದೆ. ಈ ಮೇಲೆ ಕಾಣಿಸಿದ ಆಸ್ತಿಗಳನ್ನು ಹೊರತು ಪಡಿಸಿ ಅಂದರೆ ನಗರ ಪ್ರದೇಶಗಳಲ್ಲಿನ ಕೃಷಿಯೇತರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಆಸ್ತಿ (ತಂತ್ರಾಂಶ) ವನ್ನು ರೂಪಿಸಿದ್ದು ಇ-ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ತಂತ್ರಾಂಶದೊಂದಿಗೆ ಪ್ರಾಯೋಗಿಕವಾಗಿ ರಾಮನಗರ ಮತ್ತು ಕನಕಪುರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕಾವೇರಿ-2.0 ತಂತ್ರಾಂಶದೊಂದಿಗೆ ಸಂಯೋಜನೆ ಮಾಡಿ ದಿನಾಂಕ:29/01/2020 ರಿಂದ ನೋಂದಣಿ ಮಾಡುತ್ತಿರುವುದು ಯಶಸ್ವಿಯಾಗಿರುತ್ತದೆ. ನಗರಾಭಿವೃದ್ಧಿ ಇಲಾಖೆಯು ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ-ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ಸಮ್ಮತಿ ನೀಡಿರುತ್ತಾರೆ. ಮುಂದುವರೆದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ಥಿಗಳ ನೋಂದಣಿಯನ್ನು ಇ-ಆಸ್ತಿ ತಂತ್ರಾಂಶದಿಂದ ಕಡ್ಡಾಯವಾಗಿ ಮಾಹಿತಿ ಪಡೆದು ನೋಂದಾಯಿಸಲು ಇ-ಆಸ್ತಿ ತಂತ್ರಾಂಶವನ್ನು ಕಾವೇರಿ-2 ತಂತ್ರಾಂಶದೊಂದಿಗೆ ದಿನಾಂಕ : 23-09-2024 ರಿಂದ ಜಾರಿಗೆ ಬರುವಂತೆ ಸರ್ಕಾರದ ಆದೇಶ ಸಂಖ್ಯೆ: ಕಂಇ/20/ಎಂಎನ್‌ಎಂಯು/2023, ದಿನಾಂಕ:17-09-2024 ರ ಆದೇಶದ ಮೂಲಕ ಆದೇಶಿಸಲಾಗಿದೆ. ಆದಕಾರಣ ದಿನಾಂಕ: 23-09-2024 ರಿಂದ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪನೋಂದಣಿ ಕಚೇರಿಗಳಲ್ಲಿ ನಗರ ಸ್ಥಳಿಯ ಸಂಸ್ಥೆಗಳ ಆಸ್ತಿಯನ್ನು ನೊಂದಾಯಿಸಲು ಆಸ್ತಿಯ ಮಾಹಿತಿಯನ್ನು ಕಡ್ಡಾಯವಾಗಿ ಇ-ಆಸ್ತಿ ತಂತ್ರಾಂಶದಿಂದಲೇ ಪಡೆಯಬೇಕಿರುತ್ತದೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಮೆಟ್ರಿಕ್-ನಂತರದ ಕೋರ್ಸುಗಳಾದ ಪಿ.ಯು.ಸಿ ಮತ್ತು ಸಮನಾಂತರ , ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, 2024-25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ, ಮತ್ತು ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಅಕ್ಟೋಬರ್ 15 ರವರೆಗೆ ವಿಸ್ತರಿಸಲಾಗಿದೆ. ಅರ್ಜಿಗಳನ್ನು https://ssp.postmatric.karnataka.gov.in/ ನಲ್ಲಿ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್ ಸೈಟ್ ವಿಳಾಸ: https://bcwd.karnataka.gov.in, , ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ 8050770005 ಇಮೇಲ್: bcwdhelpline@gmail.com ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್: postmatrichelp@karnataka.gov.in ದೂರವಾಣಿ ಸಂಖ್ಯೆ: 1902 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಯೋಜನೆಗಳಡಿ ಸಾಲ, ಇತರೆ ಸೌಲಭ್ಯಗಳಿಗೆ ಪ.ಜಾ ಜನರಿಂದ ಅರ್ಜಿ ಆಹ್ವಾನ

**ಚಾಮರಾಜನಗರ:** ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ಹಾಗೂ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ 2024-25ನೇ ಸಾಲಿನ ಪರಿಶಿಷ್ಟ ಜಾತಿಯ ಜನರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ನೀಡಲಾಗುವ ಸಾಲ ಇನ್ನಿತರ ಸೌಲಭ್ಯಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ನೇರಸಾಲ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋಕ್ರೆಡಿಟ್ (ಪ್ರೇರಣಾ) ಯೋಜನೆ, ಭೂ ಒಡೆತನದ ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬೆಂಗಳೂರು ಒನ್ ಕೇಂದ್ರಗಳಲ್ಲಿ ಸೇವಾಸಿಂಧು ಪೋರ್ಟಲ್‌ನ ಜಔಔಟಂ:// ಠಙಿಡಚಔಜ್ಞಿಛಜ್ಠ.ಎಚ್ಞಚಔಚುಚ.ಜಟಡ.ಜ್ಞಿ ಮೂಲಕ ಅಕ್ಟೋಬರ್ 10ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಮುಬಾರಕ್ ರಸ್ತೆಯ ಡಾ. ಬಿ.ಆರ್ ಅಂಬೇಡ್ಕರ್ ಭವನದ ಹತ್ತಿರದ ವಾರ್ಡ್ ನಂ-9 ರಲ್ಲಿನ ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾವ್ಯವಸ್ಥಾಪಕರು ಅಥವಾ ದೂ.ಸಂ- 08226-224133 ಅನ್ನು ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆ.ವಿ.ಕಂ ಗ್ರಾಹಕರ ಸಂವಾದ ಸಭೆ

**ಕೋಲಾರ:** ಕೋಲಾರ ನಗರ ಉಪ-ವಿಭಾಗದ ಕಛೇರಿಯಲ್ಲಿ ಸೆಪ್ಟೆಂಬರ್ 21 ರಂದು ಮೂರನೇ ಶನಿವಾರದಂದು ಮಧ್ಯಾಹ್ನ 3.00 ರಿಂದ 5.30 ಗಂಟೆಯವರೆಗೆ ಬೆವಿಕಂ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬೇಕೆಂದು ನಗರ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಓದಿನ ಕಡೆ ಹೆಚ್ಚು ಹೆಚ್ಚು ಗಮನಹರಿಸಬೇಕು

**ತುಮಕೂರು:** ಇತ್ತೀಚಿನ ದಿನಗಳಲ್ಲಿ ಭಾರತೀಯ ಸುರಕ್ಷಾ ಸಂಹಿತೆ, ಭಾರತೀಯ ನ್ಯಾಯ ಸಂಹಿತೆ, ಭಾರತೀಯ ಸಾಕ್ಷ್ಯಾ ಅಧಿ ನಿಯಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಸ್ವವಿವರವಾಗಿ ತಿಳಿಸುತ್ತಾ, ಪೋಕ್ಸೋ ಕಾಯಿದೆಯ ಕಾನೂನುಗಳ ಬಗ್ಗೆ ಹಲವು ನೈಜ ಘಟನೆಯ ಉದಾಹರಣೆಗಳ ಮೂಲಕ ವಿದ್ಯಾರ್ಥಿಗಳಿಗೆ ಮನಮುಟ್ಟುವ ಹಾಗೇ ಅರಿವು ಮೂಡಿಸಿದರು. ಮಕ್ಕಳು ಪೋಷಕರು ಪ್ರತಿ ತ್ಯಾಗಕ್ಕೆ ಬೆಲೆ ಕೊಟ್ಟಾಗ ಪೋಷಕರು ನೆಮ್ಮದಿಯ ಜೀವನ ಸಾಗಿಸುತ್ತಾರೆ. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಮೋಹಕ್ಕೆ ಬಿದ್ದು ಜನಗಳ ಬದುಕು ದುಷ್ಟಮಯವಾಗಿ ಅಂತ್ಯಗೊಳ್ಳುವುದೆಂದು ಹಲವು ನಿದರ್ಶನಗಳ ಮೂಲಕ ತಿಳಿಸಿದರು. ಆದಷ್ಟು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳಿಂದ ದೂರವಾಗಿ. ಓದಿನ ಕಡೆ ಹೆಚ್ಚು ಗಮನಹರಿಸಿ ಎಂದು ತುಮಕೂರಿನ ನ್ಯಾಯಾಧೀಶೆ ಶ್ರೀಮತಿ ನೂರ್ ಉನ್ನಿಸ್ಸಾರವರು ತಿಳಿಸಿದರು.

ನಗರದ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಪ್ರಥಮ ವರ್ಷದ ಬಿ.ಕಾಂ ಹಾಗೂ ಬಿಸಿಎ ವಿದ್ಯಾರ್ಥಿಗಳಿಗೆ ಇಂಡಕ್ಷನ್ ಕಾರ್ಯಕ್ರಮದ ಎರಡನೇ ದಿನವಾದ ಸೆ.19ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಕಾರ್ಯದರ್ಶಿಗಳಾದ ಟಿ.ಎನ್. ಚೆನ್ನಬಸವಪ್ರಸಾದ್‌ರವರು ಮಾತನಾಡುತ್ತಾ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸ ಸಮಯದಲ್ಲಿ ಬದುಕಿನಲ್ಲಿ ಗುರಿಯನ್ನು ಇಟ್ಟುಕೊಂಡು ಪ್ರಯತ್ನ ಮತ್ತು ಪರಿಶ್ರಮದ ಮೂಲಕ ತಮ್ಮ ಗುರಿಗಳನ್ನು ತಲುಪಬೇಕು. ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ನಂತರ ಉನ್ನತವಾದ ಬದುಕನ್ನು ಕಟ್ಟಿಕೊಳ್ಳಬೇಕೆಂದು ಹಾರೈಸಿದ್ದರು. ಇದೇ ಸಂದರ್ಭದಲ್ಲಿ ತುಮಕೂರಿನ ನ್ಯಾಯಾಧೀಶೆ ಶ್ರೀಮತಿ ನೂರ್ ಉನ್ನಿಸ್ಸಾರವರಿಗೆ ಅನನ್ಯ ಸಂಸ್ಥೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತ್ತು. ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಚಾರ್ಟರ್ಡ್ ಅಕೌಂಟೆಂಟ್‌ನ ಎಸ್.ವಿಶ್ವನಾಥ್, ತುಮಕೂರಿನ ಖ್ಯಾತ ಮನೋವಿಕಾಸ ತಜ್ಞರಾದ ಸಿ.ಸಿ.ಪಾವಟೆ, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ. ವಿಶ್ವಾಸ್ ಹಾಗೂ ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಮುಂತಾದವರು ಉಪಸ್ಥಿತರಿದ್ದರು.



## ಜಿಲ್ಲಾ ವಕೀಲರ ಸಂಘದ ನಿಕಟ ಪೂರ್ವ ಅಧ್ಯಕ್ಷ ಒತ್ತಾಯ

# ರಸ್ತೆಗೆ ವಿಷ್ಣುವರ್ಧನ್ ಹೆಸರಿಡಿ

**ಚಾಮರಾಜನಗರ:** ಸಾಹಸಸಿಂಹ ಡಾ ವಿಷ್ಣುವರ್ಧನ್ ರವರು ಕನ್ನಡ ಚಿತ್ರರಂಗದ ಶ್ರೇಷ್ಠ ನಟರಾಗಿ, ಮಾನವೀಯ ಮೌಲ್ಯಗಳ ಹರಿಕಾರರಾಗಿ ಕೋಟ್ಯಾಂತರ ಅಭಿಮಾನಿಗಳ ಹೃದಯದಲ್ಲಿ ನೆಲೆಸಿದ್ದಾರೆ ಎಂದು ಜಿಲ್ಲಾ ವಕೀಲರ ಸಂಘದ ನಿಕಟ ಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದು ಶೇಖರ್ ತಿಳಿಸಿದರು.

ಅವರು ನಗರದ ನ್ಯಾಯಾಲಯ ರಸ್ತೆಯಲ್ಲಿರುವ ವಿಶ್ವ ಹಿಂದೂ ಪರಿಷತ್ ಶಾಲೆಯ ಸಮೀಪ ಡಾ. ವಿಷ್ಣುವರ್ಧನ್ ಅಭಿಮಾನಿಗಳ ಸ್ನೇಹ ಬಳಗ ಹಮ್ಮಿಕೊಂಡಿದ್ದ 74ನೇ ವಿಷ್ಣುವರ್ಧನ್ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ವಿಶೇಷವಾಗಿ ತಯಾರಿಸಲ್ಪಟ್ಟ ಕೇಕ್ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿ ವಿಷ್ಣುವರ್ಧನ್ ರವರು ಭಾರತದ ಶ್ರೇಷ್ಠ ಚಲನಚಿತ್ರ ನಟರು. ಸುಸಂಸ್ಕೃತರು ಹಾಗೂ ಜೀವನ ಮೌಲ್ಯಗಳನ್ನು ಕೋಟ್ಯಾಂತರ ಅಭಿಮಾನಿಗಳಿಗೆ ನೀಡಿದವರು. ವಿಷ್ಣುವರ್ಧನ್ ರವರಚಿತ್ರಗಳು ಸಮಾಜಕ್ಕೆ ಉತ್ತಮ ಸಂದೇಶ ನೀಡಿವೆ. ಸರ್ಕಾರ ಪ್ರತಿ ವರ್ಷ ವಿಷ್ಣುವರ್ಧನ್ ಜಯಂತಿ ಆಚರಿಸಬೇಕು.ಜಿಲ್ಲಾ ಕೇಂದ್ರದಲ್ಲಿ ನಗರಸಭೆ ಒಂದು ವೃತ ಹಾಗೂ ರಸ್ತೆಗೆ ವಿಷ್ಣುವರ್ಧನ್ ರವರ ಹೆಸರನ್ನು ನಾಮಕರಣ ಮಾಡಬೇಕೆಂದು ಅಗ್ರಹಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷರು ಹಾಗೂ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್ ಋಗ್ವೇದಿ ಮಾತನಾಡಿ ಭಾರತೀಯ ಚಲನಚಿತ್ರ ರಂಗದ ಅಪರೂಪದ ವ್ಯಕ್ತಿತ್ವ ಹೊಂದಿದ್ದ ನಟ ವಿಷ್ಣುವರ್ಧನ್ ಸಂತನಂತೆ ಬದುಕಿದವರು. ಕನ್ನಡ ಚಲನಚಿತ್ರರಂಗದ ಮೂಲಕ ವಿಶ್ವಕ್ಕೆ ಅಪಾರ ಕೊಡುಗೆ ನೀಡಿದ ವಿಷ್ಣುವರ್ಧನ್ ರವರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿ ಕನ್ನಡ ನಾಡು ,ನುಡಿ ,ಜಲ, ಭಾಷೆಯ ಜೊತೆಗೆ ಸಾಂಸಾರಿಕ ಜೀವನ ,ರಾಷ್ಟ್ರ ಪ್ರೇಮ, ಸಂಸ್ಕೃತಿಯ ರಕ್ಷಣೆ, ಜೀವನದ ಹೊಂದಾಣಿಕೆ ಹಾಗೂ ಸಾಮಾಜಿಕ ಮೌಲ್ಯಗಳ ಚಿಂತನೆಯ ಆದರ್ಶ ಚಿತ್ರಗಳನ್ನು ರಚಿಸಿ ಕೋಟಿ ಕೋಟಿ ಅಭಿಮಾನಿಗಳಲ್ಲಿ ಹಾಗೂ ಜನರಲ್ಲಿ ಶ್ರೇಷ್ಠವಾದ ಮೌಲ್ಯಗಳನ್ನು ನೀಡಿ , ಮನೋಜ್ಞ ಅಭಿನಯದ ಮೂಲಕ ಮಾನವನ ಪರಿವರ್ತನೆಗೆ ಚಿತ್ರರಂಗದ ಮೂಲಕ ಪ್ರಭಾವ ಬೀರಿದ್ದಾರೆ .ಮೈಸೂರಿನಲ್ಲಿ ವಿಷ್ಣುವರ್ಧನ್ ರವರ ವಿಶೇಷವಾದ ಹಾರ್ಟ್ ಗ್ಯಾಲರಿ ಹಾಗೂ ನೆನಪಿನ ಸ್ಥಳವನ್ನು ನಿರ್ಮಿಸಿದೆ. ಬೆಂಗಳೂರಿನ ಬನಶಂಕರಿಯಿಂದ ಕೆಂಗೇರಿಯವರೆಗಿನ 14.5 ಉದ್ದದ ರಸ್ತೆಗೆ ವಿಷ್ಣುವರ್ಧನ್ ರವರ ಹೆಸರನ್ನು ಇಟ್ಟು ವಿಶ್ವದಲ್ಲಿಯೇ ಚಿತ್ರರಂಗದ ನಟರ ಹೆಸರನ್ನು ಉದ್ದದ ರಸ್ತೆಗೆ ನೀಡಿ ಗೌರವಿಸಿದೆ ಎಂದರು.



ಕಾರ್ಯಕ್ರಮದಲ್ಲಿ ಸಾಹಸಸಿಂಹ ವಿಷ್ಣುವರ್ಧನ್ ರವರ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ವಿಷ್ಣುವರ್ಧನ್ ಅಭಿಮಾನಿ ಸ್ನೇಹ ಬಳಗದ ಜ.ಸುರೇಶ್ ನಾಗ್ ಹರದನಹಳ್ಳಿ, ಡಾ. ಸುಗಂಧರಾಜ್, ಕರಿನಂಜನಪುರ ಕೂಸಣ್ಣ, ವಕೀಲ ಮಲ್ಲು, ಸಿ. ಡಿ. ಪ್ರಕಾಶ್, ಉಷಾ ಗಂಧರ್ವ ಶಿವಣ್ಣ, ಪುಟ್ಟುವರ್ಧನ್,ನಾಗೇಂದ್ರ, ದೊರೆಸ್ವಾಮಿ, ನಾಗರಾಜು, ಇಲಿಯಾಜ್ ಬಾಬು ಇದ್ದರು.

# ಬೆಳ್ಳೂರು ಗ್ರಾಪಂಗೆ ಅವಿರೋಧ ಆಯ್ಕೆ

**ಕೋಲಾರ:** ಜಿಲ್ಲಾಧಿಕಾರಿಗಳ ಆದೇಶದಂತೆ ಒಟ್ಟು 20 ಸದಸ್ಯ ಬಲ ಹೊಂದಿರುವ ಬೆಳ್ಳೂರು ಗ್ರಾಮ ಪಂಚಾಯಿತಿಯ 3ನೇ ಅವಧಿಗೆ ಅಧ್ಯಕ್ಷ ಚುನಾವಣೆ ಪ್ರಕ್ರಿಯೆ ಗುರುವಾರ ನಡೆಯಿತು. ಕೇವಲ ಒಂದೇ ಒಂದು ನಾಮಪತ್ರ ಮಾತ್ರ ಸಲ್ಲಿಕೆಯಾಗಿದ್ದರಿಂದ ಅಧ್ಯಕ್ಷ ಸ್ಥಾನದ ಅಭ್ಯರ್ಥಿ ಎಂ ಮಮತಾ ಅವರು ಅವಿರೋಧವಾಗಿ ಜಯಶೀಲರಾದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನದ ಚುನಾವಣೆ ಫಲಿತಾಂಶವನ್ನು ಚುನಾವಣಾಧಿಕಾರಿ ಪರಮೇಶ್ ಪ್ರಕಟಿಸಿದರು. ನಂತರ ಮಾಜಿ ಅಧ್ಯಕ್ಷೆ ಸರೋಜಮ್ಮ ಅವರು ತಮ್ಮ ಅಧಿಕಾರವನ್ನು ನೂತನ ಅಧ್ಯಕ್ಷೆಗೆ ಹಸ್ತಾಂತರಿಸಿದರು. ಬಳಿಕ ಗ್ರಾಮ ಪಂಚಾಯಿತಿ ಕಚೇರಿ ಹೊರಭಾಗದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ, ವಿಜಯೋತ್ಸವ ಆಚರಿಸಿದರು. ಈ ವೇಳೆ ಮಾತನಾಡಿದ ನೂತನ ಗ್ರಾಮ ಪಂಚಾಯತಿ ಅಧ್ಯಕ್ಷೆ ಎಂ ಮಮತಾ ಅವರು, ಗ್ರಾಮ ಪಂಚಾಯಿತಿ ಸದಸ್ಯರ ಸಹಕಾರದಿಂದ ಜಯಗಳಿಸಲು ಸಾಧ್ಯವಾಗಿದ್ದು, ಎಲ್ಲಾ 20 ಗ್ರಾಮ ಪಂಚಾಯಿತಿ ಸದಸ್ಯರನ್ನು ವಿಶ್ವಾಸಕ್ಕೆ ಪಡೆದು ಪಂಚಾಯಿತಿಯನ್ನು ಅಭಿವೃದ್ಧಿ ಪಥದತ್ತ ಮುನ್ನಡೆಸಲು ನಿಸ್ವಾರ್ಥ ಪ್ರಯತ್ನ ಮಾಡುತ್ತೇನೆ ಎಂದರು. ಎಲ್ಲರೂ ಒಂದಾಗಿ ಪಂಚಾಯಿತಿ ಅಭಿವೃದ್ಧಿಗೆ ಶ್ರಮಿಸಬೇಕು. ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಆದ್ಯತೆ ನೀಡಲಾಗುವುದು ಮತ್ತು ಅನುದಾನವನ್ನು ಸಮರ್ಪಕವಾಗಿ ಹಂಚಿಕೆ ಮಾಡಿ ಎಲ್ಲರ ಸಹಕಾರದಿಂದ ಪಂಚಾಯಿತಿಯನ್ನು ಅಭಿವೃದ್ಧಿ ಪಥದತ್ತ ತೆಗೆದುಕೊಂಡು ಹೋಗುತ್ತೇನೆ ಎಂದು ತಿಳಿಸಿದರು. ಇದೇ ವೇಳೆ ಗೆಲುವಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ಹೇಳಿದರು. ಮಾಜಿ ಅಧ್ಯಕ್ಷರಾದ ಬಿವಿ ವೆಂಕಟಸ್ವಾಮಿ, ಮುಖಂಡರಾದ ಬೆಳ್ಳೂರು ಅಶ್ವತ್ಥ, ಪಿಡಿಒ ಸಂಪರಾಜು ಹಾಗೂ ಗ್ರಾಮ ಪಂಚಾಯತಿ ಸದಸ್ಯರಾದ ದೇವರಾಜ್ ಎಂ, ಮೇಘನಾ ಎಂ, ನರಸಿಂಹಪ್ಪ ಸೇರಿದಂತೆ ಎಲ್ಲಾ ಸದಸ್ಯರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.



# ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ

**ರಾಮನಗರ:** ಕನಕಪುರ, ಚನ್ನಪಟ್ಟಣ, ರಾಮನಗರ ಹಾಗೂ ಮಾಗಡಿ ತಾಲ್ಲೂಕುಗಳ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಕನಕಪುರ ತಾಲ್ಲೂಕಿನ ಹೇರಂದ್ಯಾಪನಹಳ್ಳಿ ಮತ್ತು ಹುಣಸನಹಳ್ಳಿ, ರಾಮನಗರ ತಾಲ್ಲೂಕಿನ ಗೋಪಹಳ್ಳಿ ಮತ್ತು ಬೈರಮಂಗಲ, ಚನ್ನಪಟ್ಟಣ ತಾಲ್ಲೂಕಿನ ಮಳೂರು ಪಟ್ಟಣ, ದಶವಾರ ಮತ್ತು ಸುಳ್ಳೇರಿ, ಮಾಗಡಿ ತಾಲ್ಲೂಕಿನ ನೆತೇನಹಳ್ಳಿ, ಕಣ್ಣೂರು, ಬಿಸ್ಕೂರು ಮತ್ತು ಬಾಣವಾಡಿ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಅಕ್ಟೋಬರ್ 30ರೊಳಗೆ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿರುವ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳ ಕಚೇರಿಗೆ ಖುದ್ದಾಗಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 080-29500205, 080-229915710 ಸಂಪರ್ಕಿಸಬಹುದು.

# ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಐ.ಎ.ಎಸ್ ಮತ್ತು ಕೆ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿಗೆ ರಾಜ್ಯಾದ್ಯಂತ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆನ್ ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಸೆ. 20ರ ವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ, ಕೊಠಡಿ ಸಂ: 308, 2ನೇ ಮಹಡಿ ಕಂದಾಯಭವನ, ಬಿ.ಎಂ. ರಸ್ತೆ ರಾಮನಗರ ಇಲ್ಲಿ ಕಚೇರಿಯ ವೇಳೆಯಲ್ಲಿ ಖುದ್ದು ಸಂಪರ್ಕಿಸಬಹುದು, ದೂ.ಸಂಖ್ಯೆ: 080-27271104, ಅಲ್ಪಸಂಖ್ಯಾತರ ಸಹಾಯವಾಣಿ ಸಂ: 8277799990 ಅಥವಾ ಹತ್ತಿರದ ಮಾಹಿತಿ ಕೇಂದ್ರವನ್ನು ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

# ಗುಂಡ್ಲುಪೇಟೆ ಮಲ್ಲಯ್ಯನಪುರ ರೈತ ಜಮೀನಿಗೆ ಹೋಗಲು ಹರಸಾಹಸ

**ಚಾಮರಾಜನಗರ:** ಗುಂಡ್ಲುಪೇಟೆ ತಾಲ್ಲೂಕಿನ ರೈತರು ಜಮೀನಿಗೆ ಹೋಗಲು ಹರಸಾಹಸ ಪಡುವಂತ ಸ್ಥಿತಿಯಾಗಿದೆ. ಮಲ್ಲಯ್ಯನ ಪುರದ ಸಮೀಪದ ಕೆರೆಯ ಒತ್ತುವರಿಯೇ ಇದಕ್ಕೆಲ್ಲ ಕಾರಣವಾಗಿದೆ. 10 ಜಮೀನಿನವರು ಖಾಸಗಿ ಜಮೀನಿನವರ ಆಶ್ರಯ ಪಡೆದು ಅವರ ದಾರಿಯಲ್ಲಿ ಊರಿಗೆ ಬರಬೇಕಾಗಿದೆ.ಎಂದು ರೈತ ಅನಂತಪದ್ಮನಾಭ ತಿಳಿಸಿದ್ದಾರೆ. ಬೆಳೆಬೆಳೆದು ಕಟ್ಟಿಗೆ ಬಂದರೆ ಅದನ್ನು ವಾಹಕ್ಕೆ ಸಾಗಿಸಲು ಬಹಳ ತೊಂದರೆಯಾಗಿದೆ. ಕೆರೆಯ ಏರಿಯನ್ನು ಕೆಲವರು ಒತ್ತುವರಿ ಮಾಡಿಕೊಂಡು ಬೆಳೆ ಬೆಳೆಯುತ್ತಿದ್ದಾರೆ. ಇದರಿಂದ ವಾಹನಗಳು ಜಮಿಗೆ ಬರಲುಇ ಸಾಧ್ಯವಾಗುತ್ತಿಲ್ಲ ಎಂದರು.ಹವಾರಿ ಬಾರಿ ರೈತರು ಬೆಳೆದ ಬೆಳೆಗಳನ್ನು ವಾಹನಕ್ಕೆ ಸಾಗಿಸಬೇಕಾದರೆ ಕೆರೆಯ ನೀರಿನಲ್ಲಿ ಒತ್ತು ತರುವ ಪರಿಸ್ಥಿತಿಯು ಬರುತ್ತದೆ. ಇದರಿಂದ ಬಹಳ ತೊಂದರೆಯಾಗಇದೆ ಎಂದು ಹೇಳಿದರು. ಸುತ್ತಲು ಮಲ್ಲಯ್ಯನಪುರದ ಕೆರೆಯ ನೀರು ಇದೆ. ಅದರೆ ಕೆರೆಯ ಬದಿಯಲ್ಲಿ ಸರ್ಕಾರದ ಅದೇಶದಂತೆ ಬಂಡಿದಾರಿಯನ್ನು ತಹಸಿಲ್ದಾರ್ ಕಚೇರೆಯವರು ಮಾಡಿಸಲು ಮುಂದಾಗಬೇಕು ಕೆಲವು ರೈತರಿಗೆ ರಸ್ತೆ ಇಲ್ಲದೆ. ಬಹಳಷ್ಟು ವರ್ಷಗಳಿಂದ ತೊಂದರೆ ಪಡುವಂದಾಗಿದೆ. ಆ ಭಾಗದ ರೈತನಿಗೆ ಆರೋಗ್ಯದಲ್ಲಿ ತೊಂದರೆಯಾದರೆ. ಖಾಸಗಿ ಜಮೀನಿನ ಮುಖಾಂತರ ಗುಂಡ್ಲುಪೇಟೆ ಆಸ್ಪತ್ರೆಗೆ ಹೋಗಬೇಕಾಗುತ್ತದೆ. ಮಳೆ ಬಂದರಂತು ಅದೋಗತಿ. ಶಿಘ್ರವಾಗಿ ಕರೆಯ ಏರಿಯ ರಸ್ತೆಯನ್ನು ಮಾಡಿಕೊಟ್ಟರೆ ಅನುಕೂಲವಾಗುತ್ತದೆ ಎಂದು ರೈತರೊಬ್ಬರು ಹೇಳಿದ್ದಾರೆ. ಕೆರೆ ಏರಿಯನ್ನು ಒತ್ತುವರಿ ಮಾಡಲಾಗಿದೆ. ಇದರ ಬಗ್ಗೆ ತಹಸಿಲ್ದಾರ್ ಗಮನ ಹರಿಸಬೇಕೆಂದು ಮನವಿ ಮಾಡಿದರು.





**ವಿಜಯಪುರ ಕೋಟೆಬೀದಿ ನವಗ್ರಹ ದೇವಾಲಯದ ಬಳಿ ಪ್ರತಿಷ್ಠಾಪಿಸಿರುವ ಸ್ವಸ್ತಿಕ್ ಗೆಳೆಯರ ಬಳಗದ ವತಿಯಿಂದ ಪ್ರತಿಷ್ಠಾಪಿಸಿರುವ ವಿನಾಯಕ ಸ್ವಾಮಿಯವರ 17 ನೇ ವರ್ಷದ ಪೂಜಾ ಮಹೋತ್ಸವದ ಅಂಗವಾಗಿ ಬುಧವಾರ ರಾತ್ರಿಯ ಪೂಜೆಯನ್ನು ಶ್ರೀ ಗಣೇಶ್ ಹಮಾಲಿ ಕಾರ್ಮಿಕರ ಸಂಘದ ವತಿಯಿಂದ ನೆರವೇರಿಸಿದರು. ಈ ಸಂದರ್ಭದಲ್ಲಿ ಸ್ವಸ್ತಿಕ್ ಗೆಳೆಯರ ಬಳಗದ ಸದಸ್ಯರು ಹಾಗೂ ಶ್ರೀ ಗಣೇಶ್ ಹಮಾಲಿ ಕಾರ್ಮಿಕರ ಸಂಘದ ಸದಸ್ಯರು ಸ್ವಾಮಿಯವರ ದಿವ್ಯ ದರ್ಶನ ಪಡೆದು ನೂರಾರು ಮಂದಿಗೆ ಅನ್ನ ಸಂತರ್ಪಣೆ ಏರ್ಪಡಿಸಿದ್ದರು.**

# ಪ್ರೋತ್ಸಾಹಧನ ನೀಡಲು ಅರ್ಜಿ ಆಹ್ವಾನ

**ರಾಮನಗರ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನ ಮತ್ತು 2023-24ನೇ ಸಾಲಿನಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಡಿಪ್ಲೊಮೋ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಇಲಾಖಾ ವೆಬ್‌ಸೈಟ್ WWW.SW.KAR.NIC.INಗೆ ಭೇಟಿ ನೀಡಿ ಅರ್ಜಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂದಿನ ದಿನಗಳಲ್ಲಿ ಮಂಡ್ಯ ಉನ್ನತ ಸ್ಥಾನಕ್ಕೆ ಏರುತ್ತದೆ

**ಮಂಡ್ಯ:** ಮಂಡ್ಯದ ಕ್ರೀಡಾಂಗಣ ವನ್ನು10 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಮಾಡಿ ಉದ್ಘಾಟನೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಮಂಡ್ಯದ ಕ್ರೀಡಾಂಗಣಕ್ಕೆ ಫೆಡ್ ಲೈಟ್ ಅಳವಡಿಸಲು ಹಣ ಬಿಡುಗಡೆ ಮಾಡಿದ್ದೇವೆ ಅತಿ ಶೀಘ್ರದಲ್ಲಿ ಮಂಡ್ಯದ ಕ್ರೀಡಾಂಗಣ ಫೆಡ್ ಲೈಟ್ ಪಡೆದು ರಾತ್ರಿ ವೇಳೆಯಲ್ಲೂ ಕ್ರೀಡಾಪಟುಗಳು ಕ್ರೀಡೆಯಲ್ಲಿ ಭಾಗವಹಿಸಲು ಅನುಕೂಲ ಮಾಡಿಕೊಡುತ್ತೇವೆ ಎಂದು ಶಾಸಕ ಪಿ.ರವಿಕುಮಾರ್ ತಿಳಿಸಿದರು.

ಮಂಡ್ಯದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಆದರ್ಶ ಪದವಿಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ನಡೆದ ಮಂಡ್ಯ ತಾಲೂಕು ಮಟ್ಟದ ಪದವಿಪೂರ್ವ ಉದ್ಘಾಟಿಸಿ ಅವರು ಮಾತನಾಡಿದರು. ಕ್ರೀಡಾಪಟುಗಳ ಅನುಕೂಲಕ್ಕಾಗಿ ವಾಲಿಬಾಲ್ ಕೋರ್ಟ್ ಅಳವಡಿಸಲು 30 ಲಕ್ಷ ರೂ.ವೆಚ್ಚದಲ್ಲಿ ಕ್ರೀಡಾಪಟುಗಳಿಗೆ ಅನುಕೂಲ ಮಾಡಿಕೊಡುತ್ತಿದ್ದೇವೆ ಎಂದರು.

ಮಂಡ್ಯ ಹಲವು ದಿನದಲ್ಲಿ ಬದಲಾಗಿದೆ.ಅಮೆರಿಕಾದ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಹಾಗೂ ಟಿಬೆಟಿಯನ್ ಧರ್ಮ ಗುರು ದಲೈಲಾಮ ಅವರು ಅತಿ ಶೀಘ್ರದಲ್ಲಿ ಮಂಡ್ಯದ ಹಲ್ಲೇಗೆರೆಗೆ ಧ್ಯಾನ ಮಂದಿರ ಕೇಂದ್ರ ಉದ್ಘಾಟಿಸಲು ಬರುತ್ತಿದ್ದಾರೆ.ಮಂಡ್ಯದ ಯುವಕರು ಸಾಧನೆ ಮಾಡಿದಾಗ ಮುಂದಿನ ದಿನಗಳಲ್ಲಿ ಮಂಡ್ಯ ಉನ್ನತ ಸ್ಥಾನಕ್ಕೆ ಏರುತ್ತದೆ ಎಂದರು. ಖಾಸಗಿ ವಿದ್ಯಾಸಂಸ್ಥೆಗಳು ಸರ್ಕಾರದ ಜೊತೆ ಕೈಜೋಡಿಸಿದಾಗ ಸರ್ಕಾರದ ಯೋಜನೆಗಳನ್ನು ಜಾರಿಗೆ ತರಬಹುದು ಎಂದರು.



ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಗೆಲುವು ಸೋಲನ್ನು ಸಮಾನವಾಗಿ ತೆಗೆದುಕೊಂಡು ಆಟ ಆಡಬೇಕು. ಕ್ರೀಡಾಕೂಟಗಳು ಮನುಷ್ಯನ ವ್ಯಾಯಾಮದ ಅಂಗವಾಗಿದ್ದು ಕ್ರೀಡೆಯಲ್ಲಿ ಗೆಲುವು,ಸೋಲು ಆಟವಾಡುವ ಗುಣಮಟ್ಟವನ್ನು ಅಳೆಯುವ ಮಾಪನವಾಗಿದೆ ಎಂದರು. ವಿದ್ಯಾರ್ಥಿಗಳು ಪಾಠ ಪ್ರವಚನಗಳಂತೆ ದೈಹಿಕ ಚಟುವಟಿಕೆಗಳಲ್ಲೂ ಸಾಮರ್ಥ್ಯ ಸಾಧಿಸಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಅಧ್ಯಯನ ವಿದ್ಯಾ ಟ್ರಸ್ಟ್ ಉಪಾಧ್ಯಕ್ಷ ಶಶಾಂಕ್, ಪ್ರಾಂಶುಪಾಲ ಪ್ರೊ. ಎಸ್.ಡಿ. ದೊಡ್ಡಾಚಾರ್, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಅಧ್ಯಕ್ಷ ನಟರಾಜು, ಕಾರ್ಯದರ್ಶಿ ಕಾಂತರಾಜು, ನೋಡಲ್ ಅಧಿಕಾರಿ ಗುರುಲಿಂಗೇಗೌಡ ಸೇರಿದಂತೆ ಮತ್ತಿತರರು ಹಾಜರಿದ್ದರು.

## ಹಲ್ಲೇಗೆರೆಯಲ್ಲಿ ಕಾಮಗಾರಿಗೆ ಚಾಲನೆ

**ಮಂಡ್ಯ ತಾಲೂಕಿನ ಹಲ್ಲೇಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 20 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಸಕ ಪಿ ರವಿಕುಮಾರ್ ಗೌಡ ಚಾಲನೆ ನೀಡಿದರು. ಪಿ.ರವಿಕುಮಾರ್ಗೌಡ ಮಾತನಾಡಿ ಹಲ್ಲೇಗೆರೆ ಸುಪುತ್ರ, ಡಾ.ಮೂರ್ತಿ ತಮ್ಮ ಹುಟ್ಟಿದ ಊರಿನಲ್ಲಿ ನೂರು ಕೋಟಿ ವೆಚ್ಚದಲ್ಲಿ ಆಧ್ಯಾತ್ಮಿಕ ಕೇಂದ್ರ ತೆರೆಯುತ್ತಿರುವುದು ಈ ಭಾಗದ ಜನರ ಸಹಕಾರದಿಂದ ಗ್ರಾಮ ಅಭಿವೃದ್ಧಿ ಪಥದಲ್ಲಿ ಸಾಗಲಿದೆ ಇದಕ್ಕೆ ಎಲ್ಲರೂ ಸಹಕಾರ ನೀಡಿ ಎಂದು ಸಲಹೆ ನೀಡಿದರು. ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ಡಾ.ಮೂರ್ತಿರವರು ಹಲ್ಲೇಗೆರೆ ಗ್ರಾಮದಲ್ಲಿ ಅಂತರಾಷ್ಟ್ರೀಯ ಭೂದೇವಿ ಟ್ರಸ್ಟ್ ವತಿಯಿಂದ ಆಧ್ಯಾತ್ಮಿಕ ಕೇಂದ್ರ ನಿರ್ಮಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸಹಯೋಗದಿಂದ ಈ ರಸ್ತೆ ಅಭಿವೃದ್ಧಿಗೆ 20 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದ್ದು ಮುಂದಿನ ದಿನಗಳಲ್ಲಿ ಇನ್ನೂ 25 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಿದ್ದಾರೆ ರಸ್ತೆ ಅಗಲೀಕರಣಕ್ಕೆ ರೈತರು ಸಹಕಾರ ಅತ್ಯಗತ್ಯವಾಗಿದ್ದು ಇದರಿಂದ ಅಂತರಾಷ್ಟ್ರೀಯ ಧ್ಯಾನ ಕೇಂದ್ರ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಿ ಎಂದು ಮನವಿ ಮಾಡಿದರು. ಆಧ್ಯಾತ್ಮಿಕ ಕೇಂದ್ರ ಟ್ರಸ್ಟ್ನ ಡಾ.ಮೂರ್ತಿ ಮಾತನಾಡಿ ಆಧ್ಯಾತ್ಮಿಕ ಕೇಂದ್ರ ಮಾಡಲು ನಮ್ಮ ಟ್ರಸ್ಟ್ ಮುಂದಾಗಿದ್ದು ಪ್ರಪಂಚದಲ್ಲಿ ಯಾವುದು ಇಂತಹ ಕೇಂದ್ರ ಇರುವುದಿಲ್ಲ ಮೊದಲ ಬಾರಿಗೆ ಹಲ್ಲೇಗೆರೆಯಲ್ಲಿ ಆಧ್ಯಾತ್ಮಿಕ ಕೇಂದ್ರ ನಿರ್ಮಾಣ ಮಾಡುತ್ತಿದ್ದು ಇದನ್ನು ನೋಡಲು ಪ್ರಪಂಚದ ಎಲ್ಲಾ ಕಡೆಯಿಂದ ಪ್ರವಾಸಿಗರು ಬರುತ್ತಾರೆ ಇಲ್ಲಿನ ನಿಸರ್ಗ ಎಲ್ಲರನ್ನು ಕೈಬೀಸಿ ಕರೆಯುವ ಹಾಗೆ ಮೂಡಲಿದೆ ಎಂದರು.**

## ವಿದ್ಯುತ್ ವ್ಯತ್ಯಯ

**ಮೈಸೂರು:** ವಿ.ವಿ ಮೊಹಲ್ಲಾ ವಿಭಾಗ ವ್ಯಾಪ್ತಿಯ ಕೆ.ಹೆಚ್.ಬಿ, ಡಿ.ಎಂ.ಜಿ ಹಳ್ಳಿ ಮತ್ತು ಸೌಥ್ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 2 ನೇ ತ್ರೈಮಾಸಿಕ ನಿರ್ವಹಣಾ ಕೆಲಸದ ನಿಮಿತ್ತ ಸೆಪ್ಟಂಬರ್ 20 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕೆ.ಹೆಚ್.ಬಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಪ್ರದೇಶಗಳು: ವಿಜಯನಗರ 4 ನೇ ಹಂತ, ಕೆ.ಹೆಚ್.ಬಿ ಕಾಲೋನಿ, ಹೂಟಗಳ್ಳಿ ಗ್ರಾಮ, ಬೆಳವಾಡಿ ಗ್ರಾಮ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ್ಯ ಲೇಔಟ್, ಕೆ.ಹೆಮ್ಮನಹಳ್ಳಿ, ಲಿಂಗದೇವರಕೊಪ್ಪಲು, ಇಲವಾಲ, ಹೂಟಗಳ್ಳಿ ಕೆ.ಆರ್.ಎಸ್. ರೋಡ್, ಆದಿತ್ಯಾ ಬಡಾವಣೆ, ಎಸ್. ಆರ್.ಎಸ್. ಕಾಲೋನಿ, ಕೂರ್ಗಳ್ಳಿ ಗ್ರಾಮ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ್ಯ ಹೋಟೆಲ್, ರಿಲಾಯನ್ಸ್, ಮಾಸ್ ಫರ್ನಿಚರ್ಸ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ, ಜಟ್ಟಿಹುಂಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಡಿ.ಎಂ.ಜಿ ಹಳ್ಳಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಪ್ರದೇಶಗಳು: ಡಿ.ಎಂ.ಜಿ. ಹಳ್ಳಿ, ಕಮರಹಳ್ಳಿ ಗ್ರಾಮ, ಮಾಣಿಕ್ಯಪುರ, ದೊಡ್ಡಹಟ್ಟಿಹುಂಡಿ, ಮರಿಯ್ಯನಹುಂಡಿ, ಕಟ್ಟೆಹುಂಡಿ, ಶೆಟ್ಟಿನಾಯಕನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರದೇಶಗಳು. ಸೌಥ್ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಪ್ರದೇಶಗಳು: ಶ್ರೀರಾಂಪುರ 2 ನೇ ಹಂತ, ರಮಾಭಾಯಿನಗರ, ಮಹದೇವಪುರ, ಜಯನಗರ 1ರಿಂದ 20ನೇ ಕ್ರಾಸ್, ಪರಸಯ್ಯನಹುಂಡಿ, ಶಿವಪುರ, ಕುವೆಂಪುನಗರ ಕೆ ಬ್ಲಾಕ್, ಅಪೋಲೊ ಆಸ್ಪತ್ರೆಯ ಸುತ್ತಮುತ್ತಲಿನ ಪ್ರದೇಶಗಳು. ಚಿಕ್ಕಹರದನಹಳ್ಳಿ, ಗೊರೂರುಗ್ರಾಮ, ಕಳಲವಾಡಿ, ಕೋಟೆಹುಂಡಿ, ಯಡಹಳ್ಳಿ, ರಾಯನಕೆರೆ, ಸರಸ್ವತಿಪುರಂ 1 ನೇ ಮುಖ್ಯರಸ್ತೆ ಯಿಂದ 6 ನೇ ಮುಖ್ಯರಸ್ತೆ, ಭಾಗಶಃ ಕೆ.ಜಿ.ಕೊಪ್ಪಲು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುವುದರಿಂದ, ಸಾರ್ವಜನಿಕರು ಸಹಕರಿಸಬೇಕು ಎಂದು ವಿ.ವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಿವಿಧ ಯೋಜನೆಗಳಿಗೆ ಅರ್ಜಿ

**ಮೈಸೂರು:** 2024-25 ನೇ ಸಾಲಿನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿವಿಧ ಯೋಜನೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಐ.ಎಸ್.ಬಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ ಹಾಗೂ ಮೈಕ್ರೋ ಕ್ರೆಡಿಟ್ ಯೋಜನೆಗಳಿಗೆ ಅರ್ಹ ಅಭ್ಯರ್ಥಿಗಳು http://sevasindhu.karnataka.gov.in ವೆಬ್‌ಸೈಟ್ ಮೂಲಕ ಅಕ್ಟೋಬರ್ 10 ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ.ಸಂ:0821-2332480 ನ್ನು ಸಂಪರ್ಕಿಸಬಹುದು ಎಂದು ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳಿಗೆ ಅರ್ಜಿ

**ಮೈಸೂರು:** ಕರ್ನಾಟಕ ಸರ್ಕಾರದ ಸ್ವಾಯತ್ತ ಸಂಸ್ಥೆಯಾದ ರಂಗಾಯಣ ರೆಪರ್ಟರಿಯ ವತಿಯಿಂದ 2024-25 ನೇ ಸಾಲಿನ ವಿವಿಧ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಗೀತ ಸಂಯೋಜಕರು, ಬೆಳಕಿನ ವಿನ್ಯಾಸಕಾರರು, ಧ್ವನಿ ನಿರ್ವಾಹಕರು ಹಾಗೂ ಬಡಗಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲು ಯೋಜಿಸಲಾಗಿದ್ದು, ಈ ಹುದ್ದೆಗಳು ತಾತ್ಕಾಲಿಕವಾಗಿರುತ್ತವೆ. ಆಸಕ್ತರು ತಮ್ಮ ವ್ಯಕ್ತಿಗತ ವಿವರಗಳನ್ನು ಒಳಗೊಂಡ ಅರ್ಜಿಯನ್ನು ಸೆಪ್ಟೆಂಬರ್ 23 ರೊಳಗೆ ರಂಗಾಯಣದ ನಿರ್ದೇಶಕರಿಗೆ ಸಲ್ಲಿಸಬಹುದು ಹಾಗೂ ಅಭ್ಯರ್ಥಿಗಳ ಆಯ್ಕೆಯ ಸಂದರ್ಶನವನ್ನು ಸೆಪ್ಟೆಂಬರ್ 25 ರಂದು ನಡೆಸಲಾಗುತ್ತದೆ. ಅಭ್ಯರ್ಥಿಗಳು ವಿದ್ಯಾಭ್ಯಾಸ, ಅನುಭವ ಹಾಗೂ ಹೆಚ್ಚಿನ ವಿವರಗಳಿಗೆ ರಂಗಾಯಣದ ಕಚೇರಿ ದೂ.ಸಂ:0821-2512639 ನ್ನು ಸಂಪರ್ಕಿಸಬಹುದು ಎಂದು ರಂಗಾಯಣದ ಉಪನಿರ್ದೇಶಕರಾದ ಡಾ.ಎಂ.ಡಿ. ಸುದರ್ಶನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಕಾರ ಸಮ್ಮಾನ್ ಯೋಜನೆಯಡಿ ಆರ್ಥಿಕ ನೆರವಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ 2024-25 ನೇ ಸಾಲಿಗೆ ನೇಕಾರ ಸಮ್ಮಾನ್ ಯೋಜನೆಯನ್ನು ರಾಜ್ಯದಲ್ಲಿರುವ ಪ್ರತಿ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರಿಗೆ ವಾರ್ಷಿಕ ರೂ.5000/- ಗಳ ಆರ್ಥಿಕ ನೆರವನ್ನು ನೀಡುವ ಸಲುವಾಗಿ ಸೇವಾ ಸಿಂಧು ಪೋರ್ಟಲ್ ನಲ್ಲಿ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ಮಾಹಿತಿಯನ್ನು ಆಪ್ ಲೋಡ್ ಮಾಡಲು ಅನುಕೂಲವಾಗುವಂತೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಜಿಲ್ಲೆಯ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವಘಟಕಗಳ ಮಾಲಿಕರು/ ನೇಕಾರರು/ಕಾರ್ಮಿಕರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪ ನಿರ್ದೇಶಕರ ಕಛೇರಿ, ಗಾರ್ಮೆಂಟ್ಸ್ ತರಬೇತಿ ಕೇಂದ್ರದ ಕಟ್ಟಡ, ಕೆಐಎಡಿಬಿ ಅಪೇರಲ್ ಪಾರ್ಕ್, ದೊಡ್ಡಬಳ್ಳಾಪುರ, ಈ ಕಛೇರಿಯಿಂದ ಅರ್ಜಿಯನ್ನು ಪಡೆದು ದಾಖಲಾತಿಗಳೊಂದಿಗೆ ಅಕ್ಟೋಬರ್ 30 ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಭ್ರಮದಿಂದ ಪ್ರವಾಸೋದ್ಯಮ ದಿನ ಆಚರಿಸಲು ಅಗತ್ಯ ಸಿದ್ಧತೆ

**ಮೈಸೂರು:** 'ಪ್ರವಾಸೋದ್ಯಮ ಮತ್ತು ಶಾಂತಿ' ಎಂಬ ಧ್ಯೇಯ ವಾಕ್ಯದೊಂದಿಗೆ ಸೆಪ್ಟೆಂಬರ್ 27 ರಂದು ಬೆಳಗ್ಗೆ 10 ಗಂಟೆಗೆ ಮೈಸೂರು ಅರಮನೆಯ ಆವರಣದಲ್ಲಿ ವಿಶ್ವ ಪ್ರವಾಸೋದ್ಯಮ ದಿನವನ್ನು ಸಂಭ್ರಮದಿಂದ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕರಾದ ಎಂ.ಕೆ.ಸವಿತಾ ಅವರು ತಿಳಿಸಿದರು.

ಇಂದು ಪ್ರವಾಸೋದ್ಯಮ ಇಲಾಖೆಯ ಸಭಾಂಗಣದಲ್ಲಿ ನಡೆದ, ವಿಶ್ವ ಪ್ರವಾಸೋದ್ಯಮ ದಿನಾಚರಣಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಾಂತಿ ಹಾಗೂ ಭದ್ರತೆ ಇರುವಂತಹ ರಾಷ್ಟ್ರಗಳಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಹಾಗಾಗಿ ಸರ್ವಧರ್ಮದ ಜನರನ್ನು ಒಳಗೊಂಡು ಅಂದು ಕಾರ್ಯಕ್ರಮದಲ್ಲಿ ಮೆರವಣಿಗೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು.

ಉದ್ಘಾಟನೆಯ ನಂತರ ಅರಮನೆಯಿಂದ ಹೈವೆ ಸರ್ಕಲ್‌ವರೆಗೆ ಮೆರವಣಿಗೆಯನ್ನು ಏರ್ಪಡಿಸಲಾಗಿದ್ದು, ಇದರಲ್ಲಿ ಗಜಪಡೆ, ಪೊಲೀಸ್ ಬ್ಯಾಂಡ್, ನಾದಸ್ವರ, ಡೊಳ್ಳುಕುಣಿತ, ಕಂಸಾಳೆ, ವೀರಗಾಸೆ, ಕೊಡವ ನೃತ್ಯ, ಟಿಬೇಟಿಯನ್ ನೃತ್ಯ ಹಾಗೂ ಕೇರಳ ಚೆಂಡೆ ಸೇರಿದಂತೆ ಇನ್ನಿತರ ಕಲಾತಂಡಗಳ ಪ್ರದರ್ಶನದ ಮೂಲಕ ಪ್ರವಾಸಿಗರ ಗಮನ ಸೆಳೆಯುವಂತಹ ಕಾರ್ಯಕ್ರಮವನ್ನು ಆಯೋಜಿಸಲಾಗುವುದು ಎಂದರು.



ಮೆರವಣಿಗೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅಧಿಕಾರಿಗಳು, ಸಂಘ-ಸಂಸ್ಥೆಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಶಾಂತಿಯ ಸಂಕೇತವಾದ ಬಿಳಿ ವಸ್ತ್ರವನ್ನು ಧರಿಸಬೇಕು. ಮೆರವಣಿಗೆಯಲ್ಲಿ ಭಾಗವಹಿಸುವ ಕಲಾತಂಡಗಳು ಹಾಗೂ ವಿದ್ಯಾರ್ಥಿಗಳಿಗೆ ಊಟದ ವ್ಯವಸ್ಥೆ ಮತ್ತು ಭಾಗವಹಿಸುವ ಪ್ರತಿಯೊಬ್ಬರಿಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಪ್ರವಾಸೋದ್ಯಮ ಇಲಾಖೆಯ ಅಧಿಕೃತ ವೆಬ್‌ಸೈಟ್ ಅನ್ನು ಮಾನ್ಯ ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪನವರು ಅನಾವರಣಗೊಳಿಸಲಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅರಮನೆ ಮಂಡಳಿಯ ಉಪ ನಿರ್ದೇಶಕರಾದ ಸುಬ್ರಮಣ್ಯ, ಕರ್ನಾಟಕ ದಸರಾ ವಸ್ತುಪ್ರದರ್ಶನದ ಕಾರ್ಯನಿರ್ವಹಣಾಧಿಕಾರಿ ರುದ್ರೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಟಿ.ಕೆ.ಹರೀಶ್, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಭುಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ.ಸುದರ್ಶನ್, ಮೈಸೂರು ಟ್ರಾವಲ್ಸ್ ಅಸೋಸಿಯೇಶನ್‌ನ ಅಧ್ಯಕ್ಷ ಜಯಪ್ರಕಾಶ್ ರಾಜೇ ಅರಸ್, ಸ್ಕಾಲ್ ಇಂಟರ್‌ನ್ಯಾಷನಲ್ ಮೈಸೂರು ವಿಭಾಗದ ಅಧ್ಯಕ್ಷ ಬಿ.ಎಸ್.ಪ್ರಶಾಂತ್, ಟೂರಿಸ್ಟ್ ಗೈಡ್ಸ್ ಅಸೋಸಿಯೇಶನ್‌ನ ಅಧ್ಯಕ್ಷ ಎಸ್.ಜೆ.ಅಶೋಕ್, ಚಾಲಕರ ಸಂಘದ ಅಧ್ಯಕ್ಷರಾದ ನಾಗರಾಜು, ಡಿ.ದೇವರಾಜು ಅರಸು ರಸ್ತೆ ಅಂಗಡಿ ಮಾಲೀಕರ ಹಾಗೂ ಬಾಡಿಗೆದಾರರು ಸಂಘದ ಅಧ್ಯಕ್ಷರಾದ ಪ್ರಕಾಶ್ ಕೆ.ಜಿ. , ಹೋಟೆಲ್ ಜೇಡ್ ಗಾರ್ಡ್ ನ್ ಭರತ್ ಗೌಡ, ಅರೋಹಿ ಹೋಟೆಲ್‌ನ ಸಮರ್ಥ್ ವೈದ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಟ್ಯಾಗ್ ಮಾಡಿ ಬಹುಮಾನ ಗೆಲ್ಲಿ

**ಸೆ.27 ರಂದು ನಡೆಯುವ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಕಾರ್ಯಕ್ರಮವನ್ನು ಉತ್ತಮ ರೀತಿಯಲ್ಲಿ ಚಿತ್ರೀಸಿ ಇನ್ಸ್ಟಾಗ್ರಾಮ್ ರೀಲ್ಸ್ ಆಗಿ ಅಪ್ಲೋಡ್ ಮಾಡಿ, ನಂತರ ಪ್ರವಾಸೋದ್ಯಮ ಇಲಾಖೆಯ ಅಧಿಕೃತ ಇನ್ಸ್ಟಾಗ್ರಾಮ್ ಪೇಜ್ ತಣಟಥಿಣಡಿಣ ಅನ್ನು ಟ್ಯಾಗ್ ಮಾಡಬೇಕು. ಅದರಲ್ಲಿ ನಿಗದಿತ ಸಮಯದಲ್ಲಿ ಅತಿ ಹೆಚ್ಚು ವೀಕ್ಷಣೆ ಪಡೆದ ಒಂದು ವಿಡಿಯೋ ಹಾಗೂ ಉತ್ತಮ ಕಂಟೆಂಟ್ ಇರುವ ಒಂದು ವಿಡಿಯೋಗೆ ಅಕ್ಟೋಬರ್ 5 ರಂದು ಅರಮನೆ ಮೈದಾನದಲ್ಲಿ ನಡೆಯುವ ದಸರಾ ವೇದಿಕೆಯಲ್ಲಿ ಬಹುಮಾನವನ್ನು ನೀಡಲಾಗುತ್ತದೆ.**

### ಕೇಂದ್ರ ಸಚಿವ ರಾಮ್ ನಾಥ್ ಠಾಕೂರ್ ಕರೆ

# ತೆಂಗು ನೈಸರ್ಗಿಕ ಕೃಷಿಗೆ ಆದ್ಯತೆ ನೀಡಿ

**ರಾಮನಗರ:** ತೆಂಗು ಬೆಳೆಯಲ್ಲಿ ರಾಷ್ಟ್ರ ಮೊದಲ ಸ್ಥಾನಕ್ಕೇರಲು ಬೆಳೆಗಾರರು ಮತ್ತಷ್ಟು ಶ್ರಮಿಸಬೇಕು, ಸಾಧ್ಯವಾದಷ್ಟು ನೈಸರ್ಗಿಕ ಕೃಷಿಗೆ ಆದ್ಯತೆ ನೀಡಬೇಕು ಎಂದು ಕೇಂದ್ರ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಖಾತೆಯ ರಾಜ್ಯ ಸಚಿವರಾದ ರಾಮ್ ನಾಥ್ ಠಾಕೂರ್ ಅವರು ಕರೆ ನೀಡಿದರು.

ಅವರು ಸೆ. 18ರ ಬುಧವಾರ ನಗರದ ಜಾಲಮಂಗಲ ರಸ್ತೆಯಲ್ಲಿರುವ ಶ್ರೀ ಮಂಜುನಾಥ ಕನ್ವನ್ಷನ್ ಹಾಲ್‌ನಲ್ಲಿ ತೆಂಗು ಅಭಿವೃದ್ಧಿ ಮಂಡಳಿ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ತೆಂಗು ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿಶ್ವದಲ್ಲಿ ತೆಂಗು ಉತ್ಪಾದನೆಯಲ್ಲಿ ಭಾರತ ಮೂರನೇ ಸ್ಥಾನದಲ್ಲಿದೆ, ಇಂಡೋನೇಷ್ಯಾ ಹಾಗೂ ಫಿಲಿಪೈನ್ಸ್ ನಂತರದ ಸ್ಥಾನದಲ್ಲಿರುವ ದೇಶದಲ್ಲಿ ಮತ್ತಷ್ಟು ತೆಂಗು ಉತ್ಪಾದನೆಯಾಗಬೇಕಿದೆ, ದೇಶದ ಶೇಕಡಾ 17.6ರಷ್ಟು ಸಾಗುವಳಿ ಪ್ರದೇಶದಲ್ಲಿ ತೆಂಗನ್ನು ಬೆಳೆಯಲಾಗುತ್ತಿದೆ. 28.81 ಪ್ರತಿಶತ ತೆಂಗು ಉತ್ಪಾದನೆಯಾಗುತ್ತಿದೆ. ಪ್ರತೀ ಹೆಕ್ಟೇರ್‌ಗೆ 9,882 ತೆಂಗಿನ ಕಾಯಿಚುನ್ನು ಬೆಳೆಯಲಾಗುತ್ತಿದೆ, ನೈಸರ್ಗಿಕ ಕೃಷಿ ಮೂಲಕ ಈ ಉತ್ಪಾದನೆಯನ್ನು ಮತ್ತಷ್ಟು ಹೆಚ್ಚಿಸುವತ್ತ ರೈತರು ಗಮನಹರಿಸಬೇಕು. ತೆಂಗು ಅಭಿವೃದ್ಧಿ ಮಂಡಳಿಯಿಂದ ತೆಂಗು ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ವಿವಿಧ ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಕಳೆದ 30 ವರ್ಷಗಳಲ್ಲಿ ದೇಶದ ಮಣ್ಣಿನ ಫಲವತ್ತತೆ ನಶಿಸುತ್ತಿದ್ದು, ಮಾನವನ ಆರೋಗ್ಯವು ಕೂಡ ಕ್ಷೀಣಿಸುತ್ತಿದೆ ಆದ ಕಾರಣ ನೈಸರ್ಗಿಕ ಕೃಷಿಗೆ ರೈತರು ಹೆಚ್ಚು ಒಲವು ತೋರುವ ಮೂಲಕ ಮಾನವನ ಆರೋಗ್ಯವನ್ನು ಸುಸ್ಥಿತಿಯಲ್ಲಿ ಇಡಬೇಕು ಎಂದು ಹೇಳಿದರು.

ಸಾಕಷ್ಟು ವಿಶೇಷತೆಗಳನ್ನು ಕೂಡಿದ ತೆಂಗಿನ ಗುಣಮಟ್ಟದ ಗುಣವರ್ಧನೆಗೆ ಆದ್ಯತೆ ನೀಡಬೇಕು. ರೈತರು ತಮ್ಮ ಕುಟುಂಬ ಸಹಕಾರದೊಂದಿಗೆ ತೆಂಗನ್ನು ಪೋಷಿಸುತ್ತಿದ್ದಾರೆ. ಕುಟುಂಬದ ಸದಸ್ಯರ ಶ್ರಮವಿರುವ ಈ ಬೆಳೆಯ ಉತ್ಪಾದನೆ ಹೆಚ್ಚಿಸಿಕೊಂಡು ಆ ಮೂಲಕ ಆರ್ಥಿಕ ಪ್ರಗತಿಯನ್ನು ಕಾಣುವಂತೆ ಅವರು ಕರೆ ನೀಡಿದರು.

ಕೇಂದ್ರ ಸರ್ಕಾರದ ತೆಂಗು ಅಭಿವೃದ್ಧಿ ಮಂಡಳಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಪ್ರಭಾತ್ ಕುಮಾರ್ ಮಾತನಾಡಿ, ತೋಟಗಾರಿಕೆಯಲ್ಲಿ ನಾವು ತೆಂಗಿನಕಾಯಿ, ಎಳನೀರಿಗೆ ಮಾತ್ರ ಸೀಮಿತವಾಗಿದ್ದೆವು. ಆದರೆ ಈಗ ವೈಜ್ಞಾನಿಕವಾಗಿ ಕೈಗೊಳ್ಳಲಾತರುವ




ಹಲವು ಕ್ರಮಗಳಿಂದಾಗಿ ತೆಂಗಿನ ಮರದಿಂದ ಪ್ರತಿಯೊಂದು ಅಂಗವನ್ನು ಬಳಸಿಕೊಳ್ಳುತ್ತಿದ್ದೇವೆ ಹಾಗೂ ಅದರಿಂದ ಲಾಭ ಪಡೆಯುತ್ತಿದ್ದೇವೆ, ಆರ್ಥಿಕವಾಗಿ ನಾವು ಬೆಳೆಯುವುದಲ್ಲದೇ ನಮ್ಮ ತೋಟಗಾರಿಕೆಯ ಮೂಲಕ ತೆಂಗಿನ ಇಳುವರಿಯನ್ನು ಕೂಡ ಹೆಚ್ಚಿಸುವಲ್ಲಿ ಸಫಲರಾಗಿದ್ದೇವೆ ಎಂದರು.

ಮಂಡ್ಯ ಜಿಲ್ಲೆಯಲ್ಲಿ ಉತ್ತಮ ಬೀಜಗಳನ್ನು ಒದಗಿಸುವ ಸಂಸ್ಥೆಯನ್ನು ಶುರು ಮಾಡಲಾಗಿದೆ. ಅಂತಹ ಉತ್ತಮ ತಳಿಯ ಬೀಜಗಳನ್ನು ಬಳಸಿಕೊಂಡು ತೋಟಗಾರಿಕೆ ಮಾಡಿದಾಗ ತೋಟಗಳಲ್ಲಿ ಆಗುವಂತಹ ನಷ್ಟಗಳನ್ನು ನಾವು ಆದಷ್ಟು ಸಂಖ್ಯೆಯಲ್ಲಿ ನಿವಾರಿಸಿಕೊಳ್ಳಬಹುದು ಎಂದರು.

ಹಾನಿರಹಿತ ತೋಟಗಾರಿಕೆಯೇ ತೆಂಗು ಬೆಳೆಯ ಉದ್ದೇಶವಾಗಿದೆ. ತೋಟಗಾರಿಕೆಯಲ್ಲಿ ಆದಷ್ಟು ನಷ್ಟಗಳನ್ನು ಕಡಿಮೆ ಮಾಡಿಕೊಂಡು ತೋಟಗಾರಿಕೆ ಮಾಡಿದಾಗ ರೈತರು ಆರ್ಥಿಕವಾಗಿ ಬೆಳೆಯುತ್ತಾರೆ ಹಾಗೂ ಆರ್ಥಿಕ ಬೆಳವಣಿಗೆಯೂ ಆಗುತ್ತದೆ ಎಂದು ಹೇಳಿದರು.

ನೀರಾದಿಂದ ತಯರಾಗುವ ಸಕ್ಕರೆಗೆ ಮಾರುಕಟ್ಟೆಯಲ್ಲಿ ವಿಪರೀತ ಬೆಲೆಯಿದೆ. ಈ ರೀತಿಯ ಹೊಸ ಉತ್ಪನ್ನಗಳನ್ನು ತಿಳಿದುಕೊಂಡು ರೈತರು ಅದರಿಂದ ಲಾಭ ಪಡೆದುಕೊಳ್ಳಬಹುದು. ಈ ಕುರಿತು ಕೇಂದ್ರ ಸರ್ಕಾರದಿಂದ ಸಾಕಷ್ಟು ಸಂಶೋಧನೆಗಳು ನಡೆಯುತ್ತಿವೆ, ಸಣ್ಣ ರೈತರ ಏಳಿಗೆಗಾಗಿ ಸಚಿವರು ಸಾಕಷ್ಟು ಶ್ರಮಿಸುತ್ತಿದ್ದಾರೆ ಎಂದು ತಿಳಿಸಿದರು.

ಬೆಂಗಳೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಡಾ. ಎಸ್.ವಿ. ಸುರೇಶ ಅವರು ತೆಂಗು ಅಭಿವೃದ್ಧಿ ಮಂಡಳಿಯಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ, ತೆಂಗು ಕ್ರಮೇಣವಾಗಿ ಆರ್ಥಿಕ ಬೆಳೆಯಾಗಿ ಪರಿವರ್ತನೆಯಾಗಿದೆ, ಇದರ ಉತ್ಪಾದನೆ, ಸಂರಕ್ಷಣೆ, ಕೋಯ್ಲು ನಂತರದಲ್ಲಿ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ರೈತರು ಮಣ್ಣಿನ ಸದೃಢ ಪೋಷಕಾಂಶ ನೋಡಿಕೊಳ್ಳದಿದ್ದರೆ, ಸಾಕಷ್ಟು ತೊಂದರೆಗಳಾಗುತ್ತವೆ. ಏಳನೀರಿನಲ್ಲಿ ಕೀಟನಾಶಕ, ರಾಸಾಯನಿಕ ಅಂಶಗಳು ಪರೀಕ್ಷೆಯಲ್ಲಿ ಕಂಡು ಬಂದಿದೆ. ತೆಂಗಿಗೆ ಬಂದೆರಗಿರುವ ಸಮಸ್ಯೆಗಳನ್ನು ಮಂಡಳಿ ಜೊತೆ ವೈಜ್ಞಾನಿಕವಾಗಿ ಸಂಶೋಧನೆ ಮಾಡಿ ರೈತರಿಗೆ ಮಾಹಿತಿ ನೀಡುತ್ತಿದ್ದೇವೆ ಎಂದರು.

ರೈತರು ಸಾವಯವ ನೈಸರ್ಗಿಕ ಕೃಷಿಯಲ್ಲಿ ತೊಡಗಬೇಕು. ಬೆಳೆಗಾರರಿಗೆ ಉದ್ಯಮಿಗಳಾಗಬೇಕು. ರೈತನೇ ಉದ್ಯಮಿಯಾಗಬೇಕು. ಮೌಲ್ಯವರ್ಧಿತ ಉತ್ಪನ್ನಗಳನ್ನು ಮಾರುಕಟ್ಟೆಗೆ ನೀಡುವ್ಯದನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಅವರು ಮಾತನಾಡಿ, ಜಿಲ್ಲೆಯಲ್ಲಿ ತೆಂಗು ಪ್ರಮುಖ ಬೆಳೆಯಾಗಿದ್ದು, ಅದರಿಂದ ಹಲವಾರು ರೀತಿಯ ಉತ್ಪನ್ನಗಳನ್ನು ಮಾಡಬಹುದು. ಇದರಿಂದ ರೈತರ ಆದಾಯ ವೃದ್ಧಿಗೆ ಸಹಾಯವಾಗುತ್ತದೆ ತೆಂಗಿನ ವಿವಿಧ ಉತ್ಪಾದನೆಗಳನ್ನು ಮಾರಾಟ ಮಾಡಲು ಜಿಲ್ಲಾ ಪಂಚಾಯತ್ ವತಿಯಿಂದ ವಂದಾರಗುಪ್ಪೆ ಗ್ರಾಮದಲ್ಲಿ ಮಹಿಳಾ ಸ್ವಸಹಾಯ ಸಂಘಗಳಿಂದ ಮಾರಾಟ ಮಾಡುವ ಪ್ರಯತ್ನವಾಗುತ್ತಿದೆ, ಮಹತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ರೈತರ ಜಮೀನಿನಲ್ಲಿ ತೋಟಗಾರಿಕೆ ಬೆಳೆಯಾಗಿರುವ ತೆಂಗನ್ನು ಬೆಳೆಯಲು ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ತೆಂಗು ಬೆಳೆಯ ವಿವಿಧ ಉತ್ಪನ್ನಗಳ ಮಳಿಗೆಗಳನ್ನು ಕೇಂದ್ರ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಖಾತೆಯ ರಾಜ್ಯ ಸಚಿವರಾದ ರಾಮ್ ನಾಥ್ ಠಾಕೂರ್ ಅವರು ಉದ್ಘಾಟಿಸಿದರು.

# ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಹಾಗೂ ವಿಶ್ವವಿದ್ಯಾನಿಲಯದ ಮಹಿಳಾ ಕಾಲೇಜು, ಮಲ್ಲೇಶ್ವರಂನಲ್ಲಿ ವಿವಿಧ ಸ್ನಾತಕೋತ್ತರ / ಸ್ನಾತಕ ವಿಷಯಗಳಿಗೆ 2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಸ್ನಾತಕ / ಸ್ನಾತಕೋತ್ತರ ವಿಷಯಗಳ ಬೋಧನಾ ಕಾರ್ಯದ ನಿರ್ವಹಣೆಗಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ವಿಶ್ವವಿದ್ಯಾನಿಲಯದ ವೆಬ್ಸೈಟ್ www.bcu.ac.in ನಲ್ಲಿ bcugfportal.in ಲಿಂಕ್ನ್ನು ಆಯ್ಕೆ ಮಾಡಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 21 ಸಂಜೆ 5.00 ಗಂಟೆಯೊಳಗೆ ನಿರ್ವಹಣಾ ಶುಲ್ಕ ರೂ. 200/- (ಖಅ/ಖಖ/ಅಂಖ-1 ಖ.100/-) ಗಳೊಂದಿಗೆ ಸಲ್ಲಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯ ಭೌತಿಕ ಪ್ರತಿಯನ್ನು ಸೆಪ್ಟೆಂಬರ್ 26 ರೊಳಗೆ ಕುಲಸಚಿವರ ಕಛೇರಿ, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಜ್ಞಾನಜ್ಯೋತಿ ಸೆಂಟ್ರಲ್ ಕಾಲೇಜ್ ಆವರಣ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು - 560 001 ಇವರಿಗೆ ಸಲ್ಲಿಸಬೇಕು.

**ವಿಜ್ಞಾನ ವಿಷಯಗಳು :** ರಸಾಯನಶಾಸ್ತ್ರ, ಜೀವರಸಾಯನಶಾಸ್ತ್ರ, ಸಸ್ಯವಿಜ್ಞಾನ, ಪ್ರಾಣಿವಿಜ್ಞಾನ, ಗಣಿತಶಾಸ್ತ್ರ, ಭೌತಶಾಸ್ತ್ರ, ಉಡುಪು ಮತ್ತು ತಂತ್ರಜ್ಞಾನ (ಯುಜಿ ಪಿಜಿ), ಪರಿಸರ ವಿಜ್ಞಾನ, ಗಣಕ ಜ್ಞಾನ ಎಂ.ಎಸ್ಸಿ ಗಣಕ ವಿಜ್ಞಾನ, ಬಿಸಿಎ, ಬಿಸಿಎ- Artificial Intelligence and Machine Learning ಮತ್ತು ಬಿಸಿಎ- ಡಾಟಾ ಸೈನ್ಸ್.

ಕಲಾ ವಿಷಯಗಳು: ಕನ್ನಡ, ಇಂಗ್ಲೀಷ್, ಅರ್ಥಶಾಸ್ತ್ರ, ಇತಿಹಾಸ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಸಮಾಜಕಾರ್ಯ, ಸಂವಹನ ಮತ್ತು ಪತ್ರಿಕೋದ್ಯಮ, ಜಾಗತಿಕ ಭಾಷೆಗಳು, (ಜರ್ಮನ್, ಫ್ರೆಂಚ್, ಸ್ಪ್ಯಾನಿಷ್, ಜಪಾನೀಸ್, ಕೊರಿಯನ್, ಚೈನೀಸ್), ಹಿಂದಿ. ವಾಣಿಜ್ಯ ವಿಷಯಗಳು: ಎಂ.ಕಾಂ., ಎಂ.ಕಾಂ. (ಫೈ?ನಾನ್ಸ್ ಮತ್ತು ಅಕೌಂಟಿಂಗ್), ಎಂ.ಕಾಂ (ಇಂಟರ್ನ್ಯಾಷನಲ್ ಬಿಸಿನೆಸ್),



ಎಂ.ಟಿ.ಟಿ.ಎಂ.(ಮಾಸ್ಟರ್ ಆಫ್ ಟೂರಿಸಂ ಅಂಡ್ ಟ್ರಾವಲ್ ಮ್ಯಾನೇಜ್ಮೆಂಟ್), ಬಿ.ಕಾಂ, ಬಿ.ಕಾಂ, ಬಿ.ಕಾಂ ಮತ್ತು ಪಿ.ಜಿ. ಡಿಪ್ಲೊಮಾ. ಮ್ಯಾನೇಜ್ಮೆಂಟ್: ಬಿಬಿಎ, ಬಿಬಿಎ ಮತ್ತು ಎಂ.ಬಿ.ಎ. ,ತಾತ್ಕಾಲಿಕ ಹುದ್ದೆಗಳಾದ ಪ್ರಾಂಶುಪಾಲರು (ಸಮಾಲೋಚಕರು), ಸಹಾಯಕ ನಿರ್ದೇಶಕರು-ದೈಹಿಕ ಶಿಕ್ಷಣ, ಸಹಾಯಕ ಗ್ರಂಥಪಾಲಕರು, ಸಂಯೋಜಕರು - ಸ್ನಾತಕ ಪದವಿ ಕೋರ್ಸುಗಳಿಗೆ, ಉಪನಿರ್ದೇಶಕರು - ಪ್ರಸಾರಾಂಗ (ಸಮಾಲೋಚಕರು) ಮತ್ತು ದೈಹಿಕ ಶಿಕ್ಷಣ ಶಿಕ್ಷಕರ (ವಿಶ್ವವಿದ್ಯಾನಿಲಯದ ಮಹಿಳಾ ಕಾಲೇಜು ಮತ್ತು ಸೆಂಟ್ರಲ್ ಕಾಲೇಜು ಆವರಣ) ಹುದ್ದೆಗಳಿಗೆ ಯುಜಿಸಿ ನಿಯಮಾವಳಿಗಳ ಪ್ರಕಾರ ಅರ್ಹತೆ ಪಡೆದ ಅನುಭವ ಅಧ್ಯಾಪಕರನ್ನು ನೇಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ತಾತ್ಕಾಲಿಕ ಹುದ್ದೆಗಳಾದ ಲ್ಯಾಬ್ ಅಸಿಸ್ಟೆಂಟ್ (ಕಂಪ್ಯೂಟರ್ ಸೈನ್ಸ್ ಲ್ಯಾಬ್) ಮತ್ತು ತಾಂತ್ರಿಕ ಸಹಾಯಕರ ಹುದ್ದೆಗಳಿಗೆ ಸಹ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಸ್ವಯಂ ವಿವರಗಳೊಂದಿಗೆ ತತ್ಸಬಂಧ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಅನುಭವವುಳ್ಳ ಪ್ರಮಾಣ ಪತ್ರವನ್ನು ಸೆಪ್ಟೆಂಬರ್ 26 ರೊಳಗೆ ನೇರವಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಳಿಗಾಗಿ ವಿಶ್ವವಿದ್ಯಾನಿಲಯದ ವೆಬ್ಸೈಟ್ ತಿತಿತಿ. ಛಭಿಣ.ಚಿಛಿ.ಟ ನೋಡಬಹುದು ಎಂದು ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಾಯಕ ಪ್ರಾಧ್ಯಾಪಕ ತಾತ್ಕಾಲಿಕ ಹುದ್ದೆಗೆ ಅರ್ಜಿ

**ಬೆಂಗಳೂರು:** ಬೆಂಗಳೂರು ನೃಪತುಂಗ ವಿಶ್ವವಿದ್ಯಾಲಯ ಐಟಿಇಪಿ ಬಿಎಸ್ಸಿ, ಬಿಇಡಿ ಕೋರ್ಸ್ಗಾಗಿ ಶೈಕ್ಷಣಿಕ ಅಧ್ಯಯನ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ 179 ದಿವಸಗಳ ಅವಧಿಗೆ ಮೀರದಂತೆ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಶೈಕ್ಷಣಿಕ ಅಧ್ಯಯನ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಶಿಕ್ಷಣ ವಿಭಾಗದಲ್ಲಿ ಎಂ.ಎಡ್ ಸ್ನಾತಕೋತ್ತರ ಪದವಿಯೊಂದಿಗೆ ಕನಿಷ್ಟ ಶೇ. 55 ಅಂಕಗಳನ್ನು ಗಳಿಸಿರಬೇಕು. ಎನ್‌ಇಟಿ ಅಥವಾ ಕೆಸೆಟ್ ಅರ್ಹತಾ ಪರೀಕ್ಷೆ ಅಥವಾ ಶಿಕ್ಷಣ ವಿಭಾಗದಲ್ಲಿ ಪಿಹೆಚ್ಡಿ ಅಥವಾ ಇತರೆ ವಿದ್ಯಾರ್ಹತೆ ಹೊಂದಿರಬೇಕು. ಅಥವಾ



ಈ ವರ್ಗಗಳಿಗೆ ವಿಶ್ವವಿದ್ಯಾಲಯ ಆಯೋಗವು ಸೂಚಿಸಿದ ಇತರೆ ಶೈಕ್ಷಣಿಕ ಅರ್ಹತೆಗಳನ್ನು ಹೊಂದಿರಬೇಕು. ಮನೋವಿಜ್ಞಾನ ಅಥವಾ ತತ್ವಶಾಸ್ತ್ರ, ಸಮಾಜಶಾಸ್ತ್ರ ಅಥವಾ ಸಂಬಂಧಿತ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಹೊಂದಿರಬೇಕು. ಮಾಸಿಕ ವೇತನ ರೂ. 35000/- ಮಾತ್ರ ನೀಡಲಾಗುವುದು.

ನೇಮಕಾತಿ ಪಡೆಯಲು ಬಯಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಎಲ್ಲಾ ಮೂಲ ದಾಖಲೆಗಳು ಹಾಗೂ ಮೂಲದಾಖಲೆಗಳ ಎರಡು ಜೆರಾಕ್ಸ್ ಪ್ರತಿಗಳು ಮತ್ತು ಎರಡು ಭಾವಚಿತ್ರಗಳನ್ನು ಅರ್ಜಿ ನಮೂನೆಯೊಂದಿಗೆ ಸೆಪ್ಟೆಂಬರ್ 27ರ ಬೆಳಿಗ್ಗೆ 11 ಗಂಟೆಗೆ ವಿಶ್ವವಿದ್ಯಾಲಯದ ಕುಲಪತಿಗಳ ಕಚೇರಿಗೆ ಸಂದರ್ಶನಕ್ಕೆ ಹಾಜರಾಗುವುದು. ಯಾವುದೇ ಸಂದರ್ಭದಲ್ಲಿ ಅರ್ಜಿಯನ್ನು ಮುಂಗಡವಾಗಿ ಕಳುಹಿಸಬಾರದು. ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗುವುದು. ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ. ನೇಮಕಾತಿಯು ತಾತ್ಕಾಲಿಕವಾಗಿರುವುದರಿಂದ ಯಾವುದೇ ಸಮಯದಲ್ಲಿ ಯಾವುದೇ ಕಾರಣ ತಿಳಿಸದೇ ಕರ್ತವ್ಯದಿಂದ ತೆಗೆದು ಹಾಕುವ ಅಧಿಕಾರ ನೃಪತುಂಗ ವಿಶ್ವವಿದ್ಯಾಲಯಕ್ಕೆ ಇರುವುದು ಹಾಗೂ ನೇರ ನೇಮಕಾತಿಗಾಗಿ ಯಾವುದೇ ತರಹದ ಹಕ್ಕಿಗೆ ಒಳಪಟ್ಟಿರುವುದಿಲ್ಲ ಎಂದು ನೃಪತುಂಗ ವಿಶ್ವವಿದ್ಯಾಲಯದ ಕುಲಸಚಿವರು ತಿಳಿಸಿದ್ದಾರೆ.

## ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ

**ರಾಮನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ರಾಮನಗರ ಜಿಲ್ಲೆಯ ನಾಲ್ಕು ತಾಲ್ಲೂಕುಗಳಲ್ಲಿ ಸೆ. 20ರಂದು ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಏರ್ಪಡಿಸಲಾಗಿದೆ.

ವಿವರ ಇಂತಿದೆ: ರಾಮನಗರ ತಾಲ್ಲೂಕು ಕ್ರೀಡಾಕೂಟವನ್ನು ರಾಮನಗರ ಜಿಲ್ಲಾ ಕ್ರೀಡಾಂಗಣದಲ್ಲಿ, ಕನಕಪುರ ತಾಲ್ಲೂಕು ಕ್ರೀಡಾಕೂಟವನ್ನು ಕನಕಪುರ ತಾಲ್ಲೂಕು ಕ್ರೀಡಾಂಗಣದಲ್ಲಿ, ಚನ್ನಪಟ್ಟಣ ತಾಲ್ಲೂಕು ಕ್ರೀಡಾಕೂಟವನ್ನು ಚನ್ನಪಟ್ಟಣದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲಿ, ಮಾಗಡಿ ತಾಲ್ಲೂಕು ಕ್ರೀಡಾಕೂಟವನ್ನು ಮಾಗಡಿಯ ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ. 25ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಸೆ.20 ರಂದು ಹಾಗೂ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಸೆ. 25ರಂದು ಹೆಸರು ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಖುದ್ದಾಗಿ ಅಥವಾ ದೂ.ಸಂಖ್ಯೆ: 7338149456 ಮತ್ತು ಅಥ್ಲೇಟಿಕ್ ತರಬೇತುದಾರರ ದೂ.ಸಂಖ್ಯೆ: 8494830078 ಅನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಸೌಲಭ್ಯ ಪಡೆಯಲು ಅರ್ಜಿ

**ಬೆಂಗಳೂರು ಗ್ರಾಮಾಂತರ:** ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುತ್ತಿರುವ 2024-25ನೇ ಸಾಲಿಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿಯ ಜನರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ-ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-1(ಸಹಾಯಧನ ಗರಿಷ್ಠ ರೂ.1.00 ಲಕ್ಷ), ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-2 (ಸಹಾಯಧನ ಗರಿಷ್ಠ ರೂ.2.00 ಲಕ್ಷ), ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-3-ಸ್ವಾವಲಂಬಿ ಸಾರಥಿ ಯೋಜನೆ (ಸರಕು ವಾಹನ/ಟ್ಯಾಕ್ಸಿ(ಹಳದಿ ಬೋರ್ಡ್) ಸಹಾಯಧನ ಗರಿಷ್ಠ ರೂ.4.00 ಲಕ್ಷ), ಮೈಕ್ರೋ ಕ್ರೆಡಿಟ್(ಪ್ರೇರಣಾ) (ಮಹಿಳಾ ಸ್ವ ಸಹಾಯ ಗುಂಪುಗಳಿಗೆ), ಭೂ ಒಡೆತನ ಯೋಜನೆಯಡಿ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಹಾಗೂ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯುವ ಸಲುವಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಫಲಾಪೇಕ್ಷಿಗಳು ಆನ್ಲೈನ್ ಮೂಲಕ ಅರ್ಜಿಗಳನ್ನು 2024 ರ ಸೆಪ್ಟೆಂಬರ್ 10 ರಿಂದ ಅಕ್ಟೋಬರ್ 10 ರವರೆಗೆ ಸಲ್ಲಿಸಬಹುದಾಗಿದೆ.

ನಿಗಮದಿಂದ ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ಇರಬೇಕಾದ ಸಾಮಾನ್ಯ ಅರ್ಹತೆಗಳು.

ಅರ್ಜಿದಾರರು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವರಾಗಿರಬೇಕು ಹಾಗೂ ಕಳೆದ ಕನಿಷ್ಠ 15 ವರ್ಷಗಳಿಂದ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

ಅರ್ಜಿದಾರರು ಕನಿಷ್ಠ 21 ರಿಂದ 50 ವರ್ಷ ಮೇಲ್ಪಟ್ಟವರಾಗಿರಬೇಕು.

ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ಗ್ರಾಮೀಣ ಪ್ರದೇಶವಾದಲ್ಲಿ ರೂ.1,50,000 ಹಾಗೂ ನಗರ ಪ್ರದೇಶವಾದಲ್ಲಿ ರೂ. 2,00,000 ಮಿತಿಯೊಳಗಿರಬೇಕು.

ಅರ್ಜಿದಾರರ ಕುಟುಂಬದ ಯಾವುದೇ ಸದಸ್ಯರು ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆಯಲ್ಲಿ ನೌಕರಿಯಲ್ಲಿರಬಾರದು.

ಅರ್ಜಿದಾರರು ಹಾಗೂ ಅವರ ಕುಟುಂಬದವರು ಯಾವುದೇ ನಿಗಮಗಳಿಂದ ಈ ಹಿಂದೆ ಸಾಲ ಸೌಲಭ್ಯ ಪಡೆದಿರಬಾರದು.

ಅರ್ಜಿದಾರರು ಆನ್ಲೈನ್ನಲ್ಲಿ ಸಲ್ಲಿಸಬೇಕಾದ ದಾಖಲಾತಿಗಳ ವಿವರ: ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ. ಆರ್.ಡಿ ನಂಬರ್ ಹೊಂದಿರುವ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ. ಪಡಿತರ ಚೀಟಿ/ಆಧಾರ್ ಕಾರ್ಡ್/ಮತದಾರರ ಗುರುತಿನ ಚೀಟಿ ಅರ್ಜಿದಾರರ ಬ್ಯಾಂಕ್ ಉಳಿತಾಯ ಖಾತೆಯ ವಿವರಗಳನ್ನೊಳಗೊಂಡ ಪಾಸ್ಬುಕ್ ಪ್ರತಿ. ಇಚ್ಛಿಸುವ ಯೋಜನೆಗಳ ಯೋಜನಾ ವರದಿ. ವಾಹನದ ಪರವಾನಗಿ. ಗಂಗಾ ಕಲ್ಯಾಣ ಯೋಜನೆಯಡಿ ಅರ್ಜಿ ಸಲ್ಲಿಸುವವರು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. ವಿಶೇಷ ಸೂಚನೆ:2023-24ನೇ ಸಾಲಿನಲ್ಲಿ ಆನಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅರ್ಹ ಫಲಾಪೇಕ್ಷಿಗಳು ಆನ್ಲೈನ್ ಮೂಲಕ ಆಯಾ ನಿಗಮದ ವ್ಯಾಪ್ತಿಯಲ್ಲಿ ಬರುವ ಸಮುದಾಯಗಳ ಅರ್ಜಿಗಳನ್ನು ಸಲ್ಲಿಸಬೇಕಾದ ವೆಬ್ಸೈಟ್ ವಿಳಾಸ https://sevasindhu.karnataka.gov.in ನಲ್ಲಿ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್, ಇವುಗಳ ಮೂಲಕ ಅಪ್ಲೋಡ್ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಕಛೇರಿ ಅಥವಾ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳನ್ನು (9341886539) ಹಾಗೂ ನಿಗಮದ ವೆಬ್ಸೈಟ್ ನಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಪ್ತ ಸಮಾಲೋಚನೆಗೆ ವಿಶೇಷ ಕೌಶಲ ಅಗತ್ಯ

**ರಾಮನಗರ:** ಸಲಹೆ ಮತ್ತು ಆಪ್ತ ಸಮಾಲೋಚನೆಗೆ ಸಾಕಷ್ಟು ವ್ಯತ್ಯಾಸವಿದೆ ಆಪ್ತ ಸಮಾಲೋಚನೆ ಮಾಡಲು ಹಲವು ಕೌಶಲ್ಯಗಳ ಮುಖ್ಯ ಎಂದು ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಯ ಮನೋವೈದ್ಯ ಡಾ. ರೂಪೇಶ್ ಬಿ.ಎನ್ ಅವರು ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಚನ್ನಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಂಜೀವ ರತ್ನ ಮಹಲ್ ಕಾಲೇಜಿನ ಸಭಾಂಗಣದಲ್ಲಿ ಆಪ್ತಮಿತ್ರ - ಆಪ್ತ ಸಮಾಲೋಚನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆಪ್ತ ಸಮಾಲೋಚನೆ ಮಾಡುವಾಗ ಪೂರ್ವಾಪರಗಳನ್ನು ಕೂಲಂಕುಶವಾಗಿ ತಿಳಿದು ಅವರ ಮಾನಸಿಕ ಖಿನ್ನತೆಗಳನ್ನು ಅರಿತು ವಿದ್ಯಾರ್ಥಿಗಳ ಆರ್ಥಿಕ ವ್ಯವಸ್ಥೆ, ಸಾಮಾಜಿಕ ಪರಿಸರವನ್ನು ಅರ್ಥೈಸಿಕೊಂಡು ಅವರನ್ನು ಕೌನ್ಸೆಲ್ಲಿಂಗ್‌ಗೆ ಒಳಪಡಿಸುವುದರ ಮೂಲಕ ಸಮಸ್ಯೆಗಳಿಗೆ ಪರಿಹಾರವನ್ನು ಪಡೆಯಬಹುದು ಎಂದರು.

ಗುಂಪು ಆಪ್ತ ಸಮಾಲೋಚನೆಯಿಂದ ನಮ್ಮಲ್ಲಿರುವ ಶಕ್ತಿಯನ್ನು ನಾವು ಹೇಗೆ ಹೆಚ್ಚಿಸಿಕೊಳ್ಳಬಹುದು, ನಮ್ಮ ಭಾವನೆಯನ್ನು ಹೇಗೆ ಸರಿಯಾದ ರೀತಿಯಲ್ಲಿ ವ್ಯಕ್ತಪಡಿಸುವುದು ಎಂಬುದನ್ನು ತಿಳಿಯಬಹುದು. ಸಮಸ್ಯೆಯನ್ನು ಬಗೆಹರಿಸಲು ಇರುವ ಇತರ ದಾರಿಗಳನ್ನು ಹುಡುಕಲು ನಮ್ಮಲ್ಲಿರುವ ಅರಿವು ಹಾಗೂ ಜ್ಞಾನವನ್ನು ಹೆಚ್ಚಿಸಲು ಗುಂಪು ಆಪ್ತ ಸಮಾಲೋಚನೆಯು ಸಹಾಯ ಮಾಡುತ್ತದೆ ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಂಶುಪಾಲರಾದ ಡಾ.ಉಷಾಮಾಲಿನಿ ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಗೊಂದಲಗಳನ್ನು ಬಗೆಹರಿಸಲು ಶಿಕ್ಷಕರಿಗೆ ಆಪ್ತ ಸಲಹೆ ಅತಿಮುಖ್ಯ. ವಿದ್ಯಾರ್ಥಿಗಳ ಮೂಲಭೂತ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವರನ್ನು ಸಮಾಜದ ಮುಖ್ಯವಾಹಿನಿಗೆ ತಂದು ಅವರು ನಿರ್ಭಯವಾಗಿ ಬದುಕನ್ನು ರೂಪಿಸಿಕೊಳ್ಳುವಂತಹ ಶಿಕ್ಷಣವನ್ನು ಪಡೆಯಲು ಆಪ್ತ ಸಲಹೆ ಮುಖಾಂತರ ಸಮಸ್ಯೆಗಳನ್ನು ಪರಿಹರಿಸಬಹುದು ಎಂದರು

ಸಂಪನ್ಮೂಲ ವ್ಯಕ್ತಿಗಳಾದ ಅರುಶಿವಾಹಿ, ನಿರಂಜನ್ ಎಸ್, ಆಪ್ತಮಿತ್ರ ಸಮಿತಿಯ ಸಂಚಾಲಕರಾದ ಡಾ.ಅನಿತಾ ರಾವ್, ಹಿಂದಿ ವಿಭಾಗದ ಸಹ ಪ್ರಾಧ್ಯಾಪಕ ಡಾ. ಪ್ರಭು ಉಪಾಸೆ, ಇಂಗ್ಲೀಷ್ ವಿಭಾಗದ ಡಾ. ಎಚ್.ಆರ್ ಅನುರಾಧ, ವಾಣಿಜ್ಯ ಶಾಸ್ತ್ರ ವಿಭಾಗದ ಡಾ. ಲಕ್ಷ್ಮೀ ವಿ, ಐ.ಕ್ಯೂ.ಎ.ಸಿ ಸಂಚಾಲಕ ಡಾ.ಮುಜಾಹಿದ್ ಖಾನ್, ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ಎನ್.ಸಿ.ಸಿ. ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## ರಿಲಯನ್ಸ್ ನಿಂದ ದೀಪಾವಳಿ ಡಬಲ್ ಧಮಾಕಾ ಆಫರ್ ಘೋಷಣೆ

ರಿಲಯನ್ಸ್ ಡಿಜಿಟಲ್ ನಿಂದ ಬಹು ನಿರೀಕ್ಷಿತ 'ದೀಪಾವಳಿ ಡಬಲ್ ಧಮಾಕಾ'ಆಫರ್ ಘೋಷಣೆ ಮಾಡಲಾಗಿದೆ. ಇದರೊಂದಿಗೆ ಗ್ರಾಹಕರಿಗೆ ಒಂದು ವರ್ಷ ಉಚಿತವಾಗಿ ಜಿಯೋಏರ್ ಫೈಬರ್ ಸೇವೆ ದೊರೆಯಲಿದೆ. ದೇಶದಾದ್ಯಂತ ಇರುವ ಎಲ್ಲ ರಿಲಯನ್ಸ್ ಡಿಜಿಟಲ್ ಮಳಿಗೆಗಳಲ್ಲೂ ಈ ಹಬ್ಬದ ಆಫರ್ ದೊರೆಯಲಿದೆ. ಅಂದಹಾಗೆ ಸೆಪ್ಟೆಂಬರ್ 18ರಿಂದ ನವೆಂಬರ್ ಮೂರನೇ ತಾರೀಕಿನವರೆಗೆ ಈ ಕೊಡುಗೆ ಜಾರಿಯಲ್ಲಿರುತ್ತದೆ. ಯಾವೆಲ್ಲ ಗ್ರಾಹಕರು ಇಪ್ಪತ್ತು ಸಾವಿರ ರೂಪಾಯಿ ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತವನ್ನು ರಿಲಯನ್ಸ್ ಡಿಜಿಟಲ್ ಅಥವಾ ಮೈಜಿಯೋದಲ್ಲಿ ವೆಚ್ಚ ಮಾಡುತ್ತಾರೋ ಅಂಥವರು ಒಂದು ವರ್ಷಕ್ಕೆ ಜಿಯೋಏರ್ ಫೈಬರ್ ಪಡೆಯುವುದಕ್ಕೆ ಅರ್ಹರಾಗುತ್ತಾರೆ. ಇದು ಮನೆಗಳಿಗೆ ಅತ್ಯಂತ ವೇಗದ ಇಂಟರ್ ನೆಟ್ ಸಂಪರ್ಕವನ್ನು ತರುತ್ತದೆ. ಈ ಕೊಡುಗೆಯು ಜಿಯೋಫೈಬರ್ ಹಾಗೂ ಜಿಯೋಏರ್ ಫೈಬರ್ ನ ಹೊಸ ಗ್ರಾಹಕರು ಮತ್ತು ಈಗಾಗಲೇ ಗ್ರಾಹಕರಾದವರಿಗೆ ದೊರೆಯುತ್ತದೆ. ಈ ಕೊಡುಗೆಯು ಜಿಯೋದ ವಿಶ್ವಾಸಾರ್ಹ ಗ್ರಾಹಕರಿಗೆಲ್ಲ ದೊರೆಯಬೇಕು ಎಂಬುದು ಕಂಪನಿ ಉದ್ದೇಶವಾಗಿದೆ. ಹೊಸ ಗ್ರಾಹಕರಾಗಿದ್ದಲ್ಲಿ ಇಪ್ಪತ್ತು ಸಾವಿರ ರೂಪಾಯಿ ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತವನ್ನು ರಿಲಯನ್ಸ್ ಡಿಜಿಟಲ್ ಅಥವಾ ಮೈಜಿಯೋದಲ್ಲಿ ವೆಚ್ಚ ಮಾಡಬೇಕು. ಅಥವಾ ಜಿಯೋಏರ್ ಫೈಬರ್ ಸಂಪರ್ಕವನ್ನು ಪಡೆದುಕೊಳ್ಳುವಾಗ 2,222 ರೂಪಾಯಿಗೆ ಮೂರು ತಿಂಗಳ ದೀಪಾವಳಿ ಪ್ಲಾನ್ ಗೆ ಚಂದಾದಾರರಾಗಬೇಕು. ಇನ್ನು ಈಗಾಗಲೇ ಗ್ರಾಹಕರಾಗಿರುವವರು 2,222 ರೂಪಾಯಿಗೆ ಮುಂಗಡವಾಗಿ ಮೂರು ತಿಂಗಳ ದೀಪಾವಳಿ ಪ್ಲಾನ್ ಗೆ ರೀಚಾರ್ಜ್ ಮಾಡಿಸಬೇಕಾಗುತ್ತದೆ. ಅರ್ಹ ಗ್ರಾಹಕರು ಹನ್ನೆರಡು ಕೂಪನ್ ಗಳನ್ನು ಪಡೆಯುತ್ತಾರೆ. ಅವರು 2024ರ ನವೆಂಬರ್ ನಿಂದ 2025ರ ಅಕ್ಟೋಬರ್ ತನಕ ಪ್ರತಿ ತಿಂಗಳು ರಿಡೀಮ್ ಮಾಡಿಕೊಳ್ಳಬಹುದು. ಆ ಕೂಪನ್ ಮೌಲ್ಯವು ಆಯಾ ಗ್ರಾಹಕರು ಸಕ್ರಿಯ ಜಿಯೋಏರ್ ಫೈಬರ್ ಪ್ಲಾನ್ ಗೆ ಸಮನಾಗಿರುತ್ತದೆ. ಅದನ್ನು 30 ದಿನದೊಳಗೆ ರಿಲಯನ್ಸ್ ಡಿಜಿಟಲ್, ಮೈ ಜಿಯೋ ಸ್ಟೋರ್ ಜಿಯೋಪಾಯಿಂಟ್, ಜಿಯೋಮಾರ್ಟ್ ಎಕ್ಸ್ ಕ್ಲೂಸಿವ್ ಮಳಿಗೆಯಲ್ಲಿ ತಮ್ಮ ಮುಂದಿನ ಎಲೆಕ್ಟ್ರಾನಿಕ್ಸ್ ಖರೀದಿ ಹದಿನೈದು ಸಾವಿರ ರೂಪಾಯಿ ಮೇಲ್ಪಟ್ಟು ಮಾಡಿದಾಗ ರಿಡೀಮ್ ಮಾಡಬಹುದು.ಈ ಆಫರ್ ಇರುವುದು ನವೆಂಬರ್ ಮೂರನೇ ತಾರೀಕಿನ ತನಕ ಮಾತ್ರ. ಈ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ಹತ್ತಿರದ ರಿಲಯನ್ಸ್ ಡಿಜಿಟಲ್ ಅಥವಾ ಮೈಜಿಯೋ ಸ್ಟೋರ್ ಗೆ ಭೇಟಿ ನೀಡಬಹುದು.

## ಅಕ್ಕಿ ರೊಟ್ಟಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೊದಲಿಗೆ ಒಂದು ಕಪ್ ಅಕ್ಕಿ ಹಿಟ್ಟು, ಕಾಲು ಕಪ್ ಸಣ್ಣಗೆ ಹಚ್ಚಿಟ್ಟುಕೊಂಡ ಈರುಳ್ಳಿ, ಕಾಲು ಕಪ್ ತುರಿದಿಟ್ಟುಕೊಂಡ ಕ್ಯಾರೆಟ್ , ಕಾಲು ಕಪ್ ಸೌತೆಕಾಯಿ ತುರಿ, ಹಸಿಮೆಣಸು–2 ಸಣ್ಣಗೆ ಹಚ್ಚಿಟ್ಟುಕೊಳ್ಳಿ. ಉಪ್ಪು ರುಚಿಗೆ ತಕ್ಕಷ್ಟು. ಕೊತ್ತಂಬರಿಸೊಪ್ಪು ಸ್ವಲ್ಪ.

### ಮಾಡುವ ವಿಧಾನ

ಮೊದಲಿಗೆ ಈರುಳ್ಳಿ, ಕ್ಯಾರೆಟ್, ಸೌತೆಕಾಯಿ, ಹಸಿಮೆಣಸು, ಕೊತ್ತಂಬರಿಸೊಪ್ಪು, ಉಪ್ಪು ಇವಿಷ್ಟನ್ನು ಒಂದು ಅಗಲವಾದ ಪಾತ್ರೆಗೆ ಹಾಕಿಕೊಂಡು ಕೈಯಿಂದ ಚೆನ್ನಾಗಿ ಹಿಚುಕಿಕೊಳ್ಳಿ. ಇದಕ್ಕೆ ಅಕ್ಕಿಹಿಟ್ಟನ್ನು ಸ್ವಲ್ಪ ಸ್ವಲ್ಪವೇ ಹಾಕಿಕೊಂಡು ಚಪಾತಿ ಹಿಟ್ಟಿನ ಹದಕ್ಕೆ ಕಲಸಿಕೊಳ್ಳಿ. ಹಿಟ್ಟನ್ನು ನೀರು ಮಾಡಬೇಡಿ.

ನಿಮ್ಮ ಮನೆಯಲ್ಲಿ ಬಾಳೆ ಎಲೆ ಇದ್ದರೆ ಅದನ್ನು ಚೆನ್ನಾಗಿ ತೊಳೆದು ತುಸು ಎಣ್ಣೆ ಸವರಿ ಈ ಹಿಟ್ಟಿನ ಹದ ಗಾತ್ರದ ಉಂಡೆ ಮಾಡಿಕೊಂಡು ನಿಧಾನಕ್ಕೆ ತಟ್ಟಿ ಕಾದ ಕಾವಲಿಗೆ ಹಾಕಿ. ಇಲ್ಲದಿದ್ದರೆ ಅಂಗಡಿಯಲ್ಲಿ ಬಟರ್ ಪೇಪರ್ ಸಿಗುತ್ತದೆ. ಅದರಲ್ಲಿಯೂ ಕೂಡ ಸುಲಭವಾಗಿ ರೊಟ್ಟಿ ತಟ್ಟಬಹುದು. ಕಾದ ಕಾವಲಿಯಲ್ಲಿ ಎರಡು ಕಡೆ ಚೆನ್ನಾಗಿ ರೊಟ್ಟಿ ಬೇಯಿಸಿಕೊಳ್ಳಿ. ತುಪ್ಪದ ಜತೆ ಅಥವಾ ಕಾಯಿ ಚಟ್ನಿ ಜತೆ ಇದನ್ನು ಸವಿಯಲು ಸಖತ್ ರುಚಿಕರವಾಗಿರುತ್ತದೆ.

## ನಟಿ ಸಾಯಿಪಲ್ಲವಿ ಡೇಟಿಂಗ್ ಮಾಡ್ತಾ ಇದ್ದಾರಂತೆ?



ಮೊದಲ ಸಿನಿಮಾದಿಂದಲೇ ವಿಭಿನ್ನ ಪಾತ್ರಗಳಲ್ಲಿ ನಟಿಸಿ ಒಳ್ಳೆಯ ಹೆಸರು ಗಳಿಸಿರುವ ಸಾಯಿ ಪಲ್ಲವಿ, ಉತ್ತಮ ಕಂಟೆಂಟ್ ಸಿನಿಮಾಗಳನ್ನು ಆಯ್ದುಕೊಂಡು ಚಿತ್ರರಂಗದಲ್ಲಿ ತನಗೊಂದು ವಿಶಿಷ್ಟ ಇಮೇಜ್ ಕ್ರಿಯೇಟ್ ಮಾಡಿಕೊಂಡಿದ್ದಾರೆ. ತನ್ನ ಚೊಚ್ಚಲ ತೆಲುಗು ಚಿತ್ರ ಫಿದಾದಿಂದ ಇತ್ತೀಚೆಗೆ ಬಿಡುಗಡೆಯಾದ ವಿರಾಟಪರ್ವಂ ವರೆಗೆ ಎಲ್ಲಾ ವಿಭಿನ್ನ ಪಾತ್ರಗಳಲ್ಲಿ ನಟಿಸುವ ಮೂಲಕ ತನ್ನ ಅಭಿಮಾನಿಗಳನ್ನು ರಂಜಿಸುದ್ದಾರೆ

ಸಾಯಿ ಪಲ್ಲವಿ ಡಾನ್ಸ್ಗೆ ವಿಶೇಷವಾದ ಅಭಿಮಾನಿಗಳ ಬಳಗವೇ ಇದೆ.. ಇವರು ತೆಲುಗು, ತಮಿಳು ಭಾಷೆಗಳಲ್ಲಿ ಸಿನಿಮಾ ಮಾಡುವ ಮೂಲಕ ಅತ್ಯಂತ ಪ್ರತಿಭಾವಂತ ನಾಯಕಿ ಎಂದು ಗುರುತಿಸಿಕೊಂಡರು. ಸಾಯಿ ಪಲ್ಲವಿ ಅವರಿಗೆ ಕಥೆ ಇಷ್ಟವಾದರೆ ಮತ್ತು ಅದರಲ್ಲಿ ತಮ್ಮ ಪಾತ್ರಕ್ಕೆ ಮಹತ್ವವಿದ್ದರೆ ಮಾತ್ರ ಚಿತ್ರಕ್ಕೆ ಗ್ರೀನ್ ಸಿಗ್ನಲ್ ನೀಡುತ್ತಾರೆ ಎಂಬ ಮಾತು ಇಂಡಸ್ಟ್ರಿಯಲ್ಲಿ ಇದೆ. ಸಾಯಿ ಪಲ್ಲವಿ ಎಲ್ಲೆ ಮೀರಿದ ಪಾತ್ರಗಳಿಂದ ದೂರವಿರುತ್ತಾರೆ.. ಇದೇ ಸಾಯಿ ಪಲ್ಲವಿಯನ್ನು ಇಂಡಸ್ಟ್ರಿಯಲ್ಲಿ ವಿಶೇಷ ಸ್ಥಾನದಲ್ಲಿರಿಸಿತು.

ನಟಿಯರ ಪೈಕಿ ಸಾಯಿ ಪಲ್ಲವಿ ವಿಶೇಷ ಕ್ರೇಜ್ ಪಡೆದುಕೊಂಡಿದ್ದಾರೆ. ಈ ನಡುವೆ ಸಾಯಿ ಪಲ್ಲವಿಗೆ ಸಂಬಂಧಿಸಿದ ಸುದ್ದಿಯೊಂದು ವೈರಲ್ ಆಗಿದೆ. ನಟಿ ವಿವಾಹಿತ ನಾಯಕನೊಂದಿಗೆ ಡೇಟಿಂಗ್ ಮಾಡುತ್ತಿದ್ದಾರೆ. ಅದೂ ಅಲ್ಲದೆ ನಾಯಕನಿಗೆ ಮದುವೆಯಾಗಿ ಮಕ್ಕಳಿದ್ದಾರೆ. ಈ ಸುದ್ದಿ ಸಾಯಿ ಪಲ್ಲವಿ ಅಭಿಮಾನಿಗಳಿಗೆ ಶಾಕ್ ನೀಡಿದೆ.

ಆದರೆ ಈ ಸುದ್ದಿಯಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದು ಅಭಿಮಾನಿಗಳು ಸುಮ್ಮನಾಗಿದ್ದಾರೆ.. ಅಲ್ಲದೇ ಯಾರೋ ತಮಗೆ ಬೇಕಾದ್ದಕ್ಕೆ ವದಂತಿ ಸೃಷ್ಟಿಸುತ್ತಿದ್ದಾರೆ ಎನ್ನಲಾಗುತ್ತಿದೆ.. ಸಾಯಿ ಪಲ್ಲವಿ ವೃತ್ತಿಜೀವನದ ವಿಷಯಕ್ಕೆ ಬಂದರೆ, ಬಾಲಿವುಡ್ನಲ್ಲಿ 'ರಾಮಾಯಣ' ಚಿತ್ರದಲ್ಲಿ ಸೀತೆಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಅಲ್ಲದೇ ನಾಗ ಚೈತನ್ಯ ಜೊತೆ ತೆಲುಗಿನ 'ತಾಂಡೇಲ್' ಚಿತ್ರದಲ್ಲಿ ನಟಿಸುತ್ತಿದ್ದಾರೆ.

## ಎಲೆಕೋಸಿನ ಪ್ರಯೋಜನಗಳು



### ಹೆಲ್ತ್ ಟಿಪ್ಸ್

ಎಲೆಕೋಸು ವಿಟಮಿನ್ ಕೆ, ಅಯೋಡಿನ್ ಮತ್ತು ಆಂಥೋಸಯಾನಿನ್ಗಳಂತಹ ಆಂಟಿಆಕ್ಸಿಡೆಂಟ್ಗಳಲ್ಲಿ ಸಮೃದ್ಧವಾಗಿದೆ. ಎಲೆಕೋಸು ದೇಹದಲ್ಲಿನ ಉರಿಯೂತವನ್ನು ಕಡಿಮೆ ಮಾಡುತ್ತದೆ. ಇದರಲ್ಲಿರುವ ಉತ್ಕರ್ಷಣ ನಿರೋಧಕಗಳಾದ ಸಲ್ಫೊರಾಫೇನ್ ಮತ್ತು ಕೆಂಪ್ಫೆರಾಲ್ ಉರಿಯೂತದ ಪರಿಣಾಮಗಳನ್ನು ಹೊಂದಿದ್ದು ಇದು ದೀರ್ಘಕಾಲದ ಉರಿಯೂತ ಮತ್ತು ಅದರ ರೋಗಲಕ್ಷಣಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಎಲೆಕೋಸಿನಲ್ಲಿರುವ ಸಲ್ಫರ್–ಒಳಗೊಂಡಿರುವ ಸಂಯುಕ್ತವಾದ ಸಲ್ಫೊರಾಫೇನ್ ಕ್ಯಾನ್ಸರ್–ಹೋರಾಟದ ಶಕ್ತಿಯನ್ನು ಹೊಂದಿದೆ. ಈ ಸಂಯುಕ್ತವು ಕ್ಯಾನ್ಸರ್ ಕೋಶಗಳ ಬೆಳವಣಿಗೆಯನ್ನು ಪ್ರತಿಬಂಧಿಸುವಲ್ಲಿ ಪರಿಣಾಮಕಾರಿ ಎಂದು ಪರಿಗಣಿಸಲಾಗಿದೆ. ಇದಲ್ಲದೇ ಎಲೆಕೋಸು ವಿಟಮಿನ್ ಕೆ, ಅಯೋಡಿನ್ ಮತ್ತು ಆಂಥೋಸಯಾನಿನ್ಗಳಂತಹ ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಈ ಅಂಶಗಳು ಮೆದುಳಿಗೆ ಪ್ರಯೋಜನಕಾರಿ. ಅಲ್ಲದೆ, ಆಲ್ಝೈಮರ್ನ ರೋಗಿಗಳ ಮೆದುಳಿನಲ್ಲಿ ಕಂಡುಬರುವ ಕೆಟ್ಟ ಪ್ರೋಟೀನ್ಗಳ ಪ್ರಮಾಣವನ್ನು ಕಡಿಮೆ ಮಾಡಲು ಎಲೆಕೋಸು ಸಹಾಯ ಮಾಡುತ್ತದೆ.

ಎಲೆಕೋಸಿನ ಪ್ರಯೋಜನಗಳಲ್ಲಿ ಒಂದು ರಕ್ತದೊತ್ತಡವನ್ನು ನಿಯಂತ್ರಿಸುವುದು. ಇವುಗಳಲ್ಲಿರುವ ಪೊಟ್ಯಾಸಿಯಮ್ ಮತ್ತು ಫೈಟೋಕೆಮಿಕಲ್ ಆಂಟಿಆಕ್ಸಿಡೆಂಟ್ಗಳು ರಕ್ತದೊತ್ತಡವನ್ನು ಸ್ಥಿರ ಮಟ್ಟದಲ್ಲಿಡಲು ಕೆಲಸ ಮಾಡುತ್ತವೆ. ಕ್ಯಾಬೇಜ್ ಆಂಥೋಸಯಾನಿನ್ ಅನ್ನು ಹೊಂದಿರುತ್ತದೆ, ಇದು ಶಕ್ತಿಯುತವಾದ ಉತ್ಕರ್ಷಣ ನಿರೋಧಕವಾಗಿದ್ದು ಅದು ಕ್ಯಾನ್ಸರ್ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಇದಲ್ಲದೆ, ಇದು ಜೀರ್ಣಕ್ರಿಯೆ, ಮಲಬದ್ಧತೆ, ದುರ್ಬಲ ರೋಗನಿರೋಧಕ ಶಕ್ತಿ, ಸ್ಥೂಲಕಾಯತೆ, ಹುಣ್ಣುಗಳು, ಮಧುಮೇಹ ಮತ್ತು ಕೊಲೆಸ್ಟ್ರಾಲ್ನಂತಹ ಸಮಸ್ಯೆಗಳನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

## ಬಳೆ ಶಾಸ್ತ್ರ ಮಾಡಿಕೊಂಡ ಸೋನಲ್ ಮೊಂಥೆರೋ



ಇತ್ತೀಚೆಗಷ್ಟೇ ಮದುವೆಯಾದ ನವವಧು ಸೋನಲ್ ಈಗ ಇನ್ಸ್ಟಾಗ್ರಾಂ ನಯಾ ಫೋಟೋದೊಂದಿಗೆ ಕಾಣಿಸ್ಕೊಂಡಿದ್ದಾರೆ. ಹಸಿರು ಸೀರೆಯುಟ್ಟು ಕೈತುಂಬಾ ಹಸಿರು ಬಳೆ ಧರಿಸಿ ಪೋಸ್ ಕೊಟ್ಟಿದ್ದಾರೆ. ಇದು ಬಳೆಶಾಸ್ತ್ರದ ಫೋಟೋಗಳಾಗಿದ್ದು ಕೈಗೆ ಬಳೆ ತೊಡಿಸಿಕೊಳ್ಳವ ಫೋಟೋಗಳನ್ನು ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಫೋಟೋ ನೋಡಿದರೆ ಮದುವೆ ನಡೆದು ತಿಂಗಳೇ ಉರುಳಿದೆ, ಮತ್ತ್ಯಾಕೆ ಸೋನಲ್ ಬಳೆ ಶಾಸ್ತ್ರ ಮಾಡಿಕೊಳ್ಳುತ್ತಿದ್ದಾರೆ ಎಂದು ಆಶ್ಚರ್ಯವಾಗೋದೇನು ನಿಜ. ಆದರೆ ಇದು ಹಳೆಯ ಫೋಟೋಗಳಾಗಿದ್ದು ಈಗ ಒಂದೊಂದಾಗೇ ನೆನಪು ತೋಡಿಕೊಳ್ಳುತ್ತಿದ್ದಾರೆ. ನಟಿ ಸೋನಲ್ ಮೊಂಥೆರೋ ಹಾಗೂ ನಿರ್ದೇಶಕ ತರುಣ್ ಸುಧೀರ್ ಕಳೆದ ಆಗಸ್ಟ್ ತಿಂಗಳಲ್ಲಿ ಅದ್ದೂರಿಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ರು. ಆ ವೇಳೆ ಮದುವೆ ಹೆಣ್ಣಿಗೆ ನಡೆದ ಬಳೆ ತೊಡಿಸುವ ಸಂಪ್ರದಾಯದ ಮುದ್ದಾದ ಫೋಟೋಗಳನ್ನ ಈಗ ಸೋನಲ್ ಇನ್ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಸೋನಲ್ ಮತ್ತು ತರುಣ್ ಮದುವೆ ಸಮಾರಂಭ ಸಂಪ್ರದಾಯಗಳು ಆಗಸ್ಟ್‌ನಲ್ಲಿ ಭರ್ತಿ ಒಂದು ವಾರ ನಡೆದಿತ್ತು. ಬೆಂಗಳೂರಿನ ಹೊರವಲಯದ ಛತ್ರದಲ್ಲಿ ಅದ್ದೂರಿಯಾಗಿ ಮದುವೆಯಾದ್ದರು ಸೋನಲ್ ಮತ್ತು ತರುಣ್. ಬಳಿಕ ಮಂಗಳೂರಿನಲ್ಲಿ ಕ್ರಿಶ್ಚಿಯನ್ ಸಂಪ್ರದಾಯದಂತೆ ಚರ್ಚ್‌ನಲ್ಲಿ ಮದುವೆಯಾಗಿದ್ದರು. ಅಲ್ಲಿ ಆರತಕ್ಷತೆಯನ್ನೂ ಏರ್ಪಡಿಸಿದ್ದರು. ಇದೀಗ ಮದುವೆಯ ಸಂಭ್ರಮಗಳ ಒಂದೊಂದೇ ನೆನಪುಗಳನ್ನ ಅಭಿಮಾನಿಗಳ ಜೊತೆ ಇನ್ಸ್ಟಾಗ್ರಾಂನಲ್ಲಿ ಹಂಚಿಕೊಳ್ಳುತ್ತಿದ್ದಾರೆ ಸೋನಲ್. ಕೆಲವೇ ದಿನದ ಹಿಂದೆ ಮೆಹಂದಿ ಕಾರ್ಯಕ್ರಮದ ಫೋಟೋ ಪೋಸ್ಟ್ ಮಾಡಿದ್ದ ಸೋನಲ್ ಈಗ ಬಳೆ ಶಾಸ್ತ್ರದ ಫೋಟೋ ಹಂಚಿಕೊಂಡಿದ್ದಾರೆ.

## ವಿದ್ಯುತ್ಚಾಲಿತ ವಾಹನ ಬಳಕೆ ತ್ವರಿತಗೊಳಿಸಲು ಚಾರ್ಜಿಂಗ್ ಕೇಂದ್ರಗಳ ಹೊಸ ಜಾಲ ಪ್ರಾರಂಭಿಸಿದ ಕ್ಲೈಮೇಟ್ ಪ್ಲೆಡ್ಜ್




**ಮೈಸೂರು:** ಉದ್ಯಮ ಪಾಲುದಾರರ ಮತ್ತು ವಾಗ್ದಾನಕ್ಕೆ ಅಂಕಿತ ಹಾಕಿರುವ ಕಂಪನಿಗಳ ನೆರವಿನಿಂದ ಬೆಂಗಳೂರಿನಲ್ಲಿ ಜಂಟಿಯಾಗಿ ನಿರ್ವಹಿಸುವ ವಿದ್ಯುತ್ಚಾಲಿತ ವಾಹನಗಳ (ಇವಿ) ಚಾರ್ಜಿಂಗ್ ಕೇಂದ್ರಗಳ ಹೊಸ ಜಾಲ ನಿರ್ಮಿಸಲು ಕ್ಲೈಮೇಟ್ಪ್ಲೆಡ್ಜ್ ಹೊಸ ಕ್ರಿಯಾ ಯೋಜನೆಯಾಗಿರುವ ?ಜಂಟಿಯಾಗಿ ನಿರ್ವಹಿಸುವ ಏಕೀಕೃತ ಕೊನೆಯ ಮೈಲಿ ವಿದ್ಯುದೀಕರಣ (ಜೆಒಯುಎಲ್ಇ) ಉಪಕ್ರಮ ಪ್ರಕಟಿಸಿದೆ.

ಅಮೆಜಾನ್ ಮತ್ತು ಗ್ಲೋಬಲ್ ಆಪ್ಟಿಮಿಸಂನಿಂದ 2019 ರಲ್ಲಿ ಜಂಟಿಯಾಗಿ ಸ್ಥಾಪಿಸಿರುವ –ಕ್ಲೈಮೇಟ್ ಪ್ಲೆಡ್ಜ್, ಪ್ಯಾರಿಸ್ ಒಪ್ಪಂದಕ್ಕಿಂತ 10 ವರ್ಷಗಳ ಮೊದಲೇ 2040ರ ವೇಳೆಗೆ ನಿವ್ವಳ–ಶೂನ್ಯ ಇಂಗಾಲ ಹೊರಸೂಸುವಿಕೆ ಸಾಧಿಸುವ ಬದ್ಧತೆ ಹೊಂದಿದೆ.

ವಾಗ್ದಾನಕ್ಕೆ ಅಂಕಿತ ಹಾಕಿರುವ ಉದ್ಯಮಗಳು ಮತ್ತು ಪಾಲುದಾರರು 2030ರ ವೇಳೆಗೆ ಈ ಯೋಜನೆಯಡಿ ಒಟ್ಟಾರೆ2.65 ದಶಲಕ್ಷ ಡಾಲರ್ಗಿಂತಲೂ ಹೆಚ್ಚಿನ ಹಣವನ್ನು ಹೂಡಿಕೆ ಮಾಡಲಿದ್ದಾರೆ. ಅಮೆಜಾನ್, ಮಹೀಂದ್ರಾ ಲಾಜಿಸ್ಟಿಕ್ಸ್, ಉಬರ್, ಎಚ್ಪಿಎಲ್ಟೆಕ್ಮತ್ತು ಮೆಜೆಂಟಾ ಮೊಬಿಲಿಟಿಯು ವಿದ್ಯುತ್ಚಾಲಿತ ವಾಹನಗಳ (ಇವಿ) ಚಾರ್ಜಿಂಗ್ ಕೇಂದ್ರಗಳ ಬಳಕೆ ಹೆಚ್ಚಿಸಲು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲಿವೆ. ಈ ಮೂಲಸೌಲಭ್ಯವನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳಲು ಈ ಕಂಪನಿಗಳು ತಮ್ಮ ವಿದ್ಯುತ್ಚಾಲಿತ ವಾಹನಗಳ ಚಾರ್ಜಿಂಗ್ ಅಗತ್ಯಗಳನ್ನು ಈ ಚಾರ್ಜಿಂಗ್ಕೇಂದ್ರಗಳ ಮೂಲಕವೇ ಈಡೇರಿಸಿಕೊಳ್ಳಲು ಉದ್ದೇಶಿಸಿವೆ. ?ಇವಿ? ಉದ್ಯಮದ ಪಾಲುದಾರ ಕಂಪನಿಯಾಗಿರುವ ಭಾರತ ಮೂಲದ ಇವಿ ಚಾರ್ಜಿಂಗ್ ವೇದಿಕೆಯಾಗಿರುವ ಕಜಮ್, ಜಂಟಿಯಾಗಿ ನಿರ್ವಹಿಸುವ ಚಾರ್ಜಿಂಗ್ ಕೇಂದ್ರಗಳ ಜಾಲವನ್ನು ನಿರ್ಮಿಸಲಿದೆ. ನವೀಕರಿಸಬಹುದಾದ ಇಂಧನ ಪೂರೈಕೆ ಕಂಪನಿಯಾಗಿರುವ ಗ್ರಿಂಕೊ ಮತ್ತು ಕಾರ್ಯತಂತ್ರದ ಸಲಹಾ ಪಾಲುದಾರ ಕಂಪನಿ ಡೆಲಾಯ್ಟ್ ಸಹ ಈ ಯೋಜನೆಗೆ ಅಗತ್ಯ ಬೆಂಬಲ ನೀಡಲಿವೆ.

2030ರ ವೇಳೆಗೆ ಬೆಂಗಳೂರಿನಲ್ಲಿ ತ್ರಿಚಕ್ರ ವಾಹನ, ಕ್ಯಾಬ್ ಸೇವೆ ಮತ್ತು ಕಾರ್ಪೊರೇಟ್ಗಳ ಬಳಕೆಗೆ ಶೇ 100ರಷ್ಟು ವಿದ್ಯುತ್ಚಾಲಿತ (ಇವಿ) ವಾಹನಗಳನ್ನು ಬಳಸುವ ಗುರಿಯೂ ಸೇರಿದಂತೆ ವಿದ್ಯುತ್ಚಾಲಿತ ವಾಹನಗಳಿಗೆ ಭಾರತದಲ್ಲಿ ಬದಲಾವಣೆ ಬೆಂಬಲಿಸುವ ಈ ಜಂಟಿ ಕ್ರಿಯಾ ಉಪಕ್ರಮ ಪ್ರಾರಂಭಿಸಲು ಪ್ರತಿಜ್ಞೆಗೆ ಅಂಕಿತ ಹಾಕಿರುವವರ ಜೊತೆಯಲ್ಲಿ ಕೆಲಸ ಮಾಡಲು ನಮಗೆ ಹೆಮ್ಮೆಯಾಗುತ್ತದೆ ಎಂದು ದಿ ಕ್ಲೈಮೇಟ್ ಪ್ಲೆಡ್ಜ್ನ ಜಾಗತಿಕ ಮುಖ್ಯಸ್ಥ ಸ್ಯಾಲಿ ಫೌಟ್ಸ್ಅವರು ಹೇಳಿದ್ದಾರೆ.

ವಿದ್ಯುತ್ ಚಾಲಿತ ವಾಹನಗಳ ಬಳಕೆ ಹೆಚ್ಚಿಸಲು ಭಾರತದಲ್ಲಿನ ಚಾರ್ಜಿಂಗ್ ಮೂಲಸೌಕರ್ಯದಲ್ಲಿ ಸದ್ಯಕ್ಕೆ ಎದುರಾಗಿರುವ ಕೆಲವು ಸವಾಲುಗಳಿಗೆ ಈ ಯೋಜನೆಯು ಪರಿಹಾರ ಒದಗಿಸಲಿದೆ. ಇದರ ಜೊತೆಗೆ ಕಾರ್ಪೊರೇಟ್ ಹವಾಮಾನ ಸಹಯೋಗಕ್ಕಾಗಿ ಹೊಸ ಮಾನದಂಡ ರೂಪಿಸಲಿದೆ? ಎಂದೂ ಅವರು ಹೇಳಿದ್ದಾರೆ.

ಈ ಯೋಜನೆಯ ಭಾಗವಾಗಿರುವ, ಬೆಂಗಳೂರಿನ ದೊಡ್ಡಕಲ್ಲಸಂದ್ರದಲ್ಲಿ ಸ್ಥಾಪಿಸಲಾಗಿರುವ ಮೊದಲ ಇವಿ ಚಾರ್ಜಿಂಗ್ ಕೇಂದ್ರವು ಇಂದಿನಿಂದ ಸಂಪೂರ್ಣವಾಗಿ ಕಾರ್ಯನಿರ್ವಹಿಸಲಿದೆ. ಈ ವರ್ಷದ ಅಂತ್ಯದ ವೇಳೆಗೆ ಬೆಂಗಳೂರಿನಲ್ಲಿ ಇನ್ನೂ ಐದು ಇಂತಹ ಚಾರ್ಜಿಂಗ್ ಕೇಂದ್ರಗಳನ್ನು ನಿರ್ಮಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ನಗರದ ಇವಿ ಮೂಲಸೌಲಭ್ಯದ ಹೆಚ್ಚುತ್ತಿರುವ ಬೇಡಿಕೆ ಪೂರೈಸಲು ಈ ಯೋಜನೆಯನ್ನು ಮತ್ತಷ್ಟು ವಿಸ್ತರಿಸಲು ಉದ್ದೇಶಿಸಲಾಗಿದೆ. ನಿರೀಕ್ಷಿತ ಬೇಡಿಕೆ ಆಧರಿಸಿ ಹೇಳುವುದಾದರೆ, ಈ ಯೋಜನೆಯು 2030 ರ ವೇಳೆಗೆ ಬೆಂಗಳೂರಿನಲ್ಲಿ ಸುಮಾರು 5,500 ಇವಿ– ಗಳ ಅಗತ್ಯವನ್ನು ಪೂರೈಸಲಿದೆ ಎಂದು ಅಂದಾಜಿಸಲಾಗಿದೆ. ಯೋಜನೆಯ ಪೂರ್ಣ ಸಾಮರ್ಥ್ಯವು ಸುಮಾರು 9,500 ಇವಿ ಗಳ ಅಗತ್ಯ ಪೂರೈಸಲಿದೆ. ಗರಿಷ್ಠ ಪ್ರಮಾಣದಲ್ಲಿ ಚಾರ್ಜಿಂಗ್ಕೇಂದ್ರಗಳನ್ನು ಬಳಸಿಕೊಳ್ಳಲು ಇತರ ಕಂಪನಿಗಳ ವಾಹನಗಳನ್ನೂ ಇಲ್ಲಿ ಚಾರ್ಜ್ ಮಾಡಬಹುದಾಗಿದೆ.

ಚಾರ್ಜಿಂಗ್ ಕೇಂದ್ರಗಳು ಬಳಸುವ ಎಲ್ಲಾ ವಿದ್ಯುತ್ಶಕ್ತಿಯು (22,700 ಮೆಗಾವಾಟ್–ಗಂಟೆಗಳ ಇಂಧನ ತಲುಪಲು ಯೋಜಿಸಲಾಗಿದೆ) ಶೇ 100ರಷ್ಟು ನವೀಕರಿಸಬಹುದಾದ ಇಂಧನದ ಜೊತೆ ಇದು ಹೊಂದಿಕೆಯಾಗುತ್ತದೆ. ಇದು 2030 ರ ವೇಳೆಗೆ ಅಂದಾಜು 6.2 ಮೆಗಾವಾಟ್ನಷ್ಟು ನವೀಕರಿಸಬಹುದಾದ ಇಂಧನ ಸಾಮರ್ಥ್ಯದ ಮೊತ್ತವಾಗಿದೆ. ಅದೇ ವರ್ಷದ ವೇಳೆಗೆ, ಈ ಯೋಜನೆಯು 11.2 ದಶಲಕ್ಷ ಲೀಟರ್ಗಳಷ್ಟು ಇಂಧನ ಉಳಿಸಲು ಮತ್ತು ಅಂದಾಜು 25,700 ಟನ್ಗಳಷ್ಟು ಇಂಗಾಲದ ಡೈಆಕ್ಸೈಡ್ ಕಡಿಮೆ ಮಾಡಲಿದೆ ಎಂದು ನಿರೀಕ್ಷಿಸಲಾಗಿದೆ. ವಾಹನದ ಹೊಗೆ ಹೊರಸೂಸುವಿಕೆ ಕಡಿಮೆ ಮಾಡುವುದರ ಹೊರತಾಗಿ, ಈ ಯೋಜನೆಯು 2024 ರಿಂದ 2030 ರ ಮಧ್ಯೆ ಬೆಂಗಳೂರಿನಲ್ಲಿ ಅಂದಾಜು 185 ಪೂರ್ಣ ಪ್ರಮಾಣದ ಉದ್ಯೋಗಗಳನ್ನು ಸೃಷ್ಟಿಸಲಿದೆ.

## ಮುಖದ ಮೇಲಿನ ಕೂದಲು ತೆಗೆಯಲು ಟಿಪ್ಸ್

### ಬ್ಯೂಟಿ ಟಿಪ್ಸ್



**ಸಕ್ಕರೆ ಮತ್ತು ನಿಂಬೆ ಜ್ಯೂಸ್:** ಎರಡು ಟೇಬಲ್ ಸ್ಪೂನ್ ಸಕ್ಕರೆಗೆ 10 ಟೇಬಲ್ ಸ್ಪೂನ್ ನಿಂಬೆ ರಸವನ್ನು ಬೌಲ್ಗೆ ಹಾಕಿ. ಇದನ್ನು ಚೆನ್ನಾಗಿ ಕುದಿಸಿ, ಅದು ಗಟ್ಟಿಯಾಗುವಂತೆ ಮಾಡಿ. ತಣ್ಣಗೆ ಆದ ಬಳಿಕ ಇದನ್ನು ಮುಖದಲ್ಲಿರುವ ಕೂದಲಿನ ಪ್ರದೇಶಕ್ಕೆ ಹಚ್ಚಿ. 20 ನಿಮಿಷದ ನಂತರ ವೃತ್ತಾಕಾರವಾಗಿ ಉಜ್ಜಿ, ತೆಗೆಯಿರಿ.

**ಕಾರ್ನ್ಸ್ಟಾರ್ಚ್:** ಇದಕ್ಕೆ ಕೂಡ ಎರಡು ಟೇಬಲ್ಸ್ಪೂನ್ ಸಕ್ಕರೆ ಮತ್ತು ನಿಂಬೆ ರಸವನ್ನು ಬೆರೆಸಿ ಅದಕ್ಕೆ ಜೇನುತುಪ್ಪ ಬೆರೆಸಿ ಮಿಕ್ಸ್ ಮಾಡಿ. ಅದನ್ನು ಐದು ನಿಮಿಷ ಬಿಸಿ, ಮಾಡಿ ದಪ್ಪ ಹದಕ್ಕೆ ರೂಪಿಸಿ. ಬಳಿಕ ತಣ್ಣಗಾದ ಕಾರ್ನ್ಸ್ಟಾರ್ಚ್ ಅನ್ನು ಕೂದಲಿರುವ ಕಡೆ ಹಚ್ಚಿ, 30 ನಿಮಿಷಗಳ ಬಳಿಕ ವೃತ್ತಾಕಾರವಾಗಿ ಉಜ್ಜಿ, ಹತ್ತಿ ಬಟ್ಟೆಯಿಂದ ತೆಗೆಯಿರಿ.

**ಬಾಳೆಹಣ್ಣಿನ ಓಟ್ಮೀಲ್:** ಕಳಿತ ಬಾಳೆ ಹಣ್ಣಿಗೆ ಎರಡು ಟೇಬಲ್ಸ್ಪೂನ್ ಓಟ್ಮೀಲ್ ಹಾಕಿ ಚೆನ್ನಾಗಿ ಪೇಸ್ಟ್ ರೀತಿ ಮಾಡಿ. ಬಳಿಕ ಕೂದಲಿರುವ ಸ್ಥಳದಲ್ಲಿ ಹಚ್ಚಿ, 15 ನಿಮಿಷ ಮಸಾಜ್ ಮಾಡಿ. ನಂತರ ತಣ್ಣೀರಿನಿಂದ ತೊಳೆಯಿರಿ.

**ಅರಿಶಿಣ ಪೇಸ್ಟ್:** ಅರಿಶಿಣವನ್ನು ಒಂದು ಬಟ್ಟಲಿಗೆ ಹಾಕಿ, ಅದಕ್ಕೆ ಸ್ವಲ್ಪ ನೀರು ಅಥವಾ ಹಾಲನ್ನು ಹಾಕಿ ಪೇಸ್ಟ್ ರೀತಿ ಮಾಡಿ. ಬಳಿಕ ಇದನ್ನು ಕೂದಲಿರುವ ಸ್ಥಳದಲ್ಲಿ ಚೆನ್ನಾಗಿ ಹಚ್ಚಿ, ಉಜ್ಜಿ. 20 ನಿಮಿಷದ ಬಳಿಕ ಬೆಚ್ಚಗಿನ ನೀರಿನ ಸಹಾಯದಿಂದ ಮುಖ ತೊಳೆಯಿರಿ. ಇದರಿಂದ ಉತ್ತಮ ಫಲಿತಾಂಶ ಸಿಗಲಿದೆ.

**ಕಡಲೆಕಾಯಿ ಬೀಜ:** ಒಂದು ಬಟ್ಟಲಿಗೆ ಒಂದು ಟೇಬಲ್ ಸ್ಪೂನ್ ಜೇನುತುಪ್ಪ, ನಿಂಬೆ ರಸ ಹಾಕಿ ಅದಕ್ಕೆ 5 ಚಮಚ ಆಲೂಗಡ್ಡೆ ರಸವನ್ನು ಸೇರಿಸಿ, ಬಳಿಕ ರಾತ್ರಿ ನೆನಸಿದ ಕಡಲೆಕಾಯಿ ಬೀಜವನ್ನು ಸೇರಿಸಿ, ಪೇಸ್ಟ್ ಮಾಡಿ. ಎಲ್ಲವನ್ನು ಚೆನ್ನಾಗಿ ಕಲಿಸಿ, ಮುಖಕ್ಕೆ ಮಸಾಜ್ ಮಾಡಿ. 30 ನಿಮಿಷದ ಬಳಿಕ ತಣ್ಣೀರಿನಿಂದ ತೊಳೆಯಿರಿ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಆಧ್ಯಾತ್ಮಿಕ ಚಿಂತನೆ, ಧರ್ಮಕಾರ್ಯಾಸಕ್ತಿ, ದೂರ ಪ್ರಯಾಣ, ಉನ್ನತ ವಿದ್ಯಾ ಯೋಗ.

**ವೃಷಭ:** ಅನಿರೀಕ್ಷಿತ ಲಾಭ, ಉದ್ಯೋಗ ಪ್ರಾಪ್ತಿ, ಅಡೆತಡೆಗಳಿಂದ ಕಾರ್ಯ ಜಯ, ಮಿತ್ರರಿಂದ ಸಹಕಾರ.

**ಮಿಥುನ:** ಕರ್ಮಗಳ ಫಲಗಳ ಕಾಟ, ಉದ್ಯೋಗ ನಷ್ಟ ಮತ್ತು ಚಿಂತೆ, ಪ್ರೀತಿ–ಪ್ರೇಮದಲ್ಲಿ ತೊಂದರೆ, ಮಕ್ಕಳ ನಡವಳಿಕೆಯಿಂದ ಬೇಸರ.

**ಕಟಕ:** ಸ್ಥಿರಾಸ್ತಿ ತೊಂದರೆಗಳು, ತಂದೆಯಿಂದ ಸಹಾಯ, ಕಾರ್ಯಜಯ, ಸಾಲ ಮಾಡುವಿರಿ.

**ಸಿಂಹ:** ಸೋಲು ನಷ್ಟ ನಿರಾಸೆಗಳು, ನೆರೆಹೊರೆಯವರಿಂದ ತೊಂದರೆ, ಮಕ್ಕಳಿಂದ ಎಡವಟ್ಟುಗಳು, ಸ್ತ್ರೀಯರಿಂದ ಅಪವಾದ.

**ಕನ್ಯಾ:** ಪಾಲುದಾರಿಕೆಯಲ್ಲಿ ತೊಂದರೆಗಳು, ಆರ್ಥಿಕ ಅಲ್ಪ ಚೇತರಿಕೆ, ಸಾಲ ದೊರೆಯುವುದು, ಮಾತಿನಿಂದ ತೊಂದರೆ.

**ತುಲಾ:** ಸ್ವಯಂಕೃತ ಅಪರಾಧಗಳು, ಆರೋಗ್ಯ ಚೇತರಿಕೆ, ಆರ್ಥಿಕ ಹೂಡಿಕೆಯ ತಯಾರಿ, ಶತ್ರುಗಳು ಮಿತ್ರರಾಗುವರು.

**ವೃಶ್ಚಿಕ:** ದುಃಸ್ವಪ್ನಗಳು, ದೈವ ಚಿಂತನೆ, ಆಧ್ಯಾತ್ಮಿಕ ಖರ್ಚುಗಳು, ದಾಂಪತ್ಯ ಸೌಖ್ಯದಿಂದ ಅಂತರ.

**ಧನಸ್ಸು:** ವ್ಯಾಪಾರ ವ್ಯವಹಾರದಲ್ಲಿ ಎಳೆದಾಟ, ಗುಪ್ತ ಧನಾಗಮನ, ಸ್ತ್ರೀಯರಿಂದ ಲಾಭ, ಆರೋಗ್ಯ ಚೇತರಿಕೆ.

**ಮಕರ:** ಉದ್ಯೋಗದಲ್ಲಿ ನಿರಾಸಕ್ತಿ, ದೂರ ಪ್ರಯಾಣ, ನೆರೆಹೊರೆಯವರಿಂದ ಅಂತರ, ಗೌರವಕ್ಕೆ ಧಕ್ಕೆ.

**ಕುಂಭ:** ಆರ್ಥಿಕ ಚೇತರಿಕೆ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಉನ್ನತ ವಿದ್ಯಾಭ್ಯಾಸದ ಚಿಂತೆ, ಶುಭಕಾರ್ಯದಲ್ಲಿ ವಿಘ್ನ.

**ಮೀನ:** ಆಕಸ್ಮಿಕ ಅವಘಡಗಳು, ಸೋಲು ನಷ್ಟ ನಿರಾಸೆಗಳು, ವ್ಯಾಪಾರ ವ್ಯವಹಾರದಲ್ಲಿ ಸಮಸ್ಯೆಗಳು, ಗುಪ್ತ ಅಪವಾದಗಳು.

## ಫ್ರೈಡ್ ರೈಸ್ ದಿನ




ನಾವು ಪ್ರತಿ ವರ್ಷ ಸೆಪ್ಟೆಂಬರ್ 20 ರಂದು ರಾಷ್ಟ್ರೀಯ ಫ್ರೈಡ್ ರೈಸ್ ದಿನವನ್ನು ಆಚರಿಸುತ್ತೇವೆ. ಈ ಆಚರಣೆಯು ಪ್ರತಿಯೊಬ್ಬರೂ ತಮ್ಮ ಆದ್ಯತೆಯ ಫ್ರೈಡ್ ರೈಸ್ನಲ್ಲಿ ಪಾಲ್ಗೊಳ್ಳಲು ಪ್ರೋತ್ಸಾಹಿಸುತ್ತದೆ. ಉದ್ದನೆಯ ಅಕ್ಕಿ, ಈರುಳ್ಳಿ, ಕ್ಯಾರೆಟ್, ಬಟಾಣಿ ಮತ್ತು ಮೊಟ್ಟೆಗಳೊಂದಿಗೆ ತಯಾರಿಸಲಾದ ಈ ಟೇಸ್ಟಿ ಊಟವು ಸರ್ವೋತ್ಕೃಷ್ಟ ಅಪರಾಧಿ ಸಂತೋಷವಾಗಿದೆ. ನಿಮ್ಮ ಆದ್ಯತೆಯ ಆವೃತ್ತಿಯು ಗೋಮಾಂಸ, ಹಂದಿಮಾಂಸ ಅಥವಾ ಚಿಕನ್ ಅನ್ನು ಒಳಗೊಂಡಿರಲಿ, ಅದನ್ನು ಆನಂದಿಸಲು ಇಂದು ಸೂಕ್ತ ಸಮಯ.

ಫ್ರೈಡ್ ರೈಸ್ ಮೊದಲು ಚೀನಾದ ಸೂಯಿ ರಾಜವಂಶದಲ್ಲಿ ಕಾಣಿಸಿಕೊಂಡಿತು ಮತ್ತು ಇದರ ಪರಿಣಾಮವಾಗಿ, ಈ ಸವಿಯಾದ ಎಲ್ಲಾ ಆವೃತ್ತಿಗಳು ಚೀನೀ ಫ್ರೈಡ್ ರೈಸ್ನಲ್ಲಿ ತಮ್ಮ ಮೂಲವನ್ನು ಹೊಂದಿವೆ. ಫ್ರೈಡ್ ರೈಸ್ ಮಲೇಷ್ಯಾ ಮತ್ತು ಇಂಡೋನೇಷ್ಯಾದ ರಾಷ್ಟ್ರೀಯ ಖಾದ್ಯವಾಗಿದೆ ಮತ್ತು ದಕ್ಷಿಣ, ಆಗ್ನೇಯ ಮತ್ತು ಪೂರ್ವ–ಏಷ್ಯನ್ ಪಾಕಪದ್ಧತಿಗಳಲ್ಲಿ ಪ್ರಮುಖವಾಗಿ ಕಂಡುಬರುತ್ತದೆ. ಇದು ಹಲವಾರು ಮಾರ್ಪಾಡುಗಳನ್ನು ಹೊಂದಿರುವ ವಿಶಿಷ್ಟವಾದ ಮನೆಯಲ್ಲಿ ತಯಾರಿಸಿದ ಭಕ್ಷ್ಯವಾಗಿದೆ ಏಕೆಂದರೆ ಇದನ್ನು ಇತರ ಭಕ್ಷ್ಯಗಳಿಂದ ಪದಾರ್ಥಗಳನ್ನು ಬಳಸಿ ತಯಾರಿಸಬಹುದು.

ಮೊದಲ ಜಪಾನೀಸ್ ಟೆಪ್ಪನ್ಯಾಕಿ ರೆಸ್ಟೋರೆಂಟ್, ಬೆನಿಹಾನಾ, 2018 ರಲ್ಲಿ ಫ್ರೈಡ್ ರೈಸ್ ಡೇ ಅನ್ನು ಹೆಚ್ಚು ಇಷ್ಟಪಡುವ ಊಟವನ್ನು ಆಚರಿಸಲು ಪ್ರಾರಂಭಿಸಿತು. ಅನೇಕರಿಗೆ, ಫ್ರೈಡ್ ರೈಸ್ ಕೇವಲ ತೊಡಗಿಸಿಕೊಳ್ಳಲು ಒಂದು ಭಕ್ಷ್ಯವಲ್ಲ, ಇದು ನಿಮ್ಮ ರುಚಿ ಮೊಗ್ಗುಗಳನ್ನು ಅಂಚಿನಲ್ಲಿಡಲು ಸುವಾಸನೆಯೊಂದಿಗೆ ಸಿಡಿಯುವ ಪೂರೈಸುವ ಊಟವಾಗಿದೆ. ಬೆನಿಹಾನಾ ತನ್ನ ಪ್ರಸಿದ್ಧ ಅನ್ನವನ್ನು 50 ವರ್ಷಗಳಿಗೂ ಹೆಚ್ಚು ಕಾಲ ದೇಶಾದ್ಯಂತದ ಆಹಾರ ಪ್ರಿಯರಿಗೆ ಸೇವೆ ಸಲ್ಲಿಸಿದೆ. ಈ ರುಚಿಕರವಾದ ಭೋಜನವು ಪ್ರಪಂಚದ ಯಾವುದೇ ಭಾಗದಲ್ಲಿ ಪ್ರೀತಿಯ ಖಾದ್ಯವಾಗಿದೆ.

ಹೊಕ್ಕಿನ್ ಮತ್ತು ಯಾಂಗ್ಝೌ ಫ್ರೈಡ್ ರೈಸ್ ಗ್ರೇಟರ್ ಚೀನಾದಲ್ಲಿ ಈ ಊಟದ ಜನಪ್ರಿಯ ವಿಧಗಳಾಗಿವೆ. ಜಪಾನಿಯರು ಚೀನೀ ಫ್ರೈಡ್ ರೈಸ್ನ ವ್ಯುತ್ಪನ್ನವನ್ನು 'ಚಾಹಾನ್' ಎಂದು ಕರೆಯುತ್ತಾರೆ. ಆಗ್ನೇಯ ಏಷ್ಯಾವು ಇದೇ ರೀತಿಯ ಮಲೇಷಿಯನ್, ಸಿಂಗಾಪುರ್ ಮತ್ತು ಇಂಡೋನೇಷಿಯನ್ ಫ್ರೈಡ್ ರೈಸ್ ವ್ಯತ್ಯಾಸಗಳನ್ನು ಹೊಂದಿದೆ ('ಥಾಯ್ ಖಾವೊ ಫಾಟ್' ಮತ್ತು 'ನಾಸಿ ಗೊರೆಂಗ್'), ಇದು ಜನಪ್ರಿಯ ಭಕ್ಷ್ಯಗಳಾಗಿವೆ.ಪಾಶ್ಚಿಮಾತ್ಯ ಪ್ರಪಂಚದ ರೆಸ್ಟೋರೆಂಟ್ಗಳು ತಮ್ಮ ಸ್ವಂತ ಫ್ರೈಡ್ ರೈಸ್ ಅನ್ನು ಕಂಡುಹಿಡಿದವು. ಸಸ್ಯಾಹಾರಿ ಮೆನುಗಳಲ್ಲಿ ಮೊಟ್ಟೆ–ಹುರಿದ ಅನ್ನದಂತಹ ವಿಶೇಷತೆಗಳಿವೆ. ಖಾದ್ಯದ ಸ್ಥಳೀಯ ಸಂಪ್ರದಾಯವಿಲ್ಲದೆ ಪಾಕಪದ್ಧತಿಗಳನ್ನು ನೀಡುವ ಅನೇಕ ಅಮೇರಿಕನ್ ರೆಸ್ಟೋರೆಂಟ್ಗಳು ತಮ್ಮ ಮೆನುಗಳಲ್ಲಿ ಫ್ರೈಡ್ ರೈಸ್ ಅನ್ನು ಒಳಗೊಂಡಿವೆ. ಪೋರ್ಟೊ ರಿಕೊದ 'ಅರೋಜ್ ಮ್ಯಾಂಪೋಸ್ಟಿಯೊ,' ಪೆರುವಿನ 'ಅರೋಜ್ ಚೌಫಾ,' ಕ್ಯೂಬಾದ 'ಅರೋಜ್ ಫ್ರಿಟೊ,' ಮತ್ತು ಈಕ್ವೆಡಾರ್ನ 'ಚೌಲಾಫಾನ್' ಸೇರಿದಂತೆ ಹಲವಾರು ಲ್ಯಾಟಿನ್–ಅಮೆರಿಕನ್ ಫ್ರೈಡ್ ರೈಸ್‌ಗಳು ಅಸ್ತಿತ್ವದಲ್ಲಿವೆ.

# ಟ್ರೈನಿ ವೈದ್ಯೆ ಅತ್ಯಾಚಾರ, ಕೊಲೆ ಪ್ರಕರಣ 41 ದಿನಗಳ ಬಳಿಕ ವೈದ್ಯರ ಮುಷ್ಕರ ವಾಪಸ್



**ನವದೆಹಲಿ:** ಕೋಲ್ಕತ್ತಾ ಆಸ್ಪತ್ರೆಯಲ್ಲಿ ಸಹೋದ್ಯೋಗಿಯೊಬ್ಬಳ ಅತ್ಯಾಚಾರ, ಕೊಲೆ ಖಂಡಿಸಿ ಬೀದಿಗಿಳಿದಿದ್ದ ಬಂಗಾಳದ ವೈದ್ಯರು 41 ದಿನಗಳ ಬಳಿಕ ಮುಷ್ಕರವನ್ನು ವಾಪಸ್ ತೆಗೆದುಕೊಂಡಿದ್ದಾರೆ. ಶನಿವಾರದಿಂದ ಕರ್ತವ್ಯಕ್ಕೆ ಹಾಜರಾಗುವುದಾಗಿ ತಿಳಿಸಿದ್ದಾರೆ.

ಇಂದು ಮಧ್ಯಾಹ್ನ 3 ಗಂಟೆಗೆ ಸಿಬಿಐ ಕಚೇರಿವರೆಗೆ ರ್‍ಯಾಲಿ ಮಾಡಲಿದ್ದಾರೆ. ತನಿಖೆಯನ್ನು ತ್ವರಿತಗೊಳಿಸಲು ಆಗ್ರಹಿಸಿ ರ್‍ಯಾಲಿ ಹಮ್ಮಿಕೊಂಡಿದ್ದಾರೆ. ನಾಳೆಯಿಂದ ಕರ್ತವ್ಯಕ್ಕೆ ಮರಳಲು ವೈದ್ಯರು ನಿರ್ಧಾರಿಸಿದ್ದಾರೆ. ಪ್ರಕರಣ ಸಂಬಂಧ ಮೂವರು ಹಿರಿಯ ಅಧಿಕಾರಿಗಳನ್ನು ಈಗಾಗಲೇ ಸರ್ಕಾರ ವಜಾಗೊಳಿಸಿದೆ. ಇತರೆ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಒಪ್ಪಿದ ಬಳಿಕ ಮುಷ್ಕರ ನಿಲ್ಲಿಸಲು ಪ್ರತಿಭಟನಾಕಾರರು ನಿರ್ಧರಿಸಿದ್ದಾರೆ. ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನಿನ್ನೆಯಿಂದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪ್ರವಾಸ ಕೈಗೊಂಡಿದ್ದಾರೆ. ಬುಧವಾರ ನಡೆದ ವೈದ್ಯರೊಂದಿಗಿನ ಕೊನೆಯ ಸಭೆಗೆ ಹಾಜರಾದ ಮುಖ್ಯ ಕಾರ್ಯದರ್ಶಿಗಳೇ ಭದ್ರತೆಗೆ ಸಂಬಂಧಿಸಿದಂತೆ ಅವರ ಬೇಡಿಕೆಗಳು ಮತ್ತು ಸಲಹೆಗಳನ್ನು ಸ್ವೀಕರಿಸಿದ್ದರು. ಇಂದು ಮುಂಜಾನೆ ಅವರು ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದಿದ್ದು, ಕರ್ತವ್ಯದ ಕೊಠಡಿಗಳು, ವಾಶ್‌ರೂಮ್‌ಗಳು, ಸಿಸಿಟಿವಿಗಳು, ಪೊಲೀಸರು ಮತ್ತು ಭದ್ರತಾ ಸಿಬ್ಬಂದಿಯ ನಿಯೋಜನೆ, ರಾತ್ರಿಯಲ್ಲಿ ಕಣ್ಗಾವಲುಗಾಗಿ ಮಹಿಳಾ, ಮೊಬೈಲ್ ಪೊಲೀಸ್ ತಂಡಗಳು, ಕೇಂದ್ರ ಸಹಾಯವಾಣಿ ಮತ್ತು ಕೇಂದ್ರೀಯ ಸಹಾಯವಾಣಿಗಳ ಸಮರ್ಪಕ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ವಿವರವಾದ ಸೂಚನೆಗಳನ್ನು ನೀಡಿದರು.

# ಚಿಕಿತ್ಸೆ ಪಡೆಯುತ್ತಿದ್ದ 27ರ ಒಡಿಶಾ ಗಾಯಕಿ ರುಕ್ಸಾನಾ ಬಾನೊ ಆಸ್ಪತ್ರೆಯಲ್ಲೇ ಸಾವು!



**ಭುವನೇಶ್ವರ:** ಜನಪ್ರಿಯ ಒಡಿಶಾ ಗಾಯಕಿ ರುಕ್ಸಾನಾ ಬಾನೊ ಅವರು ಭುವನೇಶ್ವರದ ಏಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗಲೇ ಸಾವನ್ನಪ್ಪಿರುವ ಘಟನೆ ಒಡಿಶಾದಲ್ಲಿ ನಡೆದಿದೆ.

27 ವರ್ಷದ ರುಕ್ಸಾನಾ ಸ್ಕ್ರಬ್ ಟೈಫಸ್ (ಬ್ಯಾಕ್ಟೀರಿಯಾದಿಂದ ಉಂಟಾಗುವ ಕಾಯಿಲೆ) ಚಿಕಿತ್ಸೆಗೆ ಒಳಗಾಗಿದ್ದರು ಎಂದು ವೈದ್ಯರು ತಿಳಿಸಿದ್ದಾರೆ. ಆದ್ರೆ ಸಾವಿಗೆ ನಿಖರ ಕಾರಣವನ್ನು ಬಹಿರಂಗಪಡಿಸಿಲ್ಲ. ಆದಾಗ್ಯೂ ಅವರಿಗೆ ನಿರಂತರ ಬೆದರಿಕೆಗಳು ಬರುತ್ತಿದ್ದವು, ಜೊತೆಗೆ ತನ್ನ ಪ್ರತಿಸ್ಪರ್ಧಿ ಗಾಯಕನಿಂದಾಗಿ ವಿಷ ಸೇವಿಸಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ.

**ಆಗಿದ್ದೇನು?:** ಸುಮಾರು 15 ದಿನಗಳ ಹಿಂದೆ ರುಕ್ಸಾನಾ ಅವರು ಬೋಲಂಗಿರ್‌ನಲ್ಲು ಶೂಟಿಂಗ್ ಮಾಡುತ್ತಿದ್ದರು. ಈ ವೇಳೆ ಅವರು ಜ್ಯೂಸ್ ಕುಡಿದರು. ಜ್ಯೂಸ್ ಕುಡಿದ ಕೆಲವೇ ಕ್ಷಣಗಳಲ್ಲಿ ಅಸ್ವಸ್ಥರಾಗಿದ್ದರು, ನಂತರ ಅವರನ್ನು ಭವಾನಿಪಟ್ಟಣದಲ್ಲಿರುವ ಭೀಮಾ ಭೋಯ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದ್ರೆ ಆರೋಗ್ಯ ಸ್ಥಿತಿ ತೀರಾ ಹದಗೆಟ್ಟಿದ್ದರಿಂದ ಬಾರ್‌ಗಢ್‌ನಲ್ಲಿರುವ ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಅಲ್ಲಿಯೂ ಆಕೆ ಆರೋಗ್ಯದಲ್ಲಿ ಸುಧಾರಣೆ ಕಂಡುಬರದ ಕಾರಣ ಭುವನೇಶ್ವರದ ಏಮ್ಸ್‌ಗೆ ಕರೆತರಲಾಯಿತು ಎಂದು ಆಕೆಯ ಸಹೋದರಿ ರೂಬಿ ಬಾನೊ ತಿಳಿಸಿದ್ದಾರೆ.

ಮೃತನ ತಾಯಿ ಕೂಡ ಇದೇ ರೀತಿ ಹೇಳಿಕೆ ನೀಡಿ ವಿಡಿಯೋ ಸಂದೇಶವನ್ನು ನೀಡಿದ್ದರು. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

# ಕಲಂ 370 ಪುನರ್ ಜಾರಿ-ಕಾಂಗ್ರೆಸ್, ಎನ್ ಸಿ ನಿಲುವಿಗೆ ಪಾಕ್ ಬೆಂಬಲ!

**ಇಸ್ಲಾಮಾಬಾದ್:** ಜಮ್ಮು-ಕಾಶ್ಮೀರ ವಿಧಾನಸಭೆ ಚುನಾವಣೆ ನಡೆಯುತ್ತಿರುವ ಸಂದರ್ಭದಲ್ಲಿ ನೆರೆಯ ಪಾಕಿಸ್ತಾನ ಮತ್ತೊಮ್ಮೆ ಭಾರತದ ಆಡಳಿತದ ವಿಚಾರದಲ್ಲಿ ಮೂಗುತೂರಿಸಿದೆ. ಜಮ್ಮು-ಕಾಶ್ಮೀರದ ಕಲಂ 370 ಅನ್ನು ಪುನರ್ ಜಾರಿಗೊಳಿಸುವ ಬಗ್ಗೆ ಪಾಕ್ ಸರ್ಕಾರ ಮತ್ತು ಕಾಂಗ್ರೆಸ್-ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿ ಒಂದೇ ನಿಲುವು ಹೊಂದಿರುವುದಾಗಿ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಅಸೀಫ್ ಸಂದರ್ಶನವೊಂದರಲ್ಲಿ ತಿಳಿಸಿರುವುದಾಗಿ ವರದಿಯಾಗಿದೆ. ಜಮ್ಮು-ಕಾಶ್ಮೀರ ವಿಧಾನಸಭಾ ಚುನಾವಣೆಯಲ್ಲಿ ಮೊದಲ ಹಂತದ 24 ಕ್ಷೇತ್ರಗಳಲ್ಲಿ ಮತದಾನ ನಡೆದ ನಂತರ ಖ್ವಾಜಾ ಅಸೀಫ್ ಈ ಹೇಳಿಕೆ ಹೊರಬಿದ್ದಿರುವುದಾಗಿ ವರದಿ ತಿಳಿಸಿದೆ.ಜಿಯೋ ನ್ಯೂಸ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಖ್ವಾಜಾ, ಕಣಿವೆ ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತು ನ್ಯಾಷನಲ್ ಕಾನ್ಫರೆನ್ಸ್ ಬಲಿಷ್ಠವಾಗಿದ್ದು, ಜಮ್ಮು-ಕಾಶ್ಮೀರದ ಅಧಿಕಾರದ ಗದ್ದುಗೆ ಹಿಡಿಯುವಂತೆ ಮಾಡಲು ಜನರಿಗೆ ಉತ್ತಮ ಅವಕಾಶ ಇದೆ ಎಂದು ತಿಳಿಸಿದ್ದಾರೆ.



# ಖಲಿಸ್ತಾನಿ ಉಗ್ರನ ಹತ್ಯೆ ಸಂಚು ಅಮೆರಿಕ ನ್ಯಾಯಾಲಯದ ಸಮನ್ಸ್‌ಗೆ ಅನಗತ್ಯ ಆರೋಪ ಎಂದ ಭಾರತ



**ನವದೆಹಲಿ:** ಖಲಿಸ್ತಾನಿ ಉಗ್ರ ಗುರುಪಂತ್ ವಂತ್ ಪನ್ನುನ್ ಹತ್ಯೆಯ ಸಂಚಿನಲ್ಲಿ ಅಮೆರಿಕ ನ್ಯಾಯಾಲಯವು ಭಾರತ ಸರ್ಕಾರಕ್ಕೆ ಸಮನ್ಸ್ ನೀಡಿದ ವಿಚಾರಕ್ಕೆ, ಈ ಆರೋಪ ಅನಗತ್ಯ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಹೇಳಿದ್ದಾರೆ.

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಹೇಳಿಕೆಯಲ್ಲಿ, ನಾವು ಮೊದಲೇ ಹೇಳಿದಂತೆ, ಇವು ಸಂಪೂರ್ಣವಾಗಿ ಅನಗತ್ಯ ಮತ್ತು ಆಧಾರ ರಹಿತ ಆರೋಪಗಳಾಗಿವೆ. ಈ ಆರೋಪದ ಮೇಲೆ ನಮ್ಮ ದೃಷ್ಟಿಕೋನವನ್ನು ಬದಲಾಯಿಸುವುದಿಲ್ಲ, ಈ ನಿರ್ದಿಷ್ಟ ಪ್ರಕರಣದ ಹಿಂದಿರುವ ವ್ಯಕ್ತಿಯ ಪೂರ್ವಾಪರಗಳು ಚೆನ್ನಾಗಿ ತಿಳಿದಿವೆ ಎಂದು ಹೇಳಿದ್ದಾರೆ.

1967 ರ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯಿದೆಯಡಿ, ದೇಶವಿರೋಧಿ ಮತ್ತು ಅದರಲ್ಲಿ ತೊಡಗಿರುವ ಪನ್ನುನ್ ಪ್ರತಿನಿಧಿಸುವ ಸಂಸ್ಥೆಯನ್ನು ಕಾನೂನುಬಾಹಿರ ಸಂಸ್ಥೆ ಎಂದು ಘೋಷಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ನ್ಯೂಯಾರ್ಕ್‌ನ ಸದರ್ನ್‌ನ ಜಿಲ್ಲಾ ನ್ಯಾಯಾಲಯವು ಸಮನ್ಸ್‌ನಲ್ಲಿ ಭಾರತ ಸರ್ಕಾರ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಭಾರತದ ಗುಪ್ತಚರ ಸಂಸ್ಥೆಯ ಮಾಜಿ ಮುಖ್ಯಸ್ಥ ಸಮಂತ್ ಗೋಯೆಲ್, ಏಜೆಂಟ್ ವಿಕ್ರಮ್ ಯಾದವ್ ಮತ್ತು ಭಾರತೀಯ ಉದ್ಯಮಿ ನಿಖಿಲ್ ಗುಪ್ತಾ ಅವರನ್ನು ಹೆಸರಿಸಿತ್ತು. ಅಲ್ಲದೇ ಸಮನ್ಸ್‌ನಲ್ಲಿ ಹೆಸರಿಸಿದವರು 21 ದಿನಗಳಲ್ಲಿ ಉತ್ತರಿಸುವಂತೆ ನ್ಯಾಯಾಲಯ ಸೂಚಿಸಿತ್ತು.

ನ್ಯೂಯಾರ್ಕ್‌ನಲ್ಲಿ ಪನ್ನುನ್ ಹತ್ಯೆಗೆ ಸಂಚು ರೂಪಿಸಿದ ಆರೋಪದ ಮೇಲೆ ಅಮೆರಿಕ ಸರ್ಕಾರದ ಕೋರಿಕೆಯ ಮೇರೆಗೆ ನಿಖಿಲ್ ಗುಪ್ತಾ ಅವರನ್ನು ಕಳೆದ ವರ್ಷ ಜೆಕ್ ರಿಪಬ್ಲಿಕ್‌ನಲ್ಲಿ ಬಂಧಿಸಲಾಗಿತ್ತು. ಈ ವರ್ಷದ ಜೂನ್‌ನಲ್ಲಿ ಅವರನ್ನು ಜೆಕ್ ಗಣರಾಜ್ಯದಿಂದ ಯುಎಸ್‌ಗೆ ಹಸ್ತಾಂತರಿಸಲಾಯಿತು. ಮೂಲಭೂತ ಸಂಘಟನೆಯಾದ ಸಿಖ್ಸ್ ಫಾರ್ ಜಸ್ಟಿಸ್‌ನ ಮುಖ್ಯಸ್ಥ ಮತ್ತು ಅಮೆರಿಕ ಮತ್ತು ಕೆನಡಾದ ದ್ವಿ ಪೌರತ್ವವನ್ನು ಹೊಂದಿರುವ ಪನ್ನುನ್‌ನನ್ನು ಕೊಲ್ಲುವ ಸಂಚನ್ನು ಅಮೆರಿಕ ವಿಫಲಗೊಳಿಸಿದೆ ಎಂದು ನವೆಂಬರ್‌ನಲ್ಲಿ ಪತ್ರಿಕೆಯೊಂದು ವರದಿ ಮಾಡಿತ್ತು. ಬಳಿಕ ಅಮೆರಿಕದ ಅಧಿಕಾರಿಗಳು ಇದನ್ನು ದೃಢಪಡಿಸಿದ್ದರು.ಇದರ ಬೆನ್ನಲ್ಲೇ, ಈ ವಿಚಾರವಾಗಿ ವಿದೇಶಾಂಗ ಸಚಿವಾಲಯ ಇದು ಕಳವಳಕಾರಿ ವಿಷಯ ಎಂದು ಹೇಳಿತ್ತು. ಅಲ್ಲದೇ ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್ ಅವರು ಭಾರತವು ಈ ಬಗ್ಗೆ ಉನ್ನತ ಮಟ್ಟದ ತನಿಖೆಯನ್ನು ಪ್ರಾರಂಭಿಸಿದೆ. ಆದರೆ ಇದು ಭಾರತ-ಅಮೆರಿಕದ ಸಂಬಂಧಗಳ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಒತ್ತಿ ಹೇಳಿದ್ದರು.

ಪನ್ನುನ್ ಭಾರತೀಯ ನಾಯಕರ ವಿರುದ್ಧ ದ್ವೇಷ ಭಾಷಣ ಮತ್ತು ಹಲವಾರು ಬೆದರಿಕೆಗಳನ್ನು ಹಾಕಿದ್ದಾನೆ. ಕೇಂದ್ರ ಸರ್ಕಾರ 2020ರಲ್ಲಿ ಆತನನ್ನು ಭಯೋತ್ಪಾದಕ ಎಂದು ಘೋಷಿಸಿತ್ತು.

# 5 ಕೋಟಿ 'ವೈ-ಫೈ' ಹಾಟ್‌ಸ್ಪಾಟ್ ನಿರ್ಮಾಣ!




**ನವದೆಹಲಿ:** ಭಾರತದಲ್ಲಿ ಡಿಜಿಟಲ್ ಸಂಪರ್ಕವನ್ನು ಉತ್ತೇಜಿಸಲು ಪ್ರಧಾನಿ ಮೋದಿ ಪಿಎಂ ವಾನಿ ಯೋಜನೆಯನ್ನು ಪ್ರಾರಂಭಿಸಿದ್ದಾರೆ. ದೇಶದ ಪ್ರತಿಯೊಬ್ಬ ನಾಗರಿಕರಿಗೆ ಕೈಗೆಟುಕುವ ಮತ್ತು ಸುಲಭವಾಗಿ ಲಭ್ಯವಿರುವ ಇಂಟರ್ನೆಟ್ ಸೇವೆಯನ್ನು ಒದಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

ಈ ಯೋಜನೆಯಡಿ, 5 ಕೋಟಿ ಪಿಎಂ-ವೈಫೈ ಹಾಟ್ಸ್ಪಾಟ್‌ಗಳನ್ನು ಸ್ಥಾಪಿಸುವ ಗುರಿಯನ್ನು ಸರ್ಕಾರ ನಿಗದಿಪಡಿಸಿದೆ, ಇದು ಹಳ್ಳಿಗಳು ಮತ್ತು ದೂರದ ಪ್ರದೇಶಗಳಲ್ಲಿ ಇಂಟರ್ನೆಟ್ ಪ್ರವೇಶವನ್ನು ಖಚಿತಪಡಿಸುತ್ತದೆ. ಪ್ರಸ್ತುತ, ಮೊಬೈಲ್ ಟವರ್ ಗಳ ಮೂಲಕ ಇಂಟರ್ನೆಟ್ ಸೇವೆಯನ್ನು ಒದಗಿಸಲಾಗುತ್ತದೆ ಆದರೆ ಅನೇಕ ಪ್ರದೇಶಗಳಲ್ಲಿ ಮೊಬೈಲ್ ಟವರ್ ಗಳ ಕೊರತೆಯಿದೆ. ಇದರ ಪರಿಣಾಮವಾಗಿ ಜನರು ಇಂಟರ್ನೆಟ್ ಮತ್ತು ಮೊಬೈಲ್ ಕರೆ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಪಿಎಂ ವಾನಿ ಯೋಜನೆಯಡಿ, ಸರ್ಕಾರವು ಸಣ್ಣ ವೈಫೈ ಹಾಟ್ಸ್ಪಾಟ್‌ಗಳನ್ನು ಸ್ಥಾಪಿಸುತ್ತಿದೆ, ಇದು ಕೈಗೆಟುಕುವ ಬ್ರಾಡ್ಬ್ಯಾಂಡ್ ಇಂಟರ್ನೆಟ್ ಸೇವೆಗಳನ್ನು ಒದಗಿಸುತ್ತದೆ.

ಬ್ರಾಡ್ಬ್ಯಾಂಡ್ ಇಂಡಿಯಾ ಫೋರಂ (ಬಿಐಎಫ್) ಅಧ್ಯಯನದ ಪ್ರಕಾರ, ಪಿಎಂ ವಾಣಿ ಒಂದು ಪ್ರಮುಖ ಉಪಕ್ರಮವಾಗಿದ್ದು, ಇದು ಸರ್ಕಾರಕ್ಕೆ ನಷ್ಟವನ್ನುಂಟು ಮಾಡುವುದಿಲ್ಲ.

ಈ ಯೋಜನೆಯಡಿ, ಟೆಲಿಕಾಂ ಕಂಪನಿಗಳು ಹೆಚ್ಚುವರಿಯಾಗಿ 60,000 ಕೋಟಿ ರೂ.ಗಳನ್ನು ಗಳಿಸುವ ಸಾಧ್ಯತೆಯಿದೆ ಎಂದು ವರದಿ ತಿಳಿಸಿದೆ. ಇದು ಟೆಲಿಕಾಂ ಕಂಪನಿಗಳ ಕಳವಳಗಳನ್ನು ಸ್ವಲ್ಪ ಮಟ್ಟಿಗೆ ತೆಗೆದುಹಾಕಬಹುದು. ಆದಾಗ್ಯೂ, ವೊಡಾಫೋನ್ -ಐಡಿಯಾ, ಜಿಯೋ ಮತ್ತು ಏರ್ಟೆಲ್‌ನಂತಹ ಕಂಪನಿಗಳು ಈ ಯೋಜನೆಯಿಂದ ತಮ್ಮ ಆದಾಯದಲ್ಲಿ ಇಳಿಕೆಯಾಗುವ ಭಯದಲ್ಲಿವೆ. ಪಿಎಂ ವಾಣಿ ಅಡಿಯಲ್ಲಿ ಸ್ಥಾಪಿಸಲಾದ ವೈಫೈ ಹಾಟ್ಸ್ಪಾಟ್‌ಗಳು ತಮ್ಮ ವ್ಯವಹಾರದ ಮೇಲೆ ಹೆಚ್ಚಿನ ಪರಿಣಾಮ ಬೀರಬಹುದು ಎಂದು ಅವರು ನಂಬುತ್ತಾರೆ. ಆದರೆ ಇದು ಲಕ್ಷಾಂತರ ಜನರಿಗೆ ಅಗ್ಗದ ಇಂಟರ್ನೆಟ್ ಸೇವೆಗಳನ್ನು ಒದಗಿಸುತ್ತದೆ, ಇದು ಅವರ ಜೀವನವನ್ನು ಸುಧಾರಿಸುತ್ತದೆ ಎಂದು ಸರ್ಕಾರ ನಂಬಿದೆ.

# ಉದ್ಯೋಗಾಕಾಂಕ್ಷಿಗಳಿಗಾಗಿ ಪಿಜ್ಜಾ ಹಟ್ ನೂತನ ಪ್ರಯೋಗ!

**ನ್ಯೂಯಾರ್ಕ್:** ಉದ್ಯೋಗಾಕಾಂಕ್ಷಿಗಳಿಗಾಗಿ ಪಿಜ್ಜಾ ಹಟ್ ನೂತನ ಯೋಜನೆಯನ್ನು ಜಾರಿಗೆ ತಂದಿದ್ದು, ರೆಸ್ಯೂಮ್ಗಳನ್ನ ಪಿಜ್ಜಾ ಬಾಕ್ಸ್‌ನಲ್ಲಿ ಇರಿಸಲು ಅವಕಾಶ ನೀಡುತ್ತಿದೆ. ಹೌದು. ResZAme ಎಂದು ಹೆಸರಿಡಲಾಗಿ ಈ ಪ್ರಯತ್ನವು ಸಾಮಾನ್ಯವಾಗಿ ಪಿಜ್ಜಾ ವಿತರಣೆ ಮಾಡುವ ವೇಳೆ ಆ ಬಾಕ್ಸ್‌ನಲ್ಲಿ ಉದ್ಯೋಗಾಕಾಂಕ್ಷಿಯ ರೆಸ್ಯೂಮ್ ಅನ್ನು ನೀಡಲಾಗಿರುತ್ತದೆ. ಈ ರೆಸ್ಯೂಮ್ಗಳನ್ನು ಪಿಜ್ಜಾ ಬಾಕ್ಸ್‌ನಲ್ಲಿಯೇ ಮುದ್ರಿಸಲಾಗುತ್ತದೆ. ಚೀಸ್ ಪಿಜ್ಜಾದೊಂದಿಗೆ ನ್ಯೂಯಾರ್ಕ್ ನಗರದ ವಿವಿಧ ಕಚೇರಿಗಳಿಗೆ ತಲುಪಿಸಲಾಗುತ್ತದೆ. ಉದ್ಯೋಗದಾತರ ಗಮನವನ್ನು ಸೆಳೆಯಲು ಈ ರೀತಿಯ ವಿಶಿಷ್ಟ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ. ಆದರೆ ಪಿಜ್ಜಾ ಹಟ್ ತನ್ನ ನಿಯಮಗಳಲ್ಲಿ ಹೇಳುವಂತೆ, ಈ ಯೋಜನೆಯಿಂದಾಗಿ ಕೆಲಸ ಸಿಗುತ್ತದೆ ಎನ್ನುವ ಯಾವುದೇ ಗ್ಯಾರಂಟಿಯಿಲ್ಲ ಎಂದಿದೆ.



# 1,000 ಹಿಜ್ಬುಲ್ಲಾ ರಾಕೆಟ್ ಲಾಂಚರ್ ಬ್ಯಾರೆಲ್‌ಗಳನ್ನು ನಾಶಪಡಿಸಿದ ಇಸ್ರೇಲ್

**ಜೆರುಸಲೇಂ:** ಕಳೆದ ಕೆಲವು ಗಂಟೆಗಳಲ್ಲಿ ಇಸ್ರೇಲಿ ಫೈಟರ್ ಜೆಟ್ ಗಳು ದಕ್ಷಿಣ ಲೆಬನಾನ್‌ನ ಹಿಜ್ಬುಲ್ಲಾ ಗುರಿಗಳ ಮೇಲೆ ದಾಳಿ ನಡೆಸಿದ್ದು, ಇಸ್ರೇಲ್ ಭೂಪ್ರದೇಶದ ಕಡೆಗೆ ತಕ್ಷಣ ಗುಂಡು ಹಾರಿಸಲು ಬಳಸಲಾಗುತ್ತಿದ್ದ ನೂರಾರು ರಾಕೆಟ್ ಲಾಂಚರ್ ಬ್ಯಾರೆಲ್ ಗಳ ಮೇಲೆ ದಾಳಿ ನಡೆಸಿವೆ ಎಂದು ಮಿಲಿಟರಿ ತಿಳಿಸಿದೆ. ಮಧ್ಯಾಹ್ನದಿಂದ ಫೈಟರ್ ಜೆಟ್ ಗಳು ಸುಮಾರು 1,000 ಬ್ಯಾರೆಲ್ಗಳನ್ನು ಒಳಗೊಂಡ ಸುಮಾರು 100 ರಾಕೆಟ್ ಲಾಂಚರ್‌ಗಳ ಮೇಲೆ ದಾಳಿ ನಡೆಸಿದವು ಎಂದು ಅದು ಹೇಳಿದೆ.

ಇಸ್ರೇಲ್ ರಾಜ್ಯವನ್ನು ರಕ್ಷಿಸುವ ಸಲುವಾಗಿ ಹಿಜ್ಬುಲ್ಲಾ ಭಯೋತ್ಪಾದಕ ಸಂಘಟನೆಯ ಮೂಲಸೌಕರ್ಯ ಮತ್ತು ಸಾಮರ್ಥ್ಯಗಳನ್ನು ಕುಗ್ಗಿಸಲು ಐಡಿಎಫ್ (ಇಸ್ರೇಲ್ ರಕ್ಷಣಾ ಪಡೆಗಳು) ಕಾರ್ಯನಿರ್ವಹಿಸುವುದನ್ನು ಮುಂದುವರಿಸುತ್ತದೆ ಎಂದು ಐಡಿಎಫ್ ಹೇಳಿದೆ.



# ಹೊಸ ಹಂತದ ಯುದ್ಧ ಪ್ರಾರಂಭ- ಇಸ್ರೇಲ್ ಘೋಷಣೆ

**ಜೆರುಸಲೆಮ್:** ಲೆಬನಾನ್ ಸ್ಫೋಟದ ನಂತರ ಇಸ್ರೇಲ್ ಹೇಳಿಕೆಯೊಂದನ್ನು ನೀಡಿದ್ದು, ಇದು ಹೊಸ ಹಂತದ ಯುದ್ಧದ ಆರಂಭವಾಗಿದೆ ಎಂದು ಹೇಳಿದೆ. ಈ ಸಂಬಂಧ ಇಸ್ರೇಲಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಪ್ರತಿಕ್ರಿಯಿಸಿ, ಯುದ್ಧದಲ್ಲಿ ಹೊಸ ಹಂತದ ಪ್ರಾರಂಭವನ್ನು ಘೋಷಿಸಿದರು ಮತ್ತು ಈಗ ಉತ್ತರದ ಕಡೆ ಗಮನ ಹರಿಸಲಾಗಿದೆ ಎಂದು ಹೇಳಿದರು. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಗ್ಯಾಲಂಟ್, ನಾವು ಯುದ್ಧದ ಹೊಸ ಹಂತದ ಪ್ರಾರಂಭದಲ್ಲಿದ್ದೇವೆ. ನಮ್ಮ ಮಿಷನ್ ಸ್ಪಷ್ಟವಾಗಿದೆ. ಇಸ್ರೇಲ್ನ ಉತ್ತರ ಸಮುದಾಯಗಳನ್ನು ಅವರ ಮನೆಗಳಿಗೆ ಸುರಕ್ಷಿತವಾಗಿ ಹಿಂದಿರುಗಿಸುವುದು. ಇದಕ್ಕಾಗಿ ಭದ್ರತಾ ಪರಿಸ್ಥಿತಿ ಬದಲಾಗಬೇಕು ಎಂದು ಬರೆದುಕೊಂಡಿದ್ದಾರೆ. ಆದರೆ ಎರಡು ಸ್ಫೋಟಗಳ ಬಗ್ಗೆ ಇಸ್ರೇಲ್ ಯಾವುದೇ ಹೇಳಿಕೆ ನೀಡಿಲ್ಲ. ಅಲ್ಲದೇ ಈ ದಾಳಿಗಳನ್ನು ಸರ್ಕಾರ ನಿರಾಕರಿಸಿಯೂ ಇಲ್ಲ. ಹೆಜ್ಬೊಲ್ಲಾ ಸದಸ್ಯರು ಬಳಸಿದ ಪೇಜರ್ಗಳ ಸ್ಫೋಟದಲ್ಲಿ 2,750 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಪೇಜರ್ ಸ್ಫೋಟದ ಮರುದಿನ ಹೆಜ್ಬೊಲ್ಲಾ ಸದಸ್ಯರು ಬಳಸಿದ ವಾಕಿ-ಟಾಕಿಗಳು ಮತ್ತು ಇತರ ಎಲೆಕ್ಟ್ರಾನಿಕ್ ಸಾಧನಗಳು ಸ್ಫೋಟಗೊಂಡಿದ್ದು, ಕನಿಷ್ಠ 14 ಜನರು ಸಾವನ್ನಪ್ಪಿದ್ದಾರೆ ಮತ್ತು 450 ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.



# ಆಂಧ್ರಪ್ರದೇಶದಲ್ಲಿ ನೂತನ ಮದ್ಯ ನೀತಿ ಜಾರಿಗೆ

**ಆಂಧ್ರಪ್ರದೇಶ:** ಎಲ್ಲಾ ಬ್ಯಾಂಡ್ ಗಳ 180 ಎಂಎಲ್ ಮದ್ಯದ ಬಾಟಲಿಗಳಿಗೆ ಕೇವಲ 99 ರೂ. ಗರಿಷ್ಠ ದರ ನಿಗದಿಪಡಿಸಲಾಗಿದೆ. ಹೊಸ ಮದ್ಯದ ನೀತಿ ಜಾರಿಗೆ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ನೇತೃತ್ವದ ಸಂಪುಟ ಸಭೆ ಅನುಮೋದನೆ ನೀಡಿದೆ.

ಅಕ್ಟೋಬರ್ 1ರಿಂದಲೇ ಆಂಧ್ರಪ್ರದೇಶ ರಾಜ್ಯದ ನೂತನ ಮದ್ಯ ನೀತಿ ಜಾರಿಗೆ ಬರಲಿದ್ದು, ಕೈಗೆಟುಕುವ ಮದ್ಯ ದರ ಪರಿಚಯಿಸಲಾಗಿದೆ.

ಎಲ್ಲಾ ಬ್ಯಾಂಡ್ ಗಳ 180 ಎಂಎಲ್ ಮದ್ಯದ ಬಾಟಲಿಗಳಿಗೆ ಕೇವಲ 99 ರೂಪಾಯಿ ಗರಿಷ್ಠ ದರ ನಿಗದಿಪಡಿಸಲಾಗಿದೆ.

ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಮದ್ಯ ಸಿಗಬೇಕು ಎನ್ನುವ ಉದ್ದೇಶದಿಂದ ನೂತನ ಮದ್ಯ ನೀತಿ ಜಾರಿಗೆ ಒಪ್ಪಿಗೆ ಸೂಚಿಸಲಾಗಿದೆ. ಆಂಧ್ರಪ್ರದೇಶದಲ್ಲಿರುವ 3736 ಚಿಲ್ಲರೆ ಮದ್ಯ ಮಾರಾಟ ಮಳಿಗೆಗಳಲ್ಲಿ ಶೇಕಡ 10ರಷ್ಟು ಕಳ್ಳು ತೆಗೆಯುವ ಸಮುದಾಯದವರಿಗೆ ನೀಡಲಾಗುವುದು. ಆನ್ಲೈನ್ ಲಾಟರಿ ವ್ಯವಸ್ಥೆ ಮೂಲಕ ಇವುಗಳನ್ನು ಹಂಚಿಕೆ ಮಾಡಲಾಗುವುದು.



# ಹಿಂದೂ ದೇವತೆಗಳಿಗೆ ಕಾಂಗ್ರೆಸ್ ಅವಮಾನ- ಪ್ರಧಾನಿ ವಾಗ್ದಾಳಿ



**ನವದೆಹಲಿ:** ಕೆಲ ಮತಬ್ಯಾಂಕ್ಗಾಗಿ ಕಾಂಗ್ರೆಸ್ನಿಂದ ಹಿಂದೂ ದೇವತೆಗಳಿಗೆ ನಿರಂತರವಾಗಿ ಅಪಮಾನ ಮಾಡಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಗಂಭೀರ ಆರೋಪ ಮಾಡಿದರು.

ಇಂದು ಜಮ್ಮು ಮತ್ತು ಕಾಶ್ಮೀರದ ವಿಧಾನಸಭಾ ಚುನಾವಣೆ ಹಿನ್ನೆಯಲ್ಲಿ ಕತ್ರಾದಲ್ಲಿ ಪ್ರಚಾರದಲ್ಲಿ ಭಾಷಣ ಮಾಡಿದ ಅವರು, ವಿದೇಶದಲ್ಲೂ ಕಾಂಗ್ರೆಸ್ ನಾಯಕರಿಂದ ಹಿಂದೂಗಳಿಗೆ, ಹಿಂದೂ ದೇವರುಗಳಿಗೆ ಅಪಚಾರವಾಗುತ್ತಿದೆ. ದೇವತೆಯರು ದೇವರಲ್ಲ ಎಂದು ಕಾಂಗ್ರೆಸ್ನವರು ಹೇಳುತ್ತಾರೆ. ಇಡೀ ದೇಶದಲ್ಲಿ ಕಾಂಗ್ರೆಸ್ ಭ್ರಷ್ಟಾಚಾರದ ಪಕ್ಷವಾಗಿದೆ ಎಂದು ಪ್ರಧಾನಿ ಗುಡುಗಿದರು. ಕಾಶ್ಮೀರದಲ್ಲಿ ಪಿಡಿಪಿ ಮತ್ತು ಕಾಂಗ್ರೆಸ್ ಪಾಕಿಸ್ತಾನದ ಅಜೆಂಡಾವನ್ನು ಸ್ಥಾಪಿಸಲು ಇಚ್ಚಿಸಿವೆ ಎಂದು ಆಪಾದಿಸಿದರು. ಇತ್ತೀಚೆಗೆ ಕರ್ನಾಟಕದ ಮಂಡ್ಯ ಜಿಲ್ಲೆಯ ನಾಗ ಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ಉಂಟಾಗಿದ್ದ ಕೋಮ ಗಲಭೆ, ಹಿಂಸಾಚಾರದ ಘಟನೆ, ಗಣೇಶ ಮೂರ್ತಿಗಳನ್ನು ಪೊಲೀಸ್ ವ್ಯಾನ್ಗಳನ್ನು ಕೂರಿಸಿದ್ದ ಪ್ರಕರಣವನ್ನು ಉಲ್ಲೇಖಿಸಿ ಮೋದಿಯವರು ಕಾಂಗ್ರೆಸ್ ವಿರುದ್ಧ ಕುಟುಕಿದ್ದರು. ಹಿಂದೂ ದೇವರುಗಳಿಗೆ ಕಾಂಗ್ರೆಸ್ ಕಂಬಿಹಿಂದೆ ಹಾಕುತ್ತಿದೆ ಎಂದೂ ಚುನಾವಣೆಯ ಪ್ರಚಾರದಲ್ಲಿ ಆಕ್ರೋಶ ಹೊರ ಹಾಕಿದ್ದರು.

# ಗಗನಕ್ಕೇರಿದ ಬಂಗಾರದ ಬೆಲೆ!




**ವಾಷಿಂಗ್ಟನ್:** ಸುಮಾರು ನಾಲ್ಕು ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ಅಮೆರಿಕದ ಫೆಡರಲ್ ರಿಸರ್ವ್ ಬ್ಯಾಂಕ್ 50 ಮೂಲಾಂಶದಷ್ಟು (0.5%) ಬಡ್ಡಿ ದರ ಕಡಿತ ಮಾಡಿದೆ. ಇದರಿಂದಾಗಿ ಪ್ರಪಂಚದಾದ್ಯಂತ ಮಾರುಕಟ್ಟೆಗಳ ಮೇಲೆ ಪರಿಣಾಮ ಬೀರಿದೆ. ಇದರೊಂದಿಗೆ ಚಿನ್ನದ ಬೆಲೆ ಗಗನಕ್ಕೇರಿದೆ.

2020ರ ಸಾಂಕ್ರಾಮಿಕ ರೋಗದ ಆರಂಭಿಕ ದಿನಗಳ ನಂತರ ಅಮೆರಿಕದ ಫೆಡ್ ರಿಸರ್ವ್ ನಿರೀಕ್ಷೆಗೂ ಮೀರಿ ಬಡ್ಡಿ ದರ ಕಡಿತ ಮಾಡಿದೆ. ಮುಂದಿನ ದಿನಗಳಲ್ಲಿ ಇದು ಭಾರತೀಯ ಷೇರು ಮಾರುಕಟ್ಟೆಯ ಮೇಲೆ ಪರಿಣಾಮ ಬೀರಲಿದೆ ಎನ್ನಲಾಗಿದೆ.

ಯುಎಸ್ ಫೆಡ್ನ ದರ ಕಡಿತದಿಂದ ಚಿನ್ನ ಮತ್ತು ಬೆಳ್ಳಿಯ ದರ ಭಾರೀ ಏರಿಕೆ ಕಂಡು ಬರಲಿದೆ. ಡಾಲರ್ ದುರ್ಬಲಗೊಳ್ಳುತ್ತಿದ್ದಂತೆ ಸಹಜವಾಗಿಯೇ ಚಿನ್ನದ ಬೆಲೆ ಗಗನಕ್ಕೇರಲಿದೆ. ಚಿನ್ನದ ಬೆಲೆ ಪ್ರತಿ ಔನ್ಸ್‌ಗೆ 2,600 ಡಾಲರ್ ತಲುಪಿದೆ. ಬೆಳ್ಳಿಯ ಬೆಲೆ ಪ್ರತಿ ಔನ್ಸ್‌ಗೆ ಸುಮಾರು 30 ಡಾಲರ್ನಲ್ಲಿ ವಹಿವಾಟು ನಡೆಸುತ್ತಿದೆ. ಈಗಾಗಲೇ ಚಿನ್ನದ ದರ ದಾಖಲೆಯ ಮಟ್ಟದಲ್ಲಿದ್ದು, ಇದೀಗ ಬಡ್ಡಿದರ ಇಳಿಕೆಯಿಂದ ಇನ್ನಷ್ಟು ಏರಿಕೆಗೆ ಅವಕಾಶವಿದೆ. ಇದರಿಂದಾಗಿ ಚಿನ್ನದ ಮೇಲಿನ ಹೂಡಿಕೆ ಹೆಚ್ಚಾಗಬಹುದು ಎನ್ನಲಾಗಿದೆ.

# ಸ್ಫೋಟಗೊಂಡ ಪೇಜರ್ ತೈವಾನ್‌ನಿಂದ ರವಾನೆ

**ಲೆಬನಾನ್:** ಹೆಜ್ಬುಲ್ಲಾ ಸಂಘಟನೆಯ ಸದಸ್ಯರ ಸಾವಿಗೆ ಕಾರಣವಾದ ಪೇಜರ್ ಸ್ಫೋಟ ಪ್ರಕರಣದಲ್ಲಿ ಸ್ಫೋಟಕ್ಕೊಂಡು ಪೇಜರ್ ಗಳು ತೈವಾನ್ ನಿಂದ ಬಂದಿದ್ದು. ಅವುಗಳನ್ನು ನಾವು ತಯಾರಿಸಿಲ್ಲ ಎಂದು ಗೋಲ್ಡ್ ಅಪೋಲೋ ಸಂಸ್ಥೆ ಹೇಳಿಕೊಂಡಿದೆ.

ಲೆಬನಾನ್‌ನಲ್ಲಿ ಹೆಜ್ಬುಲ್ಲಾ ಉಗ್ರರು ಬಳಸುತ್ತಿದ್ದ ಪೇಜರ್ ಗಳು ಏಕಾಏಕಿ ಬ್ಲಾಸ್ಟ್ ಆಗಿ ಕನಿಷ್ಠ 11 ಮಂದಿ ಸಾವಿಗೀಡಾಗಿ 2,800ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ.

ಈ ಪೈಕಿ ಸುಮಾರು 200 ಮಂದಿ ಗಂಭೀರ ಸ್ಥಿತಿಯಲ್ಲಿದ್ದು ಚಿಕಿತ್ಸೆ ಮುಂದುವರೆದಿದೆ.

ಗಾಯಾಳುಗಳಿಗೆ ಹೆಚ್ಚಾಗಿ ಮುಖ, ಕೈಗಳು ಮತ್ತು ಹೊಟ್ಟೆಗೆ ಗಾಯಗಳಾಗಿವೆ ಎಂದು ಲೆಬನಾನಿನ ಆರೋಗ್ಯ ಸಚಿವ ಫಿರಾಸ್ ಅಬಿಯಾಡ್ ಹೇಳಿದ್ದಾರೆ.

ಏತನ್ಮಧ್ಯೆ ಹೆಜ್ಬುಲ್ಲಾ ಸಂಘಟನೆಯ ಸದಸ್ಯರ ಸಾವಿಗೆ ಕಾರಣವಾದ ಪೇಜರ್ ಸ್ಫೋಟ ಪ್ರಕರಣದಲ್ಲಿ ಬಳಸಲಾದ ಪೇಜರ್ ಗಳನ್ನು ತೈವಾನ್ ನಿಂದ ತರಲಾಗಿತ್ತು. ಮತ್ತು ಹೀಗೆ ಪೇಜರ್ ಗಳು ಲೆಬನಾನ್ ಸೇರುವ ಮುನ್ನವೇ ಅದಕ್ಕೆ ಸ್ಫೋಟಕಗಳನ್ನು ಅಳವಡಿಸಲಾಗಿತ್ತು ಎಂದು ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ. ವರದಿಯಲ್ಲಿರುವಂತೆ ಈ ಎಲ್ಲ ಪೇಜರ್ ಗಳನ್ನು ತೈವಾನ್ ಮೂಲದ ಗೋಲ್ಡ್ ಅಪೋಲೋ ಸಂಸ್ಥೆಯಿಂದ ತರಿಸಿಕೊಳ್ಳಲಾಗಿತ್ತು ಎನ್ನಲಾಗುತ್ತಿದೆ.

ಈ ಹೀಗೆ ರವಾನೆ ಮಾಡಿದ ಪೇಜರ್ ಗಳನ್ನು ರಫ್ತಿಗೂ ಮೊದಲೇ ಇಸ್ರೇಲಿ ಹ್ಯಾಕರ್ ಗಳು ಹ್ಯಾಕ್ ಮಾಡಿದ್ದರು.



ಹೆಸರು ಹೇಳಲಿಚ್ಚಿಸದ ಹೆಜ್ಬುಲ್ಲಾ ಸದಸ್ಯರೊಬ್ಬರು ಹೇಳಿರುವಂತೆ ಇತ್ತೀಚೆಗೆ ಸುಮಾರು 1 ಸಾವಿರಕ್ಕೂ ಅಧಿಕ ಪೇಜರ್ ಗಳನ್ನು ಆರ್ಡರ್ ಮಾಡಿ ಆಮದು ಮಾಡಿಕೊಳ್ಳಲಾಗಿತ್ತು. ಇದಲ್ಲದೆ ಇನ್ನೂ ಮೂರು ಸಾವಿರ AR924 model ಪೇಜರ್‌ಗಳ ಖರೀದಿಗೆ ಆರ್ಡರ್ ಮಾಡಲಾಗಿದೆ. ಪ್ರಸ್ತುತ ಸ್ಫೋಟಗೊಂಡಿರುವ ಪೇಜರ್ ಗಳೂ ಇವೇ ಆಗಿವೆ ಎಂದು ಹೇಳಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ತೃಪ್ತಿ ದಿಮ್ರಿಗೆ ಮದುವೆ ಆಗೆಲ್ಲ'; ಹೀಗೆ ಭವಿಷ್ಯ ನುಡಿದಿದ್ದು ಯಾರು?



ನಟಿ ತೃಪ್ತಿ ದಿಮ್ರಿ ಅವರು ಚಿತ್ರರಂಗಕ್ಕೆ ಬಂದು ಹಲವು ಸಮಯ ಕಳೆದಿದೆ. ಆದರೆ, ಅವರಿಗೆ ಫೇಮ್ ಸಿಕ್ಕಿದ್ದು ರಣಬೀರ್ ಕಪೂರ್ ನಟನೆಯ 'ಅನಿಮಲ್' ಸಿನಿಮಾ ಮೂಲಕ. ಅವರು ಮಾಡಿದ್ದು ಸಣ್ಣ ಪಾತ್ರವಾದರೂ ದೊಡ್ಡ ಮಟ್ಟದಲ್ಲಿ ಚರ್ಚೆ ಹುಟ್ಟುಹಾಕಿತ್ತು. ಈಗ ಅವರಿಗೆ ಮದುವೆ ಆಗಲ್ಲ ಎನ್ನುವ ಭಯ ಹುಟ್ಟಿದೆ. ಇದಕ್ಕೆ ಕಾರಣ ಏನು ಎಂಬುದನ್ನು ಅವರು ವಿವರಿಸಿದ್ದಾರೆ.

'ನಾನು ಉತ್ತರಾಖಂಡದವಳು. ಆದರೆ ಹುಟ್ಟಿದ್ದು ಬೆಳೆದಿದ್ದು ದೆಹಲಿಯಲ್ಲಿ. ನನ್ನ ಪಾಲಕರು ದೆಹಲಿಯಲ್ಲಿ ಇದ್ದರು. ನಾನು ಬಾಂಬೆಗೆ ಶಿಫ್ಟ್ ಆದಾಗ ನನಗೆ ಭಿನ್ನ ಎನಿಸಿತು. ನಿತ್ಯ 50-60 ಜನ ಇರೋ ರೂಂನಲ್ಲಿ ಇರಬೇಕಿತ್ತು. ಈ ಪ್ರೊಫೇಷನ್?ಗೆ ನಿಮ್ಮ ಮಗಳನ್ನು ಏಕೆ ಕಳುಹಿಸಿದಿರಿ ಎಂದು ಕೇಳಿದವರು ಅನೇಕರು ಇದ್ದಾರೆ. ಅವಳು ಕೆಟ್ಟವರ ಸಹವಾಸ ಮಾಡುತ್ತಾಳೆ, ಅವಳಿಗೆ ಮದುವೆ ಆಗಲ್ಲ ಎಂದು ಹೇಳಿದವರೂ ಇದ್ದಾರೆ' ಎಂದಿದ್ದಾರೆ ತೃಪ್ತಿ.

'ಆ ಒಂದು ಹಂತಕ್ಕೆ ಹೋದರೂ ನಿಮಗೆ ಕೆಲಸ ಸಿಗುತ್ತಿಲ್ಲ ಎಂದರೆ ಗೊಂದಲ ಸೃಷ್ಟಿ ಆಗುತ್ತದೆ. ಆದರೆ, ತಂದೆ-ತಾಯಿ ಬಳಿ ಮರಳಿ ಹೋಗಿ ನನ್ನ ಕೈಯಲ್ಲಿ ಅದು ಸಾಧ್ಯವಾಗಿಲ್ಲ ಎಂದು ಹೇಳಬಾರದು ಎಂದು. ನನ್ನ ಮೊದಲ ಸಿನಿಮಾ ಲೈಲಾ ಮಜ್ನು ರಿಲೀಸ್ ಆದ ಬಳಿಕ ಎಲ್ಲರೂ ಖುಷಿ ಪಟ್ಟಿದ್ದರು' ಎಂದಿದ್ದಾರೆ ತೃಪ್ತಿ. ಈ ಸಿನಿಮಾ ಇತ್ತೀಚೆಗೆ ರೀ-ರಿಲೀಸ್ ಆಗಿದೆ.

ತೃಪ್ತಿ ಜೀವನ ಸಂಪೂರ್ಣವಾಗಿ ಬದಲಾಗಿದ್ದು 'ಅನಿಮಲ್' ಸಿನಿಮಾ ಮೂಲಕ. ಇದಾದ ಬಳಿಕ ಅವರನ್ನು ಹುಡುಕಿ ಅನೇಕ ಆಫರ್?ಗಳು ಬರುತ್ತಿವೆ. ಅವರು ನ್ಯಾಷನಲ್ ಕ್ರಶ್ ಎಂದು ಕೂಡ ಎನಿಸಿಕೊಂಡಿದ್ದಾರೆ. 'ನಾನು ದೇವರಿಗೆ ಧನ್ಯವಾದ ಹೇಳಬೇಕು. ಜನರು ನನ್ನನ್ನು ಇಷ್ಟಪಡುತ್ತಿದ್ದಾರೆ. ನನ್ನ ಸಿನಿಮಾ ಬಗ್ಗೆ ಜನರು ಮಾತನಾಡುತ್ತಿದ್ದಾರೆ' ಎಂದು ಅವರು ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ.

ತೃಪ್ತಿ ದಿಮ್ರಿ ಕೈಯಲ್ಲಿ ಹಲವು ಸಿನಿಮಾಗಳು ಇವೆ. ರಾಜ್ ಕುಮಾರ್ ರಾವ್ ಅವರ 'ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ' ಸಿನಿಮಾದಲ್ಲಿ ನಟಿಸುತ್ತಿದ್ದು, ಅಕ್ಟೋಬರ್ 11ರಂದು ಚಿತ್ರ ರಿಲೀಸ್ ಆಗಲಿದೆ. ವಿಶಾಲ್ ಭಾರದ್ವಾಜ್ ಅವರ ನಿರ್ದೇಶನದ ಇನ್ನೂ ಟೈಟಲ್ ಇಡದ ಸಿನಿಮಾದಲ್ಲಿ ಶಾಹಿದ್ ಕಪೂರ್ ಜೊತೆ ತೆರೆ ಹಂಚಿಕೊಳ್ಳುತ್ತಿದ್ದಾರೆ.

# 'ಮಾರ್ನಮಿ' ಚಿತ್ರದ ಟೀಸರ್ ಔಟ್



**ಕರಾವಳಿ ಪ್ರೇಮಕಥೆಯಲ್ಲಿ ರಿತ್ವಿಕ್, ಚೈತ್ರಾ ಆಚಾರ್**

ವಿಭಿನ್ನ ಕಂಟೆಂಟಿನ ಸುಳಿವಿನ ಮೂಲಕವೇ ಸದ್ದು ಮಾಡೋ ಸಿನಿಮಾಗಳು ಗೆದ್ದು ಬೀಗಿದ ಅನೇಕ ಉದಾಹರಣೆಗಳಿವೆ. ಆ ಸಾಲಿಗೆ ಸೇರ್ಪಡೆಗೊಳ್ಳುವ ಸ್ಪಷ್ಟ ಲಕ್ಷಣಗಳನ್ನು ಒಳಗೊಂಡಿರುವ ಚಿತ್ರ ಮಾರ್ನಮಿ. ಪಿಂಗಾರ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ಪಡೆದಿರುವ ಪ್ರೀತಂ ಆರ್ ಶೆಟ್ಟಿ ಗರಡಿಯಲ್ಲಿ ನಿರ್ದೇಶನದ ಪಟ್ಟುಗಳನ್ನು ಕಲಿತಿರುವ ರಿಶಿತ್ ಶೆಟ್ಟಿ ಚೊಚ್ಚಲ ಪ್ರಯತ್ನವೇ ಈ ಮಾರ್ನಮಿ. ಈ ಚಿತ್ರದ ಟೈಟಲ್ ಟೀಸರ್ ಬಿಡುಗಡೆ ಕಾರ್ಯಕ್ರಮ ಬೆಂಗಳೂರಿನ ಎಸ್ ಆರ್ ವಿ ಥಿಯೇಟರ್‌ನಲ್ಲಿ ಮಾಡಲಾಯಿತು. ಈ ವೇಳೆ ಚಿತ್ರತಂಡ ಚಿತ್ರದ ಬಗ್ಗೆ ಮಾಹಿತಿ ಹಂಚಿಕೊಂಡಿದೆ.

ಸಂಗೀತ ನಿರ್ದೇಶಕ ಚರಣ್ ರಾಜ್ ಮಾತನಾಡಿ, ತುಂಬಾ ಖುಷಿಯಾಗುತ್ತಿದೆ. ಹೊಸ ತಂಡ ಹೊಸ ನಿರ್ದೇಶಕರು. ಈ ತಂಡದಲ್ಲಿ ನನ್ನ ಅಚ್ಚುಮೆಚ್ಚಿನ ನಟರು ಎಲ್ಲಾ ಇದ್ದಾರೆ. ತುಂಬಾ ಒಳ್ಳೆ ಕಥೆ. ನನಗೂ ಒಳ್ಳೆ ಅವಕಾಶ ಇದೆ ಎನಿಸಿತು. ನನಗೂ ಅವಕಾಶ ಪಡೆದುಕೊಂಡಿದ್ದೇನೆ. ಸಂಗೀತದ ಕೆಲಸ ಶುರು ಮಾಡಿದ್ದೇವೆ. ಮಾರ್ನಮಿ ಟೈಟಲ್ ಟೀಸರ್ ಮಾಡಿದ್ದೇವೆ. ಹಾಡುಗಳ ಕಂಪೋಸ್ ಮಾಡಲು ಶುರು ಮಾಡಿದ್ದೇವೆ. ಇಷ್ಟೇ ಸಾಂಗ್ ಇದೆ ಅಂತಾ ಡಿಸೈಡ್ ಮಾಡಿಲ್ಲ. ಆದರೆ ಐದು ಹಾಡುಗಳು ಇರುತ್ತವೆ ಎಂದರು.

ನಿರ್ದೇಶಕ ರಿಶಿತ್ ಶೆಟ್ಟಿ ಮಾತನಾಡಿ, ಒಂದಷ್ಟು ಸಿನಿಮಾಗಳಲ್ಲಿ ಅಸಿಸ್ಟೆಂಟ್, ಅಸೋಸಿಯೆಟ್ ಆಗಿ ರೈಟರ್ ಆಗಿ ಕೆಲಸ ಮಾಡಿದ್ದೇನೆ. ಪ್ರೀತಂ ಶೆಟ್ಟಿ ಅವರ ಜೊತೆ ಒಂದಷ್ಟು ಚಿತ್ರಗಳಿಗೆ ಕೆಲಸ ಮಾಡಿದ್ದೇನೆ. ಮಂಗಳೂರಲ್ಲಿ ಸ್ಕ್ರಿಪ್ಟ್ ಕೆಲಸಕ್ಕೆ ಹೋಗಿದ್ದಾಗ ಸುಧಿ ಪರಿಚಯವಾಗಿದ್ದು. ಅವರು ಒಂದು ಕಥೆ ಮಾಡಿಕೊಂಡಿದ್ದರು. ಅವರು ಡೈರೆಕ್ಷನ್ ಮಾಡಲು ಇಷ್ಟಇಲ್ಲ ಅಂದಾಗ ನಾನು ಕಥೆ ಕೇಳಿದೆ. ಅವರು ಪ್ರೀತಿಯಿಂದ ಕೊಟ್ಟರು. ರಿತ್ವಿಕ್ ಅವರಿಗೆ ಹೇಳಿದೆ. ಅವರು ಇದಕ್ಕೆ ಏನೋ ಬೇಕೋ ಅನಿಸುತ್ತಿದೆ ಎಂದರು. ಬಳಿಕ 6 ತಿಂಗಳ ವರ್ಕ್ ಮಾಡಿಕೊಂಡು ಅವರ ಬಳಿ ಹೋದೆ. ಅವರು ಕಥೆ ಕೇಳಿ ಖುಷಿಪಟ್ಟರು. ಬಳಿಕ ಪ್ರೊಡ್ಯೂಸರ್ ಹುಡುಕಾಟದಲ್ಲಿ ನಿಶಾಂತ್ ಸರ್ ಭೇಟಿಯಾದರು. ಆ ಬಳಿಕ ಟೈಟಲ್ ಟೀಸರ್ ಮಾಡಿಕೊಂಡು ಬಂದೆವು. ಆ ಬಳಿಕ ನಿರ್ಮಾಪಕರು ಇಷ್ಟಪಟ್ಟರು. ಚಿತ್ರದ ಪ್ರತಿ ಹಂತದಲ್ಲಿ ನಿಶಾಂತ್ ಸರ್ ಸಹಕಾರ ಕೊಟ್ಟಿದ್ದಾರೆ ಎಂದರು.

ನಟ ರಿತ್ವಿಕ್ ಮಾತನಾಡಿ, ಈ ಚಿತ್ರದ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ. ಒಂದು ಕಥೆ. ಚೆನ್ನಾಗಿ ಎಳೆದುಕೊಂಡು ಬಂದಿದ್ದು ರಿಶಿತ್ ಶೆಟ್ಟಿ. ನಮಗೆ ಬೇಕು ಅಂದಿದೆಲ್ಲ ಕೊಡುತ್ತಿರುವುದು, ನಮಗೆ ಸಪೋರ್ಟ್ ಮಾಡುತ್ತಿರುವುದು ನಿರ್ಮಾಪಕ ನಿಶಾಂತ್ ಸರ್. ಇಂತಹ ನಿರ್ಮಾಪಕರು ಅಪರೂಪ. ಈ ರೀತಿ ನಿರ್ಮಾಪಕರು ಇಂಡಸ್ಟ್ರಿಗೆ ಸಿಗಬೇಕು. ಇವರು ಗೆದ್ದರೆ ಮತ್ತಷ್ಟು ಸಿನಿಮಾಗಳು ಮಾಡುತ್ತಾರೆ. ಕಥೆ ಚೆನ್ನಾಗಿದೆ. ಕರಾವಳಿ ಭಾಗದಲ್ಲಿ ನಡೆಯುವ ಅದ್ಭುತ ಲವ್ ಸ್ಟೋರಿ. ದಸರಾ ದಿನವನ್ನು ಮಾರ್ನಮಿ ಎಂದು ಕರೆಯುತ್ತಾರೆ. ಚಿತ್ರದಲ್ಲಿ ಒಳ್ಳೆ ಸ್ಟಾರ್ ಕ್ಯಾಸ್ಟ್ ಇದೆ. ಅದ್ಭುತ ತಾಂತ್ರಿಕ ವರ್ಗ ಇದೆ ಎಂದು ಮಾಹಿತಿ ಹಂಚಿಕೊಂಡರು.

ನಾಯಕಿ ಚೈತ್ರಾ ಆಚಾರ್ ಮಾತನಾಡಿ, ಕಥೆ ಬಹಳ ಇಷ್ಟವಾಯ್ತು. ಡೇಟ್ ಸಮಸ್ಯೆ ಇದೆ ಆಗಲ್ಲ ಎಂದೆ. ಮತ್ತೆ ಕಥೆ ನನ್ನ ಬಳಿಯೇ ಬಂತು. ಡೇಟ್ಸ್ ಅಡ್ಜಸ್ಟ್ ಮಾಡಿಕೊಳ್ಳೋಣಾ ಎಂದರು. ಅದ್ಭುತ ಕಥೆ. ಟೆಕ್ನಿಕಲ್ ಆಗಿ ಚಿತ್ರ ಸ್ಟ್ರಾಂಗ್ ಇದೆ. ರಿಷಿತ್ ಕಥೆ ಹೇಳಲು ಬಂದಾಗ ಎಲ್ಲಿಯೂ ಬೋರ್ ಆಗಲಿಲ್ಲ. ಇಷ್ಟು ಬೇಗ ಮುಗಿಯಿತಾ ಅನಿಸಿತು. ರಿತ್ವಿಕ್ ಅವರ ಜೊತೆ ಕೆಲಸ ಮಾಡಲು ಖುಷಿ ಇದೆ. ಕಥೆ ನಂಬಿದ್ದೇವೆ, ಚರಣ್ ರಾಜ್ ಅವರ ಮ್ಯೂಸಿಕ್ ಇದೆ. ನಾನು ಶೂಟಿಂಗ್ ಗೆ ಹೊರಡಲು ಎಕ್ಸೈಟ್ ಆಗಿದ್ದೇನೆ ಎಂದರು.

# ಬಿಕಿನಿ ಫೋಟೋ ಹಂಚಿಕೊಂಡ ಐಂದ್ರಿತಾ ರೇ





ಕನ್ನಡದ 'ಮನಸಾರೆ' ನಟಿ ಐಂದ್ರಿತಾ ರೇ ಇದೀಗ ಬಿಕಿನಿ ಫೋಟೋ ಹರಿಬಿಟ್ಟು ಪಡ್ಡೆಹುಡುಗರ ನಿದ್ದೆಗೆಡಿಸಿದ್ದಾರೆ. ಬಿಕಿನಿಯಲ್ಲಿ ನಟಿ ಹಾಟ್ ಆಗಿ ಪೋಸ್ ನೀಡಿದ್ದಾರೆ.

ಮತ್ತೊಮ್ಮೆ ಬಿಕಿನಿಯಲ್ಲಿ ಮಸ್ತ್ ಆಗಿ ಕಾಣಿಸಿಕೊಂಡಿದ್ದಾರೆ. ಮಳೆಗಾಲ ಬಹುತೇಕ ಮುಗಿದಿದೆ ಎಂದು ನೀವು ಭಾವಿಸಿದಾಗ ಎಂದು ನಟಿ ಕ್ಯಾಪ್ಷನ್ ನೀಡಿದ್ದಾರೆ. ನಟಿಯ ಲುಕ್‌ಗೆ ಸೋ ಬ್ಯೂಟಿಫುಲ್, ಯೂ ಲುಕ್ಕಿಂಗ್ ಲೈಕ್ ಎ ವಾವ್ ಎಂದು ನೆಟ್ಟಿಗರು ಬಣ್ಣಿಸಿದ್ದಾರೆ.

ಅಂದಹಾಗೆ, ಐಂದ್ರಿತಾ ರೇ ಇದೀಗ ಹೇಳಿಕೊಳ್ಳುವಂತಹ ಸಿನಿಮಾ ಅವಕಾಶಗಳು ಸಿಗುತ್ತಿಲ್ಲ. ಇತ್ತೀಚೆಗೆ ನೀಡಿದ ಸಂದರ್ಶನವೊಂದರಲ್ಲಿ ಅವರು ಮದುವೆಯಾದ್ಮೇಲೆ ನನಗೆ ಸಿನಿಮಾ ಆಫರ್ಸ್ ಕಮ್ಮಿಯಾಗಿದೆ. ನನಗೆ ಸಿನಿಮಾಗಳು ಸಿಕ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದರು.

'ಮೆರವಣಿಗೆ' ಸಿನಿಮಾದಲ್ಲಿ ಪ್ರಜ್ವಲ್ ದೇವರಾಜ್‌ಗೆ ಬೆಂಗಾಳಿ ಬೆಡಗಿ ಐಂದ್ರಿತಾ ರೇ ನಾಯಕಿಯಾಗಿ ನಟಿಸಿದರು. ಬಳಿಕ ಸುದೀಪ್, ದುನಿಯಾ ವಿಜಯ್, ದಿಗಂತ್, ಪುನೀತ್ ರಾಜ್ ಕುಮಾರ್ ಸಿನಿಮಾಗಳಿಗೂ ನಾಯಕಿಯಾಗಿ ನಟಿಸಿ ಸೈ ಎನಿಸಿಕೊಂಡರು.

ಅದಷ್ಟೇ ಅಲ್ಲ, ಭಾವ್ರೈ, ಮೇ ಜರೂರ್ ಆವುಂಗಾ ಸೇರಿದಂತೆ ಕೆಲವು ಸಿನಿಮಾಗಳಲ್ಲಿಯೂ ಮನಸಾರೆ ಬೆಡಗಿ ನಾಯಕಿಯಾಗಿ ನಟಿಸಿದ್ದಾರೆ.

ಇನ್ನೂ ಬೇಡಿಕೆ ಇರುವಾಗಲೇ 2018ರಲ್ಲಿ ದಿಗಂತ್ ಜೊತೆ ನಟಿ ಹಸೆಮಣೆ ಏರಿದರು. ಮದುವೆಯಾದ್ಮೇಲೆ ಇಬ್ಬರೂ ಜೊತೆಯಾಗಿ 'ಕ್ಷಮಿಸಿ ನಿಮ್ಮ ಖಾತೆಯಲ್ಲಿ ಹಣವಿಲ್ಲ' ಚಿತ್ರದಲ್ಲಿ ನಟಿಸಿರು. ಇದರ ಬಹುತೇಕ ಚಿತ್ರೀಕರಣ ಮಲೆನಾಡು ಶಿವಮೊಗ್ಗದಲ್ಲಿ ಶೂಟ್ ಮಾಡಲಾಗಿತ್ತು.

# ಶತಕ ಸಿಡಿಸಿದ ಅಶ್ವಿನ್



ಟೀಮ್ ಇಂಡಿಯಾ ಹಾಗೂ ಬಾಂಗ್ಲಾದೇಶ ತಂಡಗಳ ನಡುವೆ ಚೆನ್ನೈನ ಚೆಪಾಕ್ ಕ್ರೀಡಾಂಗಣದಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ ಆರ್.ಅಶ್ವಿನ್ ಶತಕ ಸಿಡಿಸಿ ತಂಡವನ್ನು ಪಾರು ಮಾಡಿದ್ದಾರೆ.

ಕೇವಲ 108 ಎಸೆತಗಳಲ್ಲಿ 100 ರನ್ ಸಿಡಿಸುವ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ 6ನೇ ಶತಕ ಸಿಡಿಸಿದರು. 144 ರನ್‌ಗಳಿಗೆ 6 ವಿಕೆಟ್ ಕಳೆದು ಕೊಂಡಿದ್ದಾಗ ಕಣಕ್ಕಿಳಿದ ಅಶ್ವಿನ್ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದರು. 10 ಬೌಂಡರಿ ಹಾಗೂ 2 ಸಿಕ್ಸರ್ ಸಿಡಿಸುವ ಮೂಲಕ ತಂಡವನ್ನು ಮೇಲಕ್ಕೆ ಎತ್ತಿದ್ದರು. ಈ ಮೂಲಕ ತವರು ನೆಲದಲ್ಲಿ ಎರಡನೇ ಶತಕ ಸಿಡಿಸಿದರು.

ಅಶ್ವಿನ್ ಮತ್ತು ಜಡೇಜಾ ಮುರಿಯದ 7ನೇ ವಿಕೆಟಿಗೆ 227 ಎಸೆತಗಳಲ್ಲಿ 195 ರನ್ ಜೊತೆಯಾಟವಾಡಿದರು. ಅಂತಿಮವಾಗಿ ಭಾರತ ಮೊದಲ ದಿನದ ಅಂತ್ಯಕ್ಕೆ 6 ವಿಕೆಟ್ ನಷ್ಟಕ್ಕೆ 339 ರನ್ ಗಳಿಸಿದೆ. ಅಶ್ವಿನ್ 102 ರನ್(112 ಎಸೆತ, 10 ಬೌಂಡರಿ, 2 ಸಿಕ್ಸ್), ರವೀಂದ್ರ ಜಡೇಜಾ ಔಟಾಗದೇ 86 ರನ್ (117 ಎಸೆತ, 10 ಬೌಂಡರಿ, 2 ಸಿಕ್ಸ್) ಸಿಡಿಸಿದರು. ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಶುಭ್‌ಮನ್ ಗಿಲ್ ಅವರಂತಹ ಬ್ಯಾಟ್ಸ್‌ಮನ್‌ಗಳು 10 ಓವರ್‌ಗಳೊಳಗೆ ಪೆವಿಲಿಯನ್ ಸೇರಿಕೊಂಡರು. ಮತ್ತೊಂದೆಡೆ 8ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದ ಆರ್.ಅಶ್ವಿನ್, ಬಾಂಗ್ಲಾ ಬೌಲರ್‌ಗಳ ಬೆವರಿಳಿಸಿ ಶತಕ ಸಿಡಿಸಿ ಮಿಂಚಿದ್ದಾರೆ.

# 147 ವರ್ಷಗಳ ಟೆಸ್ಟ್ ಇತಿಹಾಸದಲ್ಲಿ ಯಾರು ಮಾಡದ ಸಾಧನೆ ಮಾಡಿದ ಜೈಸ್ವಾಲ್



ಬಾಂಗ್ಲಾದೇಶ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಮೊದಲ ದಿನದಾಟದಲ್ಲಿ ಸತತ ವಿಕೆಟ್‌ಗಳ ಪತನದ ನಡುವೆಯೂ ಅರ್ಧಶತಕದ ಇನ್ನಿಂಗ್ಸ್ ಕಟ್ಟಿದ ಜೈಸ್ವಾಲ್ ಮತ್ತೊಮ್ಮೆ ತಂಡವನ್ನು ಸಂಕಷ್ಟದಿಂದ ಪಾರು ಮಾಡಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 118 ಎಸೆತಗಳನ್ನು ಎದುರಿಸಿದ ಜೈಸ್ವಾಲ್ 56 ರನ್‌ಗಳ ಮಹತ್ವದ ಇನ್ನಿಂಗ್ಸ್ ಆಡಿದರು. ಈ ಇನ್ನಿಂಗ್ಸ್ ಮೂಲಕ ಅವರು ಕಳೆದ 147 ವರ್ಷಗಳಲ್ಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ಯಾರು ಮಾಡದ ಸಾಧನೆಯನ್ನು ಮಾಡಿದ್ದಾರೆ.

ಬಾಂಗ್ಲಾದೇಶ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ 56 ರನ್‌ಗಳ ಇನ್ನಿಂಗ್ಸ್ ಆಡಿದ ಜೈಸ್ವಾಲ್, 147 ವರ್ಷಗಳ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ, ಅದರಲ್ಲೂ ತವರು ನೆಲದಲ್ಲಿ ತಮ್ಮ ಮೊದಲ 10 ಇನ್ನಿಂಗ್ಸ್‌ಗಳಲ್ಲಿ 750 ಕ್ಕೂ ಹೆಚ್ಚು ರನ್ ಗಳಿಸಿದ ಮೊದಲ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಈ ಹಿಂದೆ ಈ ದಾಖಲೆ ವೆಸ್ಟ್ ಇಂಡೀಸ್‌ನ ಜಾರ್ಜ್ ಹ್ಯಾಡ್ಲಿ ಹೆಸರಿನಲ್ಲಿತ್ತು. ಅವರು 1935 ರಲ್ಲಿ 747 ರನ್ ಬಾರಿಸುವ ಮೂಲಕ ಈ ದಾಖಲೆಯನ್ನು ತನ್ನ ಖಾತೆಗೆ ಹಾಕಿಕೊಂಡಿದ್ದರು.

ಇದಲ್ಲದೆ ಯಶಸ್ವಿ ಜೈಸ್ವಾಲ್ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ಈ ಸೀಸನ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಎರಡನೇ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ ಅಂದರೆ ಮೂರನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ ಜೈಸ್ವಾಲ್ ಇದುವರೆಗೆ ಆಡಿರುವ 10 ಪಂದ್ಯಗಳ 17 ಇನ್ನಿಂಗ್ಸ್‌ಗಳಲ್ಲಿ 67.75 ಸರಾಸರಿಯಲ್ಲಿ 1084 ರನ್ ಗಳಿಸಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿರುವ ಇಂಗ್ಲೆಂಡ್‌ನ ದಿಗ್ಗಜ ಬ್ಯಾಟ್ ಜೋ ರೂಟ್, ಈ ಆವೃತ್ತಿಯಲ್ಲಿ ಆಡಿರುವ 16 ಪಂದ್ಯಗಳಲ್ಲಿ 53.76 ಸರಾಸರಿಯಲ್ಲಿ 1398 ರನ್ ಗಳಿಸಿದ್ದಾರೆ. ಮೂರನೇ ಸ್ಥಾನದಲ್ಲಿದ್ದಾರುವ ಇಂಗ್ಲೆಂಡ್‌ನ ಮತ್ತೊಬ್ಬ ಬ್ಯಾಟ್ ಬೆನ್ ಡಕೆಟ್ ಇದುವರೆಗೆ 1028 ರನ್ ಗಳಿಸಿದ್ದಾರೆ.

ಹಾಗೆಯೇ ಬಾಂಗ್ಲಾದೇಶ ವಿರುದ್ಧದ ಈ ಅರ್ಧಶತಕ ಯಶಸ್ವಿ ಜೈಸ್ವಾಲ್ ಅವರ ಟೆಸ್ಟ್ ವೃತ್ತಿಜೀವನದ8ನೇ ಫಿಫ್ಟಿ ಪ್ಲಸ್ ಇನ್ನಿಂಗ್ಸ್ ಆಗಿದೆ. ಇದರೊಂದಿಗೆ ಜೈಸ್ವಾಲ್, 10 ಟೆಸ್ಟ್ ಪಂದ್ಯಗಳಲ್ಲಿ ಅಧಿಕ ಬಾರಿ ಫಿಫ್ಟಿ ಪ್ಲಸ್ ಇನ್ನಿಂಗ್ಸ್ ಆಡಿದ ಮೂರನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಈ ಹಿಂದೆ ಸದಾಗೋಪನ್ ರಮೇಶ್ ಈ ಸಾಧನೆ ಮಾಡಿದ್ದು, ಇದೀಗ ಜೈಸ್ವಾಲ್ ಅವರನ್ನು ಸರಿಗಟ್ಟಿದ್ದಾರೆ.

ಇನ್ನು 10 ಟೆಸ್ಟ್‌ಗಳ ನಂತರ, ಅಧಿಕ ಬಾರಿ ಫಿಫ್ಟಿ ಪ್ಲಸ್ ಇನ್ನಿಂಗ್ಸ್ ಆಡಿದ ಭಾರತದ ಆಟಗಾರರ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿರುವ ಸುನಿಲ್ ಗವಾಸ್ಕರ್ ಅವರು 9 ಬಾರಿ ಫಿಫ್ಟಿ ಪ್ಲಸ್ ಸ್ಕೋರ್ ಕಲೆಹಾಕಿದ್ದಾರೆ. ಒಂದು ವೇಳೆ ಜೈಸ್ವಾಲ್ ಚೆನ್ನೈ ಟೆಸ್ಟ್‌ನ ಎರಡನೇ ಇನ್ನಿಂಗ್ಸ್‌ನಲ್ಲಿ ಮತ್ತೊಂದು ಫಿಫ್ಟಿ ಪ್ಲಸ್ ಇನ್ನಿಂಗ್ಸ್ ಆಡಿದರೆ, ಗವಾಸ್ಕರ್ ಅವರ ದಾಖಲೆಯನ್ನು ಸರಿಗಟ್ಟಲಿದ್ದಾರೆ

ಇದುವರೆಗೆ ಟೆಸ್ಟ್ ಕ್ರಿಕೆಟ್‌ನಲ್ಲಿ ಕೇವಲ 17 ಟೆಸ್ಟ್ ಇನ್ನಿಂಗ್ಸ್‌ಗಳನ್ನು ಆಡಿರುವ ಜೈಸ್ವಾಲ್, ಇದರಲ್ಲಿ 3 ಶತಕ ಮತ್ತು 5 ಅರ್ಧ ಶತಕಗಳನ್ನು ಸಿಡಿಸಿದ್ದಾರೆ. ಈ ಪೈಕಿ ಎರಡು ದ್ವಿಶತಕಗಳಿವೆ. ಜೈಸ್ವಾಲ್ ಇದುವರೆಗೆ 17 ಟೆಸ್ಟ್ ಇನ್ನಿಂಗ್ಸ್‌ಗಳಲ್ಲಿ 67.75 ಸರಾಸರಿಯಲ್ಲಿ 1084 ರನ್ ಗಳಿಸಿದ್ದಾರೆ. ಅವರ ಸ್ಟ್ರೈಕ್ ರೇಟ್ ಕೂಡ 69ರ ಆಸುಪಾಸಿನಲ್ಲಿದೆ.

**ಹೆಚ್‌ಡಿಕೆ, ಬಿಎಸ್‌ವೈಯಿಂದ ಜಂಟಿ ಡಿನೋಟಿಫೈ**

# ಕಾಂಗ್ರೆಸ್ ಸಚಿವರಿಂದ ಗಂಭೀರ ಆರೋಪ



**ಬೆಂಗಳೂರು:**ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಮಾಜಿ ಸಿಎಂ ಬಿ.ಎಸ್ .ಯಡಿಯೂರಪ್ಪ ವಿರುದ್ಧ ಮತ್ತೆ ಡಿನೋಟಿಫಿಕೇಶನ್ ಆರೋಪ ಕೇಳಿಬಂದಿದೆ. 2007ರಲ್ಲಿ ಬೆಂಗಳೂರಿನ ಗಂಗೇನಹಳ್ಳಿಯ 1.11 ಎಕರೆ ಭೂಮಿಯನ್ನು ಸತ್ತವರ ಹೆಸರಲ್ಲಿ ಕುಮಾರಸ್ವಾಮಿ ಮತ್ತು ಯಡಿಯೂರಪ್ಪ ಜಂಟಿಯಾಗಿ ಡಿನೋಟಿಫೈ ಮಾಡಿಸಿದ್ದರು ಎಂದು ಕಾಂಗ್ರೆಸ್ ಆರೋಪಿಸಿದೆ.

ಜಂಟಿಯಾಗಿ ಸುದ್ದಿಗೋಷ್ಠಿ ನಡೆಸಿದ ಸಚಿವರಾದ ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್, ಸಂತೋಷ್ ಲಾಡ್ 2015ರಲ್ಲಿ ಲೋಕಾಯುಕ್ತದಲ್ಲಿ ಕೇಸ್ ದಾಖಲಾದರೂ ಈವರೆಗೂ ತನಿಖೆ ಪೂರ್ತಿಯಾಗಿಲ್ಲ. 2021ರಿಂದ ಲೋಕಾಯುಕ್ತದಲ್ಲಿ ಈ ಕೇಸ್ ವಿಚಾರದಲ್ಲಿ ಯಾವುದೇ ಪ್ರಗತಿಯಾಗಿಲ್ಲ ಎಂದು ಕಿಡಿಕಾರಿದರು.

**ಕಾಂಗ್ರೆಸ್ ಸಚಿವರ ಆರೋಪ ಏನು?:** 1976 ರಲ್ಲಿ ಗಂಗೇನಹಳ್ಳಿಯಲ್ಲಿ ಬಿಡಿಎ ನೋಟಿಫಿಕೇಶನ್ ಆಗಿದೆ. ಅದರಲ್ಲಿ 1.11 ಎಕ್ರೆ ಜಾಗ ಡಿನೋಟಿಫೈ ಮಾಡಲು 30 ವರ್ಷದ ನಂತರ ಅರ್ಜಿ ಸಲ್ಲಿಸಲಾಗಿದೆ. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಡಿನೋಟಿಫೈಗೆ ರಾಜಶೇಖರಯ್ಯ ಎಂಬವರು ಅರ್ಜಿ ಸಲ್ಲಿಸಿದ್ದರು. ಆದರೆ ಈ ಜಮೀನಿಗೂ ರಾಜಶೇಖರಯ್ಯಗೂ ಯಾವುದೇ ಸಂಬಂಧ ಇಲ್ಲ.

ಸಿಎಂ ಆಗಿದ್ದ ಕುಮಾರಸ್ವಾಮಿ ಅವರು ಡಿನೋಟಿಫಿಕೇಶನ್‌ಗೆ ಸೂಚನೆ ಕೊಡುತ್ತಾರೆ. ಸೆಪ್ಟೆಂಬರ್ 11, 2007 ರಲ್ಲಿ ಇದೇ ಜಮೀನನ್ನು ಅನಿತಾ ಕುಮಾರಸ್ವಾಮಿ ತಾಯಿ ವಿಮಲಾ ಅವರಿಗೆ ಜಿಪಿಎ ಮಾಡಲಾಗಿದೆ. ಜಿಪಿಎ ರಾಜಶೇಖರಯ್ಯ ಮಾಡಿಸಿಕೊಳ್ಳದೇ ಮೂಲ ಮಾಲೀಕರ 21 ಮಂದಿ ವಾರಸುದಾರರಿಂದ ಆಗುತ್ತದೆ. ನಂತರ ಆ ಭೂಮಿ ಕುಮಾರಸ್ವಾಮಿ ಬಾಮೈದ ಚನ್ನಪ್ಪ ಎಂಬುವವರ ಹೆಸರಿಗೆ ರಿಜಿಸ್ಟ್ರರ್ ಆಗುತ್ತದೆ.

2008ರಲ್ಲಿ ಸಿಎಂ ಆಗಿದ್ದ ಬಿಎಸ್ ಯಡಿಯೂರಪ್ಪನವರು ಡಿನೋಟಿಫೈಯಿಂದ ಕೈಬಿಡಿ ಅಂತ ಷರಾ ಬರೆಯುತ್ತಾರೆ. ಈ ರಾಜಶೇಖರಯ್ಯ ಎಂಬ ಬೇನಾಮಿ ಅರ್ಜಿ ಮೇರೆಗೆ ಈ ಷರಾ ಬರಯಲಾಗಿದೆ. 2015ರಲ್ಲಿ ಈ ಸಂಬಂಧ ಲೋಕಾಯುಕ್ತದಲ್ಲಿ ದೂರು ದಾಖಲಾಗುತ್ತದೆ. 2021 ರಲ್ಲಿ ಲೋಕಾಯುಕ್ತದಲ್ಲಿ ಕೊನೆಯ ಬಾರಿಗೆ ವಿಚಾರಣೆ ನಡೆಯುತ್ತದೆ.

ಕುಮಾರಸ್ವಾಮಿ ಇದ್ದಾಗ ಡಿನೋಟಿಫೈ ಮಾಡಲು ಮುಂದಾಗಿ ಯಡಿಯೂರಪ್ಪ ಸಿಎಂ ಆದಾಗ ಮಾಡಲು ಶಿಫಾರಸ್ಸು ಮಾಡಲಾಗಿದೆ. ಅಂದಿನ ಮುಖ್ಯ ಕಾರ್ಯದರ್ಶಿ ಡಿನೋಟಿಫೈ ಮಾಡಲು ಬರುವುದಿಲ್ಲ ಎಂದರೂ ಡಿನೋಟಿಫೈ ಮಾಡಲಾಗಿದೆ.

**ಜಗನ್ ಅವಧಿಯಲ್ಲಿ ಹಿಂದೂಗಳ ಭಾವನೆಗಳಿಗೆ ಧಕ್ಕೆ!**

# ತಿರುಪತಿ ಲಡ್ಡುಗೆ ಪ್ರಾಣಿಗಳ ಕೊಬ್ಬು ಬಳಕೆ

**ಹೈದರಾಬಾದ್:**ತಿರುಪತಿ ದೇವಸ್ಥಾನದಲ್ಲಿ ಭಕ್ತರಿಗೆ ಪ್ರಸಾದವಾಗಿ ನೀಡಿದ ಲಡ್ಡುಗಳಲ್ಲಿ ಪ್ರಾಣಿಗಳ ಕೊಬ್ಬು ಮತ್ತು ಮೀನಿನ ಎಣ್ಣೆ ಇದೆ ಎಂದು ಲ್ಯಾಬ್ ವರದಿ ದೃಢಪಡಿಸಿದೆ.



ಹಿಂದಿನ ವೈಎಸ್ ಆರ್ ಕಾಂಗ್ರೆಸ್ ಸರ್ಕಾರ ತಿರುಪತಿ ಲಡ್ಡು ತಯಾರಿಕೆಗೆ ಪ್ರಾಣಿಗಳ ಕೊಬ್ಬು ಮತ್ತು ಗುಣಮಟ್ಟವಿಲ್ಲದ ಪದಾರ್ಥಗಳನ್ನು ಬಳಸಿತ್ತು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಆರೋಪಿಸಿದ್ದರು.

ಈ ಆರೋಪದ ಬೆನ್ನಲ್ಲೇ ಪಶು ಆಹಾರ ಮತ್ತು ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಪರೀಕ್ಷಿಸುವ ಖಾಸಗಿ ಪ್ರಯೋಗಾಲಯ NDDB CALFನ ವರದಿಯು ತಿರುಪತಿ ಲಡ್ಡುಗಳನ್ನು ತಯಾರಿಸಲು ಬಳಸುವ ತುಪ್ಪದ ಮಾದರಿಗಳಲ್ಲಿ ತಾಳೆ ಎಣ್ಣೆ, ಮೀನಿನ ಎಣ್ಣೆ ಪತ್ತೆಯಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಿದೆ.

**ಲ್ಯಾಬ್ ವರದಿಯಲ್ಲಿ ಏನಿದೆ?:** ಲಡ್ಡುಗೆ ಬಳಸಿದ ತುಪ್ಪದಲ್ಲಿ ಮೀನೆಣ್ಣೆ,ಹಂದಿಯ ಕೊಬ್ಬು, ತಾಳೆ ಎಣ್ಣೆ ಕೊಬ್ಬು, ತೆಂಗಿನ ಎಣ್ಣೆಯ ಕೊಬ್ಬು ಪತ್ತೆಯಾಗಿದೆ. ಸೋಯಾ, ಸೂರ್ಯಕಾಂತಿ, ಆಲಿವ್, ಹತ್ತಿ ಬೀಜದೆಣ್ಣೆ ಸಿಕ್ಕಿದೆ. ತುಪ್ಪದಲ್ಲಿ ವ್ಹೀಟ್ ಜೆರ್ಮ್ ಆಯಿಲ್, ಮೇಜ್ ಜೆರ್ಮ್ ಆಯಿಲ್ ಪತ್ತೆಯಾಗಿದೆ.

ಸಿಎಂ ಹೇಳಿಕೆಯನ್ನು ಟಿಟಿಡಿ ಭಾಗಶಃ ಒಪ್ಪಿದೆ. ಒಂದು ಕಂಪನಿಯ ತುಪ್ಪದಲ್ಲಿ ವೆಜಿಟೇಬಲ್ ಫ್ಯಾಟ್ ಬೆರೆಸಿರುವುದು ಗೊತ್ತಾಗಿದೆ ಎಂದು ಟಿಟಿಡಿ ಇಓನ್ ಶ್ಯಾಮಲರಾವ್ ಹೇಳಿದ್ದಾರೆ. ಟಿಟಿಡಿ ಮಾಜಿ ಸದಸ್ಯ ಓವಿ ರಮಣ, ಚಂದ್ರಬಾಬು ಹೇಳಿದ್ದೆಲ್ಲಾ ಸತ್ಯ ಎಂದಿದ್ದಾರೆ.

ಜಗನ್ ಸಿಎಂ ಆಗಿದ್ದಾಗ ವಿದೇಶದಿಂದ ಆಮದು ಮಾಡಿಕೊಂಡ ಬೆಣ್ಣೆಯನ್ನು ಲಡ್ಡು ತಯಾರಿಗೆ ಬಳಸಲಾಗುತ್ತಿತ್ತು ಎಂದು ಆಪಾದಿಸಿದ್ದಾರೆ. ಈ ಬಗ್ಗೆ ಸಮಗ್ರ ತನಿಖೆಗೆ ಬಿಜೆಪಿ ಆಗ್ರಹಿಸಿದೆ.

ಆಂಧ್ರಪ್ರದೇಶ ಕಾಂಗ್ರೆಸ್ ಸಮಿತಿ (ಎಪಿಸಿಸಿ) ಅಧ್ಯಕ್ಷೆ ವೈ.ಎಸ್ ಶರ್ಮಿಳಾ ಅವರು ಸಿಹಿ ತಯಾರಿಸಲು ನಿಜವಾಗಿಯೂ ಪ್ರಾಣಿಗಳ ಕೊಬ್ಬನ್ನು ಬಳಸಿದ್ದಾರೆಯೇ ಎಂದು ಖಚಿತಪಡಿಸಿಕೊಳ್ಳಲು ಸಿಬಿಐ ತನಿಖೆಗೆ ಒತ್ತಾಯಿಸಿದ್ದಾರೆ. ನಾಯ್ಡು ಅವರ ಆರೋಪಗಳು ವೆಂಕಟೇಶ್ವರನನ್ನು ಪೂಜ್ಯ ದೇವತೆ ಎಂದು ಪರಿಗಣಿಸುವ ಕೋಟ್ಯಂತರ ಹಿಂದೂಗಳ ಭಾವನೆಗಳಿಗೆ ನೋವುಂಟು ಮಾಡಿದೆ ಎಂದು ಶರ್ಮಿಳಾ ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com